24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 147 | ನವದೆಹಲಿ | ಬೆಲೆ ₹10 | ನವಂಬರ್ 24, 2026 ಮಂಗಳವಾರ

ಒಳಪುಟಗಳಲ್ಲಿ

ಪ್ರಕೃತಿಯ ವಿರುದ್ಧ ನಡೆಯುವ ಯಾವುದೇ ಘಟನೆ ವಿಕೃತಿಯಾಗುತ್ತದೆ: ಸಾಹಿತಿ ಎಸ್.ಜಿ.ಸಿದ್ಧರಾಮಯ್ಯ - ಪು.4

ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಎಐ ಬಲ: ತುರ್ತು ಚಿಕಿತ್ಸೆಗೆ 2.50 ಲಕ್ಷ ರೂ.ವರೆಗೆ ನೆರವು- ಮುಖ್ಯ ಕಾಯದರ್ಶಿ ಶಾಲಿನಿ ರಜನೀಶ್ - ಪು.5

ವಿಜಯಪುರ ಪಟ್ಟಣಕ್ಕೆ ಶೀಘ್ರ ಹೆಚ್ಚುವರಿ ಬಸ್ ವ್ಯವಸ್ಥೆ ಅಧಿಕಾರಿಗಳಿಗೆ ಸಚಿವ ಕೆ.ಎಚ್ ಮುನಿಯಪ್ಪ ಸೂಚನೆ -ಪು.6

ನೀರಿಗಾಗಿ ಹಾಹಾಕಾರ, ನೀರೇ ಬಾರದ ನಲ್ಲಿಗಳಿಗೂ ನಿರಂತರ ಬಿಲ್ ಕಟ್ಟಬೇಕೆ - ಪು.7

ಭಾರತ–ನೇಪಾಳ ಬಾಂಧವ್ಯಕ್ಕೆ ಹೊಸ ಬಲ: 8 ಒಪ್ಪಂದಗಳಿಗೆ ಸಹಿ

ನರೇಂದ್ರ ಮೋದಿ- ಬಾಲೆನ್ ಶಾ ಮಹತ್ವದ ಮಾತುಕತೆ

ನವದೆಹಲಿ, ನ.23: ಭಾರತ ಮತ್ತು ನೇಪಾಳ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ನೇಪಾಳ ಪ್ರಧಾನಿ ಬಾಲೇಂದ್ರ ಶಾ ಮಹತ್ವದ ಮಾತುಕತೆ ನಡೆಸಿದ್ದಾರೆ. ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ನಡೆದ ಉಭಯ ನಾಯಕರ ಸಭೆಯಲ್ಲಿ ವ್ಯಾಪಾರ, ಇಂಧನ, ಮೂಲಸೌಕರ್ಯ, ತಂತ್ರಜ್ಞಾನ, ಭದ್ರತೆ, ಆರೋಗ್ಯ ಮತ್ತು ಅಭಿವೃದ್ಧಿ ಸಹಕಾರ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚೆ ನಡೆದಿದೆ. ಈ ಸಂದರ್ಭದಲ್ಲಿ ಎರಡೂ ದೇಶಗಳ ನಡುವೆ ಎಂಟು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ.



ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಭಾರತ– ನೇಪಾಳ ನಡುವೆ ವಿವಿಧ ಒಪ್ಪಂದಗಳಿಗೆ ಉಭಯ ದೇಶಗಳ ಸಚಿವರು ಎರಡೂ ದೇಶಗಳ ಪ್ರಧಾನಿಗಳಾದ ನರೇಂದ್ರ ಮೋದಿ ಮತ್ತು ಬಾಲೆನ್ ಶಾ ಸಮ್ಮುಖದಲ್ಲಿ ಒಪ್ಪಂದ ವಿನಿಮಯ ಮಾಡಿಕೊಂಡರು

ಭಾರತ ಮತ್ತು ನೇಪಾಳದ ಸಂಬಂಧ ಕೇವಲ ನೆರೆಯ ರಾಷ್ಟ್ರಗಳ ನಡುವಿನ ಸಂಬಂಧವಲ್ಲ. ಅದು ಐತಿಹಾಸಿಕ ನಂಟು, ಸಾಂಸ್ಕೃತಿಕ ಸಾಮ್ಯತೆ, ಪರಸ್ಪರ ನಂಬಿಕೆ ಮತ್ತು ಸ್ನೇಹದ ಮೇಲೆ ನಿಂತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಉಭಯ ದೇಶಗಳ ಸಂತೋಷ ಮತ್ತು ಸವಾಲುಗಳು ಪರಸ್ಪರ ಹಂಚಿಕೊಂಡಿವೆ. ಎರಡೂ ರಾಷ್ಟ್ರಗಳ ಪ್ರಗತಿಯಲ್ಲಿ ಪರಸ್ಪರ ಪಾಲುದಾರರಾಗಿದ್ದೇವೆ ಎಂದು ಅವರು ಪ್ರತಿಪಾದಿಸಿದ್ದಾರೆ.

ನೇಪಾಳದಲ್ಲಿ ಆಗಸ್ಟ್‌ನಲ್ಲಿ ಸಂಭವಿಸಿದ ಭೀಕರ ಪ್ರವಾಹದಿಂದ ಉಂಟಾದ ಜೀವಹಾನಿಗೆ ಮೋದಿ ಸಂತಾಪ ಸೂಚಿಸಿದ್ದಾರೆ. ನೇಪಾಳದ ಪುನರ್‌ನಿರ್ಮಾಣ ಮತ್ತು ದೀರ್ಘಕಾಲೀನ ಅಭಿವೃದ್ಧಿಗೆ ನೆರವಾಗುವ ಉದ್ದೇಶದಿಂದ 24 ಸಾವಿರ ಕೋಟಿ ನೇಪಾಳಿ ರೂ.ಗಳ ಅಭಿವೃದ್ಧಿ ಸಹಕಾರ ಪ್ಯಾಕೇಜ್ ಘೋಷಿಸಿದ್ದಾರೆ. ಪ್ರವಾಹದಿಂದ ಸಂಕಷ್ಟಕ್ಕೀಡಾದ ಕುಟುಂಬಗಳ ಬದುಕು ಸಹಜಸ್ಥಿತಿಗೆ ಮರಳಲು, ಹೊಸ ಅವಕಾಶಗಳನ್ನು ಸೃಷ್ಟಿಸಲು ಹಾಗೂ ಭವಿಷ್ಯದಲ್ಲಿ ವಿಪತ್ತುಗಳನ್ನು ಎದುರಿಸುವ ನೇಪಾಳದ ಸಾಮರ್ಥ್ಯ ಹೆಚ್ಚಿಸಲು ಈ ನೆರವು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ನೇಪಾಳದ ನೂತನ ನಾಯಕತ್ವದೊಂದಿಗೆ ಸಂಬಂಧವನ್ನು ಮತ್ತಷ್ಟು ವಿಸ್ತರಿಸುವ ವಿಶ್ವಾಸ ವ್ಯಕ್ತಪಡಿಸಿರುವ ಮೋದಿ, ಬಾಲೇಂದ್ರ ಶಾ ಅವರ ದೂರದೃಷ್ಟಿ ಮತ್ತು ನೇಪಾಳದ ಭವಿಷ್ಯದ ಅಭಿವೃದ್ಧಿಯ ಬದ್ಧತೆಯನ್ನು ಶ್ಲಾಘಿಸಿದ್ದಾರೆ. ಇದೇ ವೇಳೆ ನೇಪಾಳದಲ್ಲಿ ಹೂಡಿಕೆ ಮಾಡುವಂತೆ ಭಾರತೀಯ ಉದ್ಯಮಿಗಳಿಗೂ ಆಹ್ವಾನ ನೀಡಿದ್ದಾರೆ.

ಮಾತುಕತೆಯ ಬಳಿಕ ಎರಡೂ ದೇಶಗಳ ನಡುವೆ ಎಂಟು ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ಈ ಒಪ್ಪಂದಗಳು ಬಾಹ್ಯಾಕಾಶ ತಂತ್ರಜ್ಞಾನ, ಭದ್ರತೆ, ಪೊಲೀಸ್ ತರಬೇತಿ, ಆಡಳಿತ, ಆರೋಗ್ಯ, ಸಾಂಪ್ರದಾಯಿಕ ವೈದ್ಯಕೀಯ ಪದ್ಧತಿ ಮತ್ತು ಕೃಷಿ ಕ್ಷೇತ್ರಗಳಲ್ಲಿ ಉಭಯ ದೇಶಗಳ ಸಹಕಾರವನ್ನು ವಿಸ್ತರಿಸುವ ಗುರಿ ಹೊಂದಿವೆ.

ನೇಪಾಳ ಪ್ರಧಾನಿ ಬಾಲೇಂದ್ರ ಶಾ ಅವರು ಭಾರತ ನೀಡುತ್ತಿರುವ ನೆರವಿಗೆ ಕೃತಜ್ಞತೆ ವ್ಯಕ್ತಪಡಿಸಿದ್ದು, ನೇಪಾಳದ ಅಭಿವೃದ್ಧಿ ಮತ್ತು ಆರ್ಥಿಕ ಪ್ರಗತಿಯಲ್ಲಿ ಭಾರತೀಯ ಹೂಡಿಕೆದಾರರು ಪಾಲ್ಗೊಳ್ಳುವಂತೆ ಆಹ್ವಾನಿಸಿದ್ದಾರೆ. ಎರಡೂ ದೇಶಗಳ ನಡುವಿನ ಸ್ನೇಹಪರ ಸಂಬಂಧವನ್ನು ಜನಕೇಂದ್ರಿತ ಪಾಲುದಾರಿಕೆಯಾಗಿ ಮತ್ತಷ್ಟು ವಿಸ್ತರಿಸುವ ಅಗತ್ಯವನ್ನೂ ಪ್ರತಿಪಾದಿಸಿದ್ದಾರೆ.

ಪ್ರಮುಖ ಒಪ್ಪಂದಗಳು

- ದಕ್ಷಿಣ ಏಷ್ಯಾ ಉಪಗ್ರಹದ ಬಳಕೆಗಾಗಿ ಉಪಗ್ರಹ ಸಂವಹನ ಜಾಲ ಸ್ಥಾಪನೆಗೆ ಇಸ್ರೋ ಮತ್ತು ನೇಪಾಳದ ಮಾಹಿತಿ ಮತ್ತು ಸಂವಹನ ಸಚಿವಾಲಯದ ನಡುವೆ ಒಪ್ಪಂದ
- ಭಾರತದ ರಾಷ್ಟ್ರೀಯ ವಿಧಿವಿಜ್ಞಾನ ವಿಜ್ಞಾನ ವಿಶ್ವವಿದ್ಯಾಲಯ ಮತ್ತು ನೇಪಾಳ ಪೊಲೀಸ್ ಅಪರಾಧ ತನಿಖಾ ವಿಭಾಗದ ನಡುವೆ ಶೈಕ್ಷಣಿಕ ಹಾಗೂ ಸಂಶೋಧನಾ ಸಹಕಾರ
- ಭಾರತದ ರಾಷ್ಟ್ರೀಯ ರಕ್ಷಣಾ ವಿಶ್ವವಿದ್ಯಾಲಯ ಮತ್ತು ನೇಪಾಳದ ರಾಷ್ಟ್ರೀಯ ಪೊಲೀಸ್ ಅಕಾಡೆಮಿ ನಡುವೆ ಒಪ್ಪಂದ
- ನೇಪಾಳದ ನಾಗರಿಕ ಸೇವಾ ಅಧಿಕಾರಿಗಳ ಸಾಮರ್ಥ್ಯ ವೃದ್ಧಿಗೆ ತರಬೇತಿ ಕಾರ್ಯಕ್ರಮ
- ವೈದ್ಯಕೀಯ ಮತ್ತು ಆರೋಗ್ಯ ಸೇವೆಗಳಲ್ಲಿ ಸಹಕಾರಕ್ಕೆ ಒಪ್ಪಂದ
- ಆಯುರ್ವೇದ ಮತ್ತು ಸಾಂಪ್ರದಾಯಿಕ ವೈದ್ಯ ಪದ್ಧತಿಗಳ ಅಭಿವೃದ್ಧಿಗೆ ಸಹಕಾರ
- ಸುಸ್ಥಿರ ನಗರಾಭಿವೃದ್ಧಿ ಕ್ಷೇತ್ರದಲ್ಲಿ ತಾಂತ್ರಿಕ ಸಹಕಾರ
- ಜಾನುವಾರು ಮತ್ತು ಮೀನುಗಾರಿಕೆ ಕ್ಷೇತ್ರಗಳ ಅಭಿವೃದ್ಧಿಗೆ ಸಹಕಾರ

ಉತ್ತರಪ್ರದೇಶ ಚುನಾವಣೆ; ಮೊದಲ ಸುತ್ತಿನ ಮಾತುಕತೆ ಪೂರ್ಣ

60 ಎ-ಗ್ರೇಡ್ ಕ್ಷೇತ್ರಗಳಿಗೆ ಪಟ್ಟು ಹಿಡಿದ ಕಾಂಗ್ರೆಸ್‌ಗೆ 54 ಕ್ಷೇತ್ರಗಳ ಪಟ್ಟಿ ನೀಡಿದ ಎಸ್‌ಪಿ

ನವದೆಹಲಿ, ನ.23: 2027ರ ಉತ್ತರ ಪ್ರದೇಶ ವಿಧಾನಸಭೆ ಚುನಾವಣೆಗೆ ಸಂಬಂಧಿಸಿದಂತೆ ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್ ನಡುವೆ ಕ್ಷೇತ್ರ ಹಂಚಿಕೆ ಕುರಿತು ದೆಹಲಿಯಲ್ಲಿ ನಡೆದ ಮೊದಲ ಸುತ್ತಿನ ಮಾತುಕತೆ ಪೂರ್ಣಗೊಂಡಿದ್ದು, ಕಾಂಗ್ರೆಸ್‌ಗೆ 54 ಕ್ಷೇತ್ರಗಳ ಪಟ್ಟಿಯನ್ನು ಎಸ್‌ಪಿ ಹಂಚಿಕೊಂಡಿದೆ.

ಉತ್ತರ ಪ್ರದೇಶದ ಒಟ್ಟು 403 ವಿಧಾನಸಭಾ ಕ್ಷೇತ್ರಗಳ ಪೈಕಿ 100ಕ್ಕೂ ಹೆಚ್ಚು ಕ್ಷೇತ್ರಗಳನ್ನು ನೀಡುವಂತೆ ಕಾಂಗ್ರೆಸ್ ಆರಂಭದಲ್ಲಿ ಬೇಡಿಕೆ ಇಟ್ಟಿತ್ತು. ಈ ಪೈಕಿ ಗೆಲ್ಲುವ ಸಾಧ್ಯತೆ ಹೆಚ್ಚಿರುವ 55ರಿಂದ 60 ಎ-ಗ್ರೇಡ್ ಕ್ಷೇತ್ರಗಳ ಮೇಲೆ ಕಾಂಗ್ರೆಸ್ ಆಸಕ್ತಿ ಹೊಂದಿದೆ. ಆದರೆ, ಕಾಂಗ್ರೆಸ್‌ಗೆ 40ರಿಂದ 45 ಕ್ಷೇತ್ರಗಳನ್ನು ನೀಡಲು ಎಸ್‌ಪಿ ಒಲವು ಹೊಂದಿದೆ ಎನ್ನಲಾಗಿತ್ತು. ಇದೀಗ 54 ಕ್ಷೇತ್ರಗಳ ಪಟ್ಟಿಯನ್ನು ಕಾಂಗ್ರೆಸ್‌ಗೆ ನೀಡಿರುವುದು ಕ್ಷೇತ್ರ ಹಂಚಿಕೆ ಮಾತುಕತೆಯಲ್ಲಿ ಮಹತ್ವದ ಬೆಳವಣಿಗೆಯಾಗಿದೆ.

ದೆಹಲಿಯಲ್ಲಿ ಕಾಂಗ್ರೆಸ್ ಸಂಸದ ಪ್ರಮೋದ್ ತಿವಾರಿ ನಿವಾಸದಲ್ಲಿ ನಡೆದ ಸಭೆಯಲ್ಲಿ ಎರಡೂ ಪಕ್ಷಗಳ ತಲಾ ನಾಲ್ವರು ನಾಯಕರು ಭಾಗವಹಿಸಿದ್ದರು. ಕಾಂಗ್ರೆಸ್ ಪರವಾಗಿ ಪ್ರಮೋದ್ ತಿವಾರಿ, ರಾಜೇಂದ್ರ ಪಾಲ್ ಗೌತಮ್, ಆರಾಧನಾ ಮಿಶ್ರಾ ಮತ್ತು ಇಮ್ರಾನ್ ಮಸೂದ್ ಭಾಗವಹಿಸಿದ್ದರು. ಎಸ್‌ಪಿ ಪರವಾಗಿ ರಾಮಗೋಪಾಲ್ ಯಾದವ್ ಸೇರಿ ನಾಲ್ವರು ನಾಯಕರು ಮಾತುಕತೆಯಲ್ಲಿ ಪಾಲ್ಗೊಂಡಿದ್ದರು. ಸಭೆ ಬಳಿಕ ಮಾತನಾಡಿದ ಎಸ್‌ಪಿ ಸಂಸದ ರಾಮಗೋಪಾಲ್ ಯಾದವ್, ಮಾತುಕತೆ ವೇಳೆ ಎರಡೂ ಪಕ್ಷಗಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿವೆ. ಮುಂದಿನ ಸುತ್ತಿನ ಮಾತುಕತೆಯ ಬಳಿಕ ಕ್ಷೇತ್ರ ಹಂಚಿಕೆ ಕುರಿತು ಅಂತಿಮ ನಿರ್ಧಾರ ಕೈಗೊಳ್ಳುವ ನಿರೀಕ್ಷೆಯಿದೆ. ಅಮೇಠಿ, ರಾಯ್‌ಬರೇಲಿ ಮತ್ತು ಸಹರಾನ್‌ಪುರ ಕ್ಷೇತ್ರಗಳ ಹಂಚಿಕೆ ವಿಚಾರವೂ ಪ್ರಮುಖವಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ತಯಾರಿಕಾ ಸಾಮರ್ಥ್ಯ ಹೆಚ್ಚಿಸುವ ಟೊಯೋಟಾ ಉದ್ದೇಶಕ್ಕೆ

ಕಂಪನಿ ಹಿರಿಯ ಅಧಿಕಾರಿಗಳ ಜತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಭೆ

ಹೊಸ ಹೂಡಿಕೆ ಹಾಗೂ ಭವಿಷ್ಯದ ಸಾರಿಗೆ ವ್ಯವಸ್ಥೆಗಳ ಕುರಿತು ಚರ್ಚೆ: ಟೊಯೋಟಾ ಘಟಕಕ್ಕೆ ಭೇಟಿ

ಮೊಟೊಮಾಚಿ (ಜಪಾನ್), ನ.23: ಕರ್ನಾಟಕದಲ್ಲಿ ವಾಹನ ತಯಾರಿಕಾ ಸಾಮರ್ಥ್ಯವನ್ನು ಮುಂದಿನ ದಿನಗಳಲ್ಲಿ 10 ಲಕ್ಷಕ್ಕೆ ಹೆಚ್ಚಿಸಲು ಉದ್ದೇಶಿಸಿರುವ ಜಪಾನ್‌ನ ಪ್ರಮುಖ ವಾಹನ ತಯಾರಿಕಾ ಸಂಸ್ಥೆ ಟೊಯೋಟಾಗೆ ರಾಜ್ಯ ಸರ್ಕಾರದಿಂದ ಸಂಪೂರ್ಣ ಸಹಕಾರ ನೀಡುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ.

ಜಪಾನ್‌ನ ಮೊಟೊಮಾಚಿಯ ಟೊಯೋಟಾ ಮೋಟಾರ್ ಕಾರ್ಪೊರೇಷನ್‌ನ ಕೇಂದ್ರ ಕಚೇರಿ ಹಾಗೂ ತಯಾರಿಕಾ ಘಟಕದಲ್ಲಿ ಕಂಪನಿಯ ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸೋಮವಾರ ಸಭೆ ನಡೆಸಿದರು.

ಟೊಯೋಟಾ ಕಂಪನಿಯ ಅಧ್ಯಕ್ಷ, ವ್ಯವಸ್ಥಾಪಕ ನಿರ್ದೇಶಕ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಸಕಾಜು ಯೋಶಿಮುರಾ ನೇತೃತ್ವದ ನಿಯೋಗದೊಂದಿಗೆ ನಡೆದ ಸಭೆಯಲ್ಲಿ ಕರ್ನಾಟಕದಲ್ಲಿ ಕಂಪನಿಯ ತಯಾರಿಕಾ ಸಾಮರ್ಥ್ಯ ವಿಸ್ತರಣೆ, ಹೊಸ ಹೂಡಿಕೆಗಳು, ವಾಹನ ತಯಾರಿಕಾ ಸಾಮರ್ಥ್ಯ ಹೆಚ್ಚಳ ಹಾಗೂ ಭವಿಷ್ಯದ ಸಾರಿಗೆ ವ್ಯವಸ್ಥೆಗಳ ಕುರಿತು ಚರ್ಚೆ ನಡೆಯಿತು.ಕರ್ನಾಟಕವು ಟೊಯೋಟಾದ ಪ್ರಮುಖ ಉತ್ಪಾದನಾ ಕೇಂದ್ರ ಹಾಗೂ ರಫ್ತುತಾಣವಾಗಿ ಗುರುತಿಸಿಕೊಂಡಿದೆ ಎಂದು ಕಂಪನಿಯ ನಿಯೋಗ ತಿಳಿಸಿತು. ರಾಜ್ಯದಲ್ಲಿ ಈಗಾಗಲೇ ಹೊಂದಿರುವ ಕೈಗಾರಿಕಾ ಘಟಕಗಳು ಮತ್ತು ಕಾರ್ಯಾಚರಣೆಗಳ ಬಗ್ಗೆಯೂ ವಿವರಿಸಿತು.

ಕರ್ನಾಟಕದಲ್ಲಿ ತಯಾರಿಕಾ ಘಟಕಗಳ ವಿಸ್ತರಣೆ ಹಾಗೂ ಹೊಸ ಹೂಡಿಕೆಗಳಿಗೆ ರಾಜ್ಯ ಸರ್ಕಾರ ಅಗತ್ಯವಿರುವ ನೆರವು ಒದಗಿಸಲಿದೆ. ಕಾರ್ಯ ಚಟುವಟಿಕೆಗಳನ್ನು ಮತ್ತಷ್ಟು ವಿಸ್ತರಿಸುವಂತೆ ಟೊಯೋಟಾ ನಾಯಕತ್ವಕ್ಕೆ ಮುಖ್ಯಮಂತ್ರಿ ಶಿವಕುಮಾರ್ ಆಹ್ವಾನ ನೀಡಿದರು

ಇದೇ ಸಂದರ್ಭದಲ್ಲಿ ಟೊಯೋಟಾ ಕೈಕಾನ್ ವಸ್ತುಸಂಗ್ರಹಾಲಯಕ್ಕೂ ನಿಯೋಗ ಭೇಟಿ ನೀಡಿತು. ಕಂಪನಿಯ ತಯಾರಿಕಾ ತತ್ವ, ತಾಂತ್ರಿಕ ಆವಿಷ್ಕಾರಗಳು ಮತ್ತು ಭವಿಷ್ಯದ ಸಾರಿಗೆ ವ್ಯವಸ್ಥೆಯ ಕುರಿತ ಪರಿಕಲ್ಪನೆಗಳನ್ನು ವೀಕ್ಷಿಸಿತು. ಟೊಯೋಟಾ ನಿಯೋಗದಲ್ಲಿ ಅಧ್ಯಕ್ಷ ಹಾಗೂ ಸಿಇಒ ಮಸಕಾಜು ಯೋಶಿಮುರಾ, ಮುಖ್ಯ ಕಾರ್ಯತಂತ್ರ ಅಧಿಕಾರಿ ಮತ್ತು ನಿರ್ದೇಶಕ ಜಿ. ಶಂಕರ, ಉಪಾಧ್ಯಕ್ಷ ಎ. ರಮೇಶ್‌ರಾವ್ ಸೇರಿದಂತೆ ಭಾರತ ಮತ್ತು ಮಧ್ಯಪ್ರಾಚ್ಯ ವಿಭಾಗದ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಇದೇ ವೇಳೆ ಟೊಯೋಟಾದ 'ಗ್ಲೋಬಲ್ ಸ್ಕಿಲ್–ಅಪ್' ಕಾರ್ಯಕ್ರಮದಡಿ ಜಪಾನ್‌ನಲ್ಲಿ ವಿಶೇಷ ತರಬೇತಿ ಪಡೆಯುತ್ತಿರುವ ಟೊಯೋಟಾ ಬಿಡದಿ ಘಟಕದ ಪ್ರಶಿಕ್ಷಣಾರ್ಥಿಗಳೊಂದಿಗೆ ಸಂವಾದ ನಡೆಸಿದರು.

> ಕೈಗಾರಿಕೆಗಳನ್ನು ಆಕರ್ಷಿಸಿ ಉದ್ಯೋಗಗಳನ್ನು ಸೃಷ್ಟಿಸುವುದು ಮತ್ತು ಬೆಂಗಳೂರಿನಿಂದ ಹೊರಗೆ ಆರ್ಥಿಕ ಅವಕಾಶಗಳನ್ನು ವಿಸ್ತರಿಸುವ ಮೂಲಕ ಕರ್ನಾಟಕದ ಪ್ರತಿಯೊಂದು ಪ್ರದೇಶವನ್ನೂ ರಾಜ್ಯದ ಬೆಳವಣಿಗೆಯ ಪಯಣದಲ್ಲಿ ಪಾಲುದಾರರನ್ನಾಗಿ ಮಾಡುವುದು ಸರ್ಕಾರದ ಹೂಡಿಕೆ ಅಭಿಯಾನದ ಗುರಿಯಾಗಿದೆ.
> –ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ



ಜಪಾನ್ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೋಮವಾರ ಟೊಯೋಟಾ ಘಟಕಕ್ಕೆ ಭೇಟಿ ನೀಡಿ ಅಲ್ಲಿನ ಕಾರ್ಯಗಳನ್ನು ವೀಕ್ಷಿಸಿದರು.

ಕರ್ನಾಟಕದಲ್ಲೂ ಹೈಬ್ರಿಡ್ ಟ್ಯಾಕ್ಸಿ ಪರಿಚಯಿಸುವಂತೆ ಮುಖ್ಯಮಂತ್ರಿ ಸಲಹೆ

ಸಾರ್ವಜನಿಕ ಸಾರಿಗೆ ವ್ಯವಸ್ಥೆಯಲ್ಲಿ ಜಪಾನ್‌ನಲ್ಲಿ ಬಳಕೆಯಲ್ಲಿರುವ ಟೊಯೋಟಾದ ಹೈಬ್ರಿಡ್ ಟ್ಯಾಕ್ಸಿ ಮಾದರಿಯನ್ನು ಕರ್ನಾಟಕದಲ್ಲಿಯೂ ಪರಿಚಯಿಸುವಂತೆ ಡಿ.ಕೆ. ಶಿವಕುಮಾರ್ ಸಲಹೆ ನೀಡಿದರು. ಕಡಿಮೆ ನಿರ್ವಹಣಾ ವೆಚ್ಚ ಮತ್ತು ಹೈಬ್ರಿಡ್ ತಂತ್ರಜ್ಞಾನ ಹೊಂದಿರುವ ಈ ವಾಹನವನ್ನು ಟ್ಯಾಕ್ಸಿ ಸೇವೆಗೆ ಬಳಸುವುದರಿಂದ ಪ್ರಯಾಣಿಕರಿಗೆ ಆರ್ಥಿಕವಾಗಿ ಅನುಕೂಲವಾಗಲಿದೆ ಎಂಬ ಆಶಯ ವ್ಯಕ್ತಪಡಿಸಿದರು. ಇದರೊಂದಿಗೆ ಪರ್ಯಾಯ ಇಂಧನ ಬಳಕೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಫ್ಲೆಕ್ಸ್ ಇಂಧನ ವಾಹನಗಳನ್ನು ಕರ್ನಾಟಕದಲ್ಲಿ ಪರಿಚಯಿಸುವ ಸಾಧ್ಯತೆಗಳು ಹಾಗೂ ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಯ ಪ್ರಯೋಜನಗಳ ಬಗ್ಗೆಯೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚರ್ಚಿಸಿದರು.



ಜಪಾನ್ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಚಿವ ಎಂ.ಬಿ. ಪಾಟೀಲ್, ಕರ್ನಾಟಕ ಸರ್ಕಾರದ ಕೈಗಾರಿಕಾ ಕಾರ್ಯದರ್ಶಿ ಸೆಲ್ವಕುಮಾರ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್, ಸಿಎಂ ಉಪಕಾರ್ಯದರ್ಶಿ ಯತೀಶ್, ಕೈಗಾರಿಕಾ ಇಲಾಖೆ ಆಯುಕ್ತೆ ಖುಷ್ಬೂ ಅವರೊಂದಿಗೆ ಸೋಮವಾರ ಟೊಯೋಟಾ ಘಟಕಕ್ಕೆ ಭೇಟಿ ನೀಡಿ ವಿವಿಧ ವಿಭಾಗಗಳನ್ನು ವೀಕ್ಷಿಸಿದರು.

ಬರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಿ, ವಿಳಂಬ ಮಾಡದೆ ಪರಿಹಾರ ಬಿಡುಗಡೆ ಮಾಡಿ



■ ಕೇಂದ್ರಕ್ಕೆ ಮತ್ತೆ ಪತ್ರ ಬರೆದ ಡಾ.ಜಿ.ಪರಮೇಶ್ವರ್

ಬೆಂಗಳೂರು, ನ.23: ಕರ್ನಾಟಕದಲ್ಲಿ ಉಂಟಾಗಿರುವ ತೀವ್ರ ಬರ ಪರಿಸ್ಥಿತಿಗೆ ಕೇಂದ್ರ ಸರ್ಕಾರ ತಕ್ಷಣ ಸ್ಪಂದಿಸಬೇಕು. ರಾಜ್ಯ ಸರ್ಕಾರ ಕೇಳಿರುವ ಬರ ಪರಿಹಾರದ ಹಣವನ್ನು ವಿಳಂಬ ಮಾಡದೆ ಬಿಡುಗಡೆ ಮಾಡಬೇಕು ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ ಅವರು ಮತ್ತೊಮ್ಮೆ ಒತ್ತಾಯಿಸಿದ್ದಾರೆ.

ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಸೋಮವಾರ ಪ್ರತ್ಯೇಕ ಪತ್ರ ಬರೆದಿರುವ ಅವರು, ರಾಜ್ಯದ ರೈತರು ಎದುರಿಸುತ್ತಿರುವ ಸಂಕಷ್ಟದ ಬಗ್ಗೆ ಕೇಂದ್ರ ಸರ್ಕಾರ ಇದುವರೆಗೂ ಅಗತ್ಯ ಕ್ರಮ ಕೈಗೊಳ್ಳದಿರುವುದಕ್ಕೆ ಬೇಸರ ವ್ಯಕ್ತಪಡಿಸಿದ್ದಾರೆ. ಬರ ಪರಿಸ್ಥಿತಿ ಖುದ್ದಾಗಿ ವಿವರಿಸಲು ಭೇಟಿಗೂ ಸಮಯ ಕೇಳಿದ್ದಾರೆ.

ಈ ಹಿಂದೆ ಬರೆದಿದ್ದ ಪತ್ರಗಳನ್ನು ಉಲ್ಲೇಖಿಸಿರುವ ಅವರು, ಕರ್ನಾಟಕ ರಾಜ್ಯ ಸರ್ಕಾರ ಸಲ್ಲಿಸಿರುವ ಪರಿಷ್ಕೃತ ಬರ ಪರಿಹಾರದ ಮನವಿಗೆ ಹೆಚ್ಚಿನ ಆದ್ಯತೆ ನೀಡಿ, ಕೇಳಿರುವ ಆರ್ಥಿಕ ನೆರವಿಗೆ ಶೀಘ್ರ ಅನುಮೋದನೆ ನೀಡಬೇಕು. ಅಗತ್ಯ ಹಣವನ್ನು ಆದಷ್ಟು ಬೇಗ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಪ್ರಧಾನಮಂತ್ರಿಗಳು ಹಾಗೂ ಇಬ್ಬರು ಕೇಂದ್ರ ಸಚಿವರನ್ನು ಡಾ. ಜಿ.ಪರಮೇಶ್ವರ ಅವರು ಒತ್ತಾಯಿಸಿದ್ದಾರೆ.

ಪ್ರಪಂ

ನಿತ್ಯ ಪಂಚಾಂಗ 24.11.2026 ಮಂಗಳವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ಪೂರ್ಣಿಮಾ, ಕೃತ್ತಿಕ ನಕ್ಷತ್ರ, ಗುರುನಾನಕ್ ಜಯಂತಿ, ಗೌರೀ ಹುಣ್ಣಿಮೆ, ಧರ್ಮಸಾವರ್ಣಿ ಮನ್ವಾದಿ, ಕಾರ್ತಿಕೇಯ ಸ್ವಾಮಿ ದರ್ಶನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಹಿರಿಯೂರು ಉಪಚುನಾವಣೆ ಅಭ್ಯರ್ಥಿ ಆಯ್ಕೆಗೆ ಆತುರವಿಲ್ಲ: ಎಚ್.ಡಿ.ಕುಮಾರಸ್ವಾಮಿ

ಎನ್‌ಡಿಎ ಮೈತ್ರಿಕೂಟದಿಂದ ಸಮರ್ಥ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕೆನ್ನುವುದಷ್ಟೇ ನನ್ನ ಆಶಯ

ಬೆಂಗಳೂರು, ನ.23: ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಬಗ್ಗೆ ಆತುರವೇನು ಇಲ್ಲ. ಆದರೆ ಎನ್‌ಡಿಎ ಮೈತ್ರಿಕೂಟದಿಂದ ಸಮರ್ಥ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕು ಎಂಬುದಷ್ಟೇ ನನ್ನ ಆದ್ಯತೆ ಎಂದು ಕೇಂದ್ರದ ಬೃಹತ್ ಕೈಗಾರಿಕಾ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕನಕಪುರದಲ್ಲಿ ಅಭಿವೃದ್ಧಿ ಮಾಡಿದಂತೆ ಹಿರಿಯೂರನ್ನು ದತ್ತು ತೆಗೆದುಕೊಂಡು ಅಭಿವೃದ್ಧಿ ಮಾಡುತ್ತಾರಂತೆ ಎಂದು ವ್ಯಂಗ್ಯವಾಡಿದರು. ಉಪಚುನಾವಣೆ ನಡೆಯುತ್ತೋ ಇಲ್ಲವೋ ಗೊತ್ತಿಲ್ಲ. ಬಿಜೆಪಿ, ಜೆಡಿಎಸ್ ಮೈತ್ರಿ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗುವುದು. ಈ ವಿಚಾರದಲ್ಲಿ ಯಾವುದೇ ಪ್ರತಿಷ್ಠೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಹೃದಯ ಮಿಡಿಯಬೇಕಿತ್ತಲ್ಲವೇ

ಡಿ.ಕೆ.ಶಿವಕುಮಾರ್ ಅವರದು ಹೂವಿನಂತ ಹೃದಯ ಅಲ್ಲವೇ. ಇಷ್ಟು ಹೊತ್ತಿಗೆ ಆಶಾ ಕಾರ್ಯಕರ್ತೆಯರ ಕಷ್ಟಕ್ಕೆ ಮಿಡಿಯಬೇಕಿತ್ತು.

ಬಹುಶಃ ಜಪಾನ್‌ನ ಮೂರು ದಿನಗಳ ಪ್ರವಾಸ ಮುಗಿಸಿ ವಾಪಸ್ ಬಂದ ಬಳಿಕ ಅವರ ಕಷ್ಟಕ್ಕೆ ಮಿಡಿಯಬಹುದು. ಒಂದು ವಾರದಿಂದ ಆಶಾ ಕಾರ್ಯಕರ್ತೆಯರು ಪ್ರತಿಭಟನೆ ಮಾಡುತ್ತಿದ್ದಾರೆ. ಬಾಯಿ ಮಾತಿನಲ್ಲಿ ಅನುಕಂಪ ನೀಡಿದರೆ ಸಾಲದು ಬಡಮಕ್ಕಳ



ಹಾಗೂ ಮಹಿಳೆಯರ ಆರೋಗ್ಯ ಕಾಪಾಡುವ ಜವಾಬ್ದಾರಿ ಅವರ ಮೇಲಿದೆ. ಭರವಸೆ ನೀಡಿದಂತೆ ರಾಜ್ಯ ಸರ್ಕಾರ ಗೌರವಧನವನ್ನು 15 ಸಾವಿರಕ್ಕೆ ಹೆಚ್ಚಿಸಬೇಕು.

ನುಡಿದಂತೆ ನಡೆಯುವ ಸರ್ಕಾರವೇ ಅಲ್ಲವೇ ಎಂದು ಎಚ್.ಡಿ. ಕುಮಾರಸ್ವಾಮಿ ವ್ಯಂಗ್ಯವಾಡಿದರು.

ಜೆಡಿಎಸ್ ಶಾಸಕಾಂಗ ಸಭೆ:

ಮುಂಬರುವ ವಿಧಾನಮಂಡಲ ಅಧಿವೇಶನದ ಹಿನ್ನೆಲೆಯಲ್ಲಿ ಜೆಡಿಎಸ್ ಶಾಸಕಾಂಗ ಸಭೆ ನಡೆಸಲಾಗುವುದು. ಅಗತ್ಯವಿದ್ದರೆ ಬಿಜೆಪಿ ನಾಯಕರೊಂದಿಗೂ ಸಭೆ ನಡೆಸುತ್ತೇವೆ ಎಂದು ತಿಳಿಸಿದರು. ಮತಾಂತರ ನಿಷೇಧ ಕಾಯ್ದೆ ಹಾಗೂ ಗೋಹತ್ಯೆ ನಿಷೇಧ ಕಾಯ್ದೆ ವಾಪಸ್ ಪಡೆಯುವ ವಿಚಾರವಾಗಿ ಶ್ರೀರಾಮನ ಸೇನೆಯ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಭೇಟಿ ನೀಡಿರುವ ಕುರಿತು ಕೇಳಿದ ಪ್ರಶ್ನೆಗೆ, ಅವರೊಂದಿಗೆ ಚರ್ಚೆ ಮಾಡುತ್ತೇವೆ ಎಂದು ಹೇಳಿದರು.

ಲಂಡನ್ ಕೋರ್ಟ್‌ಗೆ ಹೋಗುತ್ತಾರಾ?

ಕೇಂದ್ರ ಸರ್ಕಾರ ಬರ ಪರಿಹಾರ ನೀಡಿಲ್ಲ ಎಂಬ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಹೋಗುತ್ತದೆಯೋ ಅಥವಾ ಲಂಡನ್ ಕೋರ್ಟ್‌ಗೆ ಹೋಗುತ್ತದೆಯೋ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು. ನೈಸ್ ಯೋಜನೆಯ ವ್ಯಾಜ್ಯ ಬಂದಾಗ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ನಲ್ಲಿ ತೀರ್ಮಾನ ಆಗದಿದ್ದರೆ ಲಂಡನ್ ಕೋರ್ಟ್‌ಗೆ ಹೋಗಬೇಕು ಎಂಬ ನಿರ್ಧಾರವನ್ನು ಕಾಂಗ್ರೆಸ್‌ನವರೇ ಸರ್ಕಾರದಲ್ಲಿ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದರು. ಈಗ ಬರ ಪರಿಹಾರದ ವಿಚಾರದಲ್ಲಿ ಕೇಂದ್ರ ಸರ್ಕಾರ ಸರಿಯಾದ ಕ್ರಮ ಕೈಗೊಳ್ಳದಿದ್ದರೆ ರಾಜ್ಯ ಸರ್ಕಾರ ಲಂಡನ್ ಕೋರ್ಟ್‌ಗೆ ಹೋಗಬಹುದೇ ಎಂದು ಎಚ್‌ಡಿಕೆ ಪ್ರಶ್ನಿಸಿದರು.

ರವಿ ಹಂಜ್-ಬಸವ ಮಂಟಪ ಕೃತಿ ಚ್ಯುತಿ: ಸಿ.ಸೋಮಶೇಖರ್ ತೀವ್ರ ಖಂಡನೆ.



ಬೆಂಗಳೂರು, ನ.23: ಅಮೆರಿಕದಲ್ಲಿ ವಾಸಿಸುವ ರವಿ ಹಂಜ್ ಇತ್ತೀಚೆಗೆ ಬಿಡುಗಡೆ ಮಾಡಿದ ತಮ್ಮ ಬಸವ ಮಂಟಪ ಪುಸ್ತಕದಲ್ಲಿ ಬಸವಣ್ಣನವರ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ. "ವಿಶ್ವವಾಣಿ" ಚಾನಲ್‌ಗೆ ನೀಡಿದ ಸಂದರ್ಶನದಲ್ಲಿ, ರವಿ ಹಂಜ್, ಬಸವಣ್ಣನವರ "ಕಲಬೇಡ, ಕೊಲಬೇಡ" ಎಂಬ ಕವಿತೆಯನ್ನು ಅತ್ಯಂತ ಕೆಳಮಟ್ಟದಲ್ಲಿ ಅರ್ಥೈಸಿದ್ದಾರೆ ಮತ್ತು ಇಡೀ ಕವಿತೆಯನ್ನು ಹಿಟ್ ಮಾಡಿದ್ದಾರೆ. ಅವರಿಗೆ ನೀಡಲಾದ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಮಿತಿಗೆ ದುರುಪಯೋಗಪಡಿಸಿಕೊಳ್ಳಲಾಗಿದೆ ಎಂಬುದು ತುಂಬಾ ವಿಷಾದಕರ.

'ದಯೆಯೇ ಧರ್ಮದ ಮೂಲ' ಎಂಬ ಮಾನವ ಆದರ್ಶ ಸಂದೇಶದ ಆಧಾರದ ಮೇಲೆ ಬಸವಣ್ಣನವರು ನಿರ್ಮಿಸಲು ಬಯಸಿದ ಸಮಾನ ಸಮಾಜದ ಕಲ್ಪನೆಯು ಇಡೀ ಜಗತ್ತಿಗೆ ಮಾದರಿಯಾಗಿದೆ. ಕಾಯಕ, ದಾಸೋಹ, ಮಹಿಳಾ ಸಮಾನತೆ, ಜಾತ್ಯತೀತ ಸಮಾಜದ ಕಲ್ಪನೆ ಮತ್ತು ಮೂಢನಂಬಿಕೆಗಳ ವಿರುದ್ಧ ಅವರ ಹೋರಾಟ ಐತಿಹಾಸಿಕವಾಗಿತ್ತು. "ಕಲಬೇಡ, ಕೊಲಬೇಡ" ಎಂಬ ಗಾದೆಯ ಮೂಲಕ ಇಡೀ ಜಗತ್ತಿಗೆ ಜೀವನದ ಸಂವಿಧಾನವನ್ನು ನೀಡಿದ ಬಸವಣ್ಣನವರನ್ನು ತಮ್ಮ ಕೃತಿ ಬಸವ ಮಂಟಪದಲ್ಲಿ ಖಳನಾಯಕನಂತೆ ಚಿತ್ರಿಸಿರುವ ರವಿ ಹಂಜ್, ಈ ಕೃತಿಯ ರಚನೆಯ ಮೂಲಕ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದ್ದಾರೆ. ಇಡೀ ಪ್ರಪಂಚವು ಭಕ್ತಿ ಮತ್ತು ಗೌರವದಿಂದ ಪೂಜಿಸುವ ಬಸವಣ್ಣ ನವರ ವ್ಯಕ್ತಿತ್ವವನ್ನು ನಾಶಮಾಡಲು ಮತ್ತು ಅವರ ಪಾತ್ರವನ್ನು ನಾಶಮಾಡಲು ರವಿ ಹಮ್ಮಣ್ಣ ಅವರ ಪ್ರಯತ್ನಗಳು ಬಹಳವಾಗಿ ಕದಡಿವೆ.

ಕರ್ನಾಟಕ ಸರ್ಕಾರವು ಸಮಾನತೆಯ ಮಹಾನ್ ತತ್ವಜ್ಞಾನಿ ಹರಿಕಾರ ಬಸವಣ್ಣನವರನ್ನು ಸಾಂಸ್ಕೃತಿಕ ವೀರ" ಎಂದು ಘೋಷಿಸಿದ ಹಿನ್ನೆಲೆಯಲ್ಲಿ, ರವಿಹಂಜ್ ಅವರ ಬಸವ ಮಂಟಪವನ್ನು ಸಾರ್ವಜನಿಕವಾಗಿ ಪ್ರಕಟಿಸಲಾಯಿತು. ರವಿಹಂಜ್ ಅವರ ವಿರುದ್ಧ ಹಿಂಪಡೆಯುವ ಆದೇಶ ಹೊರಡಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ನಾವು ಈ ಮೂಲಕ ವಿನಂತಿಸುತ್ತೇವೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ.ಸಿ.ಸೋಮಶೇಖರ್ ತಿಳಿಸಿದ್ದಾರೆ.

ಆಶಾ ಕಾರ್ಯಕರ್ತೆಯರು ಬೀದಿಯಲ್ಲಿ ಸಿಎಂ ಜಪಾನ್‌ನಲ್ಲಿ: ಬಿವೈವಿ ವ್ಯಂಗ್ಯ

ಬೆಂಗಳೂರು, ನ.23: ರಾಜ್ಯದಲ್ಲಿ ರೈತರು ಸಂಕಷ್ಟದಲ್ಲಿದ್ದು, ಆಶಾ ಕಾರ್ಯಕರ್ತೆಯರು ತಮ ನ್ಯಾಯಯುತ ವೇತನಕ್ಕಾಗಿ ಪ್ರತಿಭಟನೆ ನಡೆಸುತ್ತಿದ್ದರೂ ಮುಖ್ಯಮಂತ್ರಿ ಹಾಗೂ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವಿಜಯೇಂದ್ರ, 'ಮುಖ್ಯಮಂತ್ರಿಗಳು ಜಪಾನ್‌ನಲ್ಲಿ ಅಧಿಕಾರಿಗಳು ಮೋಜು ಮಸ್ತಿಯಲ್ಲಿ', 'ರಾಜ್ಯದ ರೈತರು ಸಂಕಷ್ಟದಲ್ಲಿ, ಆಶಾ ಕಾರ್ಯಕರ್ತೆಯರು ಬೀದಿಯಲ್ಲಿ', ಎಂದು ಟೀಕಿಸಿದ್ದಾರೆ. ರಾಜ್ಯದಲ್ಲಿ ರೈತರು ಸಂಕಷ್ಟದಲ್ಲಿದ್ದು, ಆಶಾ ಕಾರ್ಯಕರ್ತೆಯರು ತಮ ನ್ಯಾಯಯುತ ವೇತನಕ್ಕಾಗಿ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ಹಾಗೂ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಮ ದಂಡಿನೊಂದಿಗೆ ಜಪಾನ್



ಪ್ರವಾಸದಲ್ಲಿದ್ದು, ರಾಜ್ಯಕ್ಕೆ ಬಂಡವಾಳ ಹೂಡಿಕೆಯ ಹೊಳೆಯನ್ನೇ ಹರಿಸಲಿದ್ದಾರೆ ಎಂದು ವ್ಯಂಗ್ಯವಾಡಿರುವ ವಿಜಯೇಂದ್ರ, ಎಷ್ಟು ಬಂಡವಾಳವನ್ನು ರಾಜ್ಯಕ್ಕೆ ತರುತ್ತಾರೋ ಆ ಶಿವನೇ ಬಲ್ಲ ಎಂದು ಹೇಳಿದ್ದಾರೆ.

ಅಧಿಕಾರಿಗಳಿಗೆ ಹೇಳುವವರೂ ಇಲ್ಲ, ಕೇಳುವವರೂ ಇಲ್ಲ ಎಂಬಂತಾಗಿದೆ. ಜನಸಾಮಾನ್ಯರ ಸಂಕಷ್ಟಗಳು ಸರ್ಕಾರದ ಗಮನಕ್ಕೆ ಬರುತ್ತಿಲ್ಲ ಎಂದು ಆರೋಪಿಸಿರುವ ಅವರು, ರೈತರು ಬೆಳೆದ ಬೆಳೆಗೆ ನೀರಿಲ್ಲದೆ ಪರದಾಡುತ್ತಿರುವ ಸಂದರ್ಭದಲ್ಲಿ ಗದಗ ಜಿಲ್ಲಾಧಿಕಾರಿ ಕುಣಿದು ಕುಪ್ಪಳಿಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

ಏಷ್ಯಾದ ಪ್ರಬಲ ರಾಷ್ಟ್ರಗಳ ಪಟ್ಟಿ: ಭಾರತಕ್ಕೆ 3ನೇ ಸ್ಥಾನ

* ನರೇಂದ್ರ ಮೋದಿ ಏಷ್ಯಾದ 2ನೇ ಅತ್ಯಂತ ಪರಿಣಾಮಕಾರಿ ನಾಯಕ
* ಅಮೆರಿಕಕ್ಕೆ ಮೊದಲ ಸ್ಥಾನ, ಚೀನಾಗೆ ಎರಡನೇ ಸ್ಥಾನ
* 2026ರ ಏಷ್ಯಾ ಪವರ್ ಇಂಡೆಕ್ಸ್ ವರದಿಯಲ್ಲಿ ಉಲ್ಲೇಖ

ನವದೆಹಲಿ, ನ.23: ಏಷ್ಯಾದ ಪ್ರಬಲ ರಾಷ್ಟ್ರಗಳ ಪಟ್ಟಿಯಲ್ಲಿ ಭಾರತ ತನ್ನ ಮೂರನೇ ಸ್ಥಾನವನ್ನು ಉಳಿಸಿಕೊಂಡಿದೆ. 2026ನೇ ಸಾಲಿನ ಏಷ್ಯಾ ಪವರ್ ಇಂಡೆಕ್ಸ್‌ನಲ್ಲಿ ಭಾರತ 40.5 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆದಿದೆ. ಅಮೆರಿಕ ಮೊದಲ ಸ್ಥಾನದಲ್ಲಿದ್ದರೆ, ಚೀನಾ ಎರಡನೇ ಸ್ಥಾನದಲ್ಲಿದೆ. ಜಪಾನ್ ನಾಲ್ಕನೇ ಹಾಗೂ ರಷ್ಯಾ ಐದನೇ ಸ್ಥಾನದಲ್ಲಿವೆ.

ಆಸ್ಟ್ರೇಲಿಯಾದ ಲೋವಿ ಇನ್‌ಸ್ಟಿಟ್ಯೂಟ್ ಬಿಡುಗಡೆ ಮಾಡಿರುವ 2026ರ ಏಷ್ಯಾ ಪವರ್ ಇಂಡೆಕ್ಸ್ ವರದಿಯಲ್ಲಿ ಈ ಅಂಶ ಬಹಿರಂಗವಾಗಿದೆ. ಏಷ್ಯಾದ 27 ದೇಶಗಳು ಮತ್ತು ಪ್ರಾಂತ್ಯಗಳ ಆರ್ಥಿಕ ಸಾಮರ್ಥ್ಯ, ಸೇನಾ ಶಕ್ತಿ, ರಾಜತಾಂತ್ರಿಕ ಪ್ರಭಾವ, ರಕ್ಷಣಾ ಸಹಕಾರ ಹಾಗೂ ಸಾಂಸ್ಕೃತಿಕ ಪ್ರಭಾವ ಸೇರಿದಂತೆ ವಿವಿಧ ಮಾನದಂಡಗಳ ಆಧಾರದಲ್ಲಿ ಈ ಶ್ರೇಯಾಂಕ ಸಿದ್ಧಪಡಿಸಲಾಗಿದೆ.

ಈ ಬಾರಿಯ ವರದಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ನಾಯಕತ್ವಕ್ಕೂ ಮಹತ್ವದ ಮನ್ನಣೆ ದೊರೆತಿದೆ. ಏಷ್ಯಾದ ಅತ್ಯಂತ ಪರಿಣಾಮಕಾರಿ ಪ್ರಾದೇಶಿಕ ನಾಯಕರ ಪಟ್ಟಿಯಲ್ಲಿ ಮೋದಿ ಎರಡನೇ ಸ್ಥಾನ ಪಡೆದಿದ್ದಾರೆ.

ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಮೊದಲ ಸ್ಥಾನದಲ್ಲಿದ್ದಾರೆ. ಕಳೆದ ಬಾರಿಗಿಂತ ಮೋದಿ ನಾಯಕತ್ವದ ಮೌಲ್ಯಮಾಪನದಲ್ಲಿ ಮೂರು ಸ್ಥಾನಗಳ ಸುಧಾರಣೆಯಾಗಿದೆ.

ಭಾರತದ ರಾಜತಾಂತ್ರಿಕ ಪ್ರಭಾವ 70.3 ಅಂಕಗಳೊಂದಿಗೆ ಪ್ರಮುಖ ಶಕ್ತಿಯಾಗಿ ಗುರುತಿಸಿಕೊಂಡಿದೆ. ರಕ್ಷಣಾ ಸಹಕಾರ ಕ್ಷೇತ್ರದಲ್ಲೂ ಭಾರತ ಪ್ರಗತಿ ಸಾಧಿಸಿದ್ದು, 18.6 ಅಂಕಗಳೊಂದಿಗೆ ಎರಡು ಸ್ಥಾನ ಮೇಲೇರಿ ಒಂಬತ್ತನೇ ಸ್ಥಾನ ಪಡೆದಿದೆ. ಆಗ್ನೇಯ ಏಷ್ಯಾ ರಾಷ್ಟ್ರಗಳಿಗೆ ಬ್ರಹ್ಮೋಸ್ ಕ್ಷಿಪಣಿಗಳ ಮಾರಾಟ ಹಾಗೂ ಪ್ರಾದೇಶಿಕ ರಕ್ಷಣಾ ಸಹಕಾರ ಹೆಚ್ಚಳ ಇದಕ್ಕೆ ಪ್ರಮುಖ ಕಾರಣಗಳಾಗಿವೆ.

ಸಾಂಸ್ಕೃತಿಕ ಪ್ರಭಾವದಲ್ಲೂ ಭಾರತ 43.8 ಅಂಕಗಳನ್ನು ಗಳಿಸಿದೆ. ಸಾಂಸ್ಕೃತಿಕ ಪ್ರಸರಣ, ಮಾಹಿತಿ ವಿನಿಮಯ ಹಾಗೂ ಜನರ ನಡುವಿನ ಸಂಪರ್ಕದಲ್ಲಿ ಸುಧಾರಣೆ ಕಂಡುಬಂದಿದೆ. ಭವಿಷ್ಯದ ಸಂಪನ್ಮೂಲಗಳ ವಿಭಾಗದಲ್ಲಿ 56.2 ಅಂಕಗಳನ್ನು ಗಳಿಸಿರುವುದು ಭಾರತದ ದೀರ್ಘಕಾಲೀನ ಬೆಳವಣಿಗೆಯ ಸಾಧ್ಯತೆಯನ್ನು ಸೂಚಿಸಿದೆ.

ಆದರೆ, ಭಾರತದ ಆರ್ಥಿಕ ಸಾಮರ್ಥ್ಯದ ಅಂಕಗಳು ಸ್ವಲ್ಪ ಕುಸಿತ ಕಂಡಿವೆ. ಈ ವಿಭಾಗದಲ್ಲಿ 26.4 ಅಂಕಗಳನ್ನು ಗಳಿಸಿದೆ. ರೂಪಾಯಿ ಮೌಲ್ಯದಲ್ಲಿನ ಇಳಿಕೆ, ಅಂತಾರಾಷ್ಟ್ರೀಯ ಹಣಕಾಸು ನಿಧಿಯ ಆರ್ಥಿಕ ಲೆಕ್ಕಾಚಾರದ ವಿಧಾನದಲ್ಲಿನ ಬದಲಾವಣೆ ಹಾಗೂ ವಿದೇಶಿ ಹೂಡಿಕೆಯಲ್ಲಿ ಸುಮಾರು 20 ಶತಕೋಟಿ ಡಾಲರ್ ಕುಸಿತ ಇದಕ್ಕೆ ಕಾರಣಗಳೆಂದು ವರದಿ ಉಲ್ಲೇಖಿಸಿದೆ.

ಭಾರತ ಮತ್ತು ಚೀನಾ ನಡುವಿನ ಒಟ್ಟಾರೆ ಶಕ್ತಿಯ ಅಂತರ 2018ರಲ್ಲಿ ಏಷ್ಯಾ ಪವರ್ ಇಂಡೆಕ್ಸ್ ಆರಂಭವಾದ ನಂತರ ಇದೇ ಮೊದಲ ಬಾರಿಗೆ ಅತ್ಯಂತ ಕಡಿಮೆಯಾಗಿದೆ. ಆದರೂ ಚೀನಾದ ಒಟ್ಟಾರೆ ಶಕ್ತಿ ಭಾರತದ ಶಕ್ತಿಗಿಂತ ಶೇ.80ರಷ್ಟು ಹೆಚ್ಚಿದೆ ಎಂದು ವರದಿ ತಿಳಿಸಿದೆ.

ಟಿಕೆಟ್‌ರಹಿತ ಪ್ರಯಾಣ 5737 ಪ್ರಯಾಣಿಕರಿಗೆ ದಂಡ

ಬೆಂಗಳೂರು, ನ.23: ಅಕ್ಟೋಬರ್–2026ರ ಮಾಹೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ 46742 ವಾಹನಗಳನ್ನು ತನಿಖೆಗೊಳಪಡಿಸಿ 4701 ಪ್ರಕರಣಗಳನ್ನು ಪತ್ತೆಹಚ್ಚಿ, 5737 ಟಿಕೆಟ್‌ರಹಿತ ಪ್ರಯಾಣಿಕರಿಂದ 9,75,911/–ರೂಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿರುತ್ತಾರೆ. ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ1,44,921 ರೂ.ಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ, ಹಾಗೂ ತಪ್ಪಿತಸ್ಥರ ವಿರುದ್ಧ ಇಲಾಖಾ ರೀತ್ಯಾ ಸೂಕ್ತ ಶಿಸ್ತಿನ ಕ್ರಮವನ್ನುಜರುಗಿಸಲಾಗಿದೆ. ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು, ಬಸ್ಸಿನಲ್ಲಿ ಪ್ರಯಾಣಿಸುವಾಗ ಸರಿಯಾದ ಟಿಕೇಟ್/ಪಾಸ್ ಪಡೆದು ಪ್ರಯಾಣ ಮಾಡುವಂತೆ, ನಿಗಮವು ಈ ಮೂಲಕ ಪ್ರಯಾಣಿಕರಲ್ಲಿ ಕೋರುತ್ತದೆ.



ಮಾಗಡಿ ಕ್ಷೇತ್ರದ ಕೂಟಗಲ್ ಹೋಬಳಿಯ ಯರೇಹಳ್ಳಿ ಗ್ರಾಮದಲ್ಲಿ ನೂತನ ಕರ್ನಾಟಕ ಪಬ್ಲಿಕ್ ಶಾಲೆಗೆ (ಕೆಪಿಎಸ್) ಶಂಕುಸ್ಥಾಪನೆ ಹಾಗೂ ಕೂಟಗಲ್ ವ್ಯಾಪ್ತಿಯಲ್ಲಿನ 50 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಶಿಕ್ಷಣ ಸಚಿವ ಮಧುಬಂಗಾರಪ್ಪ, ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ, ಬಮೂಲ್ ಅಧ್ಯಕ್ಷರು ಹಾಗೂ ಮಾಜಿ ಸಂಸದ ಡಿ.ಕೆ.ಸುರೇಶ್, ಪಶುಸಂಗೋಪನಾ ಸಚಿವ ಪುಟ್ಟರಂಗಶೆಟ್ಟಿ, ವಿಧಾನ ಪರಿಷತ್ ಸದಸ್ಯ ಎಸ್.ರವಿ, ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಪಿ. ನಾಗರಾಜ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ರಾಜು ಎಚ್.ವಿ, ಮಾಜಿ ವಿಧಾನ ಪರಿಷತ್ ಸದಸ್ಯ ಸಿ.ಎಂ. ಲಿಂಗಪ್ಪ ಪಾಲ್ಗೊಂಡಿದ್ದರು.

2028ರ ಚುನಾವಣೆಯಲ್ಲಿ ಸಿದ್ದರಾಮಯ್ಯ ಸ್ಪರ್ಧಿಸದಿದ್ದರೆ ಕಾಂಗ್ರೆಸ್ ಮಾರಕ: ಕೆ.ಎನ್.ರಾಜಣ್ಣ

ಬೆಂಗಳೂರು, ನ.23: 2028ರ ವಿಧಾನಸಭೆ ಚುನಾವಣೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಅವರು ಸ್ಪರ್ಧೆ ಮಾಡದೆ ಇದ್ದರೆ ಕಾಂಗ್ರೆಸ್‌ಗೆ ಮಾರಕವಾಗಲಿದೆ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ಅಭಿಪ್ರಾಯ ಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಸಿದ್ದರಾಮಯ್ಯನವರು ನಾನು ಚುನಾವಣೆಗೆ ಸ್ಪರ್ಧೆ ಮಾಡುವುದಲ್ಲ ಎಂದು ಹೇಳಿಕೊಳ್ಳುವುದು ಕಾಂಗ್ರೆಸ್ ಪಕ್ಷಕ್ಕೆ ಹೊಡೆತ ಎಂದಿದ್ದಾರೆ.

ಸಿದ್ದರಾಮಯ್ಯ ಅವರ ನಿಲುವುಅಹಿಂದಾ ವರ್ಗಗಳ ಸಂಘಟನೆಗೂ ಕೂಡ ಮಾರಕ ಎಂಬುವುದರ ಬಗ್ಗೆ ಎರಡನ

ಸಿಎಂ ಮಾತಿನ ಮೇಲೆ ವಿಶ್ವಾಸವಿಡಿ ನಿಶ್ಚಿತವಾಗಿಯೂ ಸಮಸ್ಯೆ ಬಗೆಹರಿಯಲಿದೆ



ತಾಳ್ಮೆಯಿಂದಿರುವಂತೆ ಆಶಾ ಕಾರ್ಯಕರ್ತೆಯರಿಗೆ ಡಿಸಿಎಂ ಡಾ.ಜಿ. ಪರಮೇಶ್ವರ್ ಮನವಿ

ಬೆಂಗಳೂರು, ನ.23: ಆಶಾ ಕಾರ್ಯಕರ್ತೆಯರಿಗೆ ಸಿಎಂ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ಅವರ ಮಾತಿನ ಮೇಲೆ ವಿಶ್ವಾಸ ವಿಡಬೇಕಲ್ಲವೇ. ವಿಶ್ವಾಸ ವಿಲ್ಲದಿದ್ದರೆ ಸಮಸ್ಯೆಗಳನ್ನು ಬಗೆಹರಿಸುವುದು ಹೇಗೆ ಎಂದು ಡಿಸಿಎಂ ಜಿ. ಪರಮೇಶ್ವರ್ ಪ್ರಶ್ನಿಸಿದರು.

ಸದಾಶಿವನಗರ ನಿವಾಸದ ಬಳಿ ಮಾತನಾಡಿ, ಈಗಾಗಲೇ ಸಿಎಂ ಪ್ರತಿಭಟನಾಕಾರರ ಪ್ರತಿನಿಧಿಗಳನ್ನು ಭೇಟಿ ಮಾಡಿ, ಅವರ ಸಮಸ್ಯೆಗಳನ್ನು ಖುದ್ದಾಗಿ ಬಗೆಹರಿಸುವ ಭರವಸೆ ನೀಡಿದ್ದಾರೆ. ನನ್ನನ್ನು ನಂಬಿ, ಸರ್ಕಾರದ ಮೇಲೆ ವಿಶ್ವಾಸವಿಡಿ ಎಂದು ಹೇಳಿದ್ದಾರೆ. ನ.25ರಂದು ಮುಖ್ಯಮಂತ್ರಿ ಪ್ರತಿಭಟನಕಾರರನ್ನು ಭೇಟಿ ಮಾಡಿ ಚರ್ಚೆ ನಡೆಸಲಿದ್ದಾರೆ. ಆ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಿದ್ದಾರೆ. ಸರ್ಕಾರ ಖಂಡಿತವಾಗಿಯೂ ಸಮಸ್ಯೆ ಬಗೆಹರಿಸಲಿದೆ. ಪ್ರತಿಭಟನಾಕಾರರು ಸ್ವಲ್ಪ ತಾಳ್ಮೆಯಿಂದ ಇರಬೇಕು ಎಂದು ಮನವಿ ಮಾಡಿದರು.

ಲಿಖಿತ ಭರವಸೆ ನೀಡಬೇಕೆಂಬ ಪ್ರತಿಭಟನಕಾರರ ಬೇಡಿಕೆ ಕುರಿತು ಮಾತನಾಡಿ, ಪ್ರತಿಭಟನೆಗಳ ಸಂದರ್ಭದಲ್ಲಿ ಲಿಖಿತ ಭರವಸೆ ನೀಡುವಂತೆ ಆಗ್ರಹಿಸುವುದು ಸಾಮಾನ್ಯ. ಇಂತಹ ಬೇಡಿಕೆಗಳನ್ನು ಸಾಕಷ್ಟು ಬಾರಿ ಕೇಳಿದ್ದೇವೆ. ಆದರೆ, ಮುಖ್ಯವಾಗಿ ಅವರ ಸಮಸ್ಯೆ ಬಗೆಹರಿಯಬೇಕು. ಅವರ ಬೇಡಿಕೆ ಸರಿ ಅಥವಾ ತಪ್ಪು ಎಂದು ಚರ್ಚಿಸುವುದಕ್ಕಿಂತ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವುದು ಸರ್ಕಾರದ ಆದ್ಯತೆಯಾಗಬೇಕು ಎಂದು ಹೇಳಿದರು.

ರಾಜ್ಯದ ನೀರಾವರಿ ಜಾಲಕ್ಕೆ ಆಸ್ಟ್ರೇಲಿಯಾ ತಂತ್ರಜ್ಞಾನದ ಬಲ

ವಾಟರ್ ಟ್ರೇಡಿಂಗ್ ಅಧ್ಯಯನಕ್ಕೆ ಸಚಿವ ಚಲುವರಾಯಸ್ವಾಮಿ ಸಮ್ಮತಿ

ಬೆಂಗಳೂರು, ನ.23: ರಾಜ್ಯದ ಹಳೆಯ ಕಾಲುವೆಗಳ ಆಧುನೀಕರಣ, ನೀರಿನ ಸೋರಿಕೆ ತಡೆಗಟ್ಟುವಿಕೆ ಹಾಗೂ ಕೃಷಿ ನೀರಾವರಿ ದಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯ ಸ್ವಾಮಿ ಅವರು ಇಂದು ಆಸ್ಟ್ರೇಲಿಯನ್ ಕಾನ್ಸುಲೇಟ್–ಜನರಲ್ ಮತ್ತು ಆಸ್ಟ್ರೇಡ್ ನಿಯೋಗದೊಂದಿಗೆ ವಿಕಾಸ ಸೌಧದಲ್ಲಿನ ತಮ್ಮ ಕಚೇರಿಯಲ್ಲಿ ಸುದೀರ್ಘ ಚರ್ಚೆ ನಡೆಸಿದರು.

ಮುಂದಿನ ಎರಡು ತಿಂಗಳೊಳಗೆ ಮತ್ತೊಂದು ಸಭೆ ನಡೆಸಿ ರಾಜ್ಯದಲ್ಲಿ ಅಳವಡಿಸಿಕೊಳ್ಳಬಹುದಾದ ಯೋಜನೆಗಳ ಕುರಿತು ಅಂತಿಮ ನಿರ್ಣಯ ಕೈಗೊಳ್ಳುವುದಾಗಿ ಹಾಗೂ ಆಸ್ಟ್ರೇಲಿಯಾದ 'ವಾಟರ್ ಟ್ರೇಡಿಂಗ್' (ನೀರಿನ ವಹಿವಾಟು) ಮಾದರಿಯ ಅಧ್ಯಯನಕ್ಕಾಗಿ ಅಲ್ಲಿಗೆ ಭೇಟಿ ನೀಡುವುದಾಗಿ ಸಚಿವರು ಭರವಸೆ ನೀಡಿದರು.



ಬೆಂಗಳೂರಿನ ಆಸ್ಟ್ರೇಲಿಯನ್ ಕಾನ್ಸುಲೇಟ್–ಜನರಲ್‌ನ ಹಂಗಾಮಿ ಕಾನ್ಸುಲ್ ಜನರಲ್ ಸ್ಟೀವನ್ ಕಾನೊಲ್ಲಿ ಮತ್ತು ಆಸ್ಟ್ರೇಡ್ ವ್ಯಾಪಾರ ಹಾಗೂ ಹೂಡಿಕೆ ಆಯುಕ್ತ ಮಥ್ರೆ ಸ್ಟೆನ್ಸ್ ನೇತೃತ್ವದ ನಿಯೋಗವು ಸಚಿವರನ್ನು ಭೇಟಿ ಮಾಡಿತು.

ಆಸ್ಟ್ರೇಲಿಯಾ–ಭಾರತ ಆರ್ಥಿಕ ಸಹಕಾರ ಮತ್ತು ವ್ಯಾಪಾರ ಒಪ್ಪಂದದ ಅಡಿಯಲ್ಲಿ ಕರ್ನಾಟಕ ಮತ್ತು ಆಸ್ಟ್ರೇಲಿಯಾ ನಡುವೆ ಜಲ ನಿರ್ವಹಣಾ ತಂತ್ರಜ್ಞಾನಗಳ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಸಭೆಯಲ್ಲಿ ವಿಸ್ತೃತ ಸಮಾಲೋಚನೆ ನಡೆಯಿತು.

ಕೃಷಿ ಮತ್ತು ನೀರಾವರಿ ಸಮನ್ವಯಕ್ಕೆ ಒತ್ತು

ಪ್ರತಿ ಹನಿಗೂ ಹೆಚ್ಚು ಬೆಳೆ' ಗುರಿ ಸಾಧಿಸಲು ಆಸ್ಟ್ರೇಲಿಯಾದ ವಿಶ್ವದರ್ಜೆಯ ಜಲ ನಿರ್ವಹಣಾ ತಂತ್ರಜ್ಞಾನವನ್ನು ರಾಜ್ಯದ ರೈತರಿಗೆ ನೇರವಾಗಿ ತಲುಪಿಸುವುದು ನಮ್ಮ ಆದ್ಯತೆಯಾಗಿದೆ.

ಉತ್ತರ ಕರ್ನಾಟಕದ ನಾರಾಯಣಪುರ ಎಡದಂಡೆ ಕಾಲುವೆ ಆಧುನೀಕರಣ ಯೋಜನೆಯಲ್ಲಿ ಆಸ್ಟ್ರೇಲಿಯಾದ 'ರುಬಿಕಾನ್ ವಾಟರ್' ಮತ್ತು ಭಾರತೀಯ ಪಾಲುದಾರ 'ಮೇಧಾ ವೆಂಚರ್ಸ್' ಸಂಸ್ಥೆಗಳು ಸಾಧಿಸಿರುವ ನೀರಿನ ಉಳಿತಾಯ ಹಾಗೂ ಕೊನೆಯ ಭಾಗದ ರೈತರಿಗೆ ನೀರು ತಲುಪಿಸಿರುವ ಯಶಸ್ಸನ್ನು ಎಂದು ಸಚಿವ ಎನ್. ಚಲುವರಾಯಸ್ವಾಮಿ ಶ್ಲಾಘಿಸಿದರು.

ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಇಲಾಖೆ ಕಾರ್ಯದರ್ಶಿ ಸತ್ಯನಾರಾಯಣ್, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಥೋಡ್ ಬಿ.ಆರ್., ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಮೇಂದ್ರ, ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೃಷ್ಣಮೂರ್ತಿ ಕುಲಕರ್ಣಿ ಉಪಸ್ಥಿತರಿದ್ದರು.

ರಾಜಧಾನಿ ಬೆಂಗಳೂರು ತಂತ್ರಜ್ಞಾನದಲ್ಲಿ ಸಾಕಷ್ಟು ಮುಂದಿದೆ. ಆದರೆ, ನೀರಿನ ಸದ್ಬಳಕೆ ಮಾಡಿಕೊಳ್ಳಲು ಇನ್ನಷ್ಟು ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕಿದೆ. ಹೀಗಾಗಿ, ನೀರಿನ ಸದ್ಬಳಕೆ ಸಂಬಂಧ ಯಾವುದೇ ದೇಶದಿಂದಾದರೂ ಸರಿ, ಅದನ್ನು ಅಳವಡಿಸಿಕೊಳ್ಳಲು, ಅಲ್ಲಿನ ಪದ್ಧತಿ, ತಂತ್ರಜ್ಞಾನಗಳನ್ನು ಕಲಿಯಲು ಸಿದ್ಧರಿದ್ದೇವೆ. ಈ ನಿಟ್ಟಿನಲ್ಲಿ ಇಂದಿನ ಆಸ್ಟ್ರೇಲಿಯಾ ನಿಯೋಗದ ಸಭೆ ನಮಗೆ ಅವಕಾಶ ನೀಡಿದೆ.

–ಎನ್.ಚಲುವರಾಯಸ್ವಾಮಿ, ಜಲಸಂಪನ್ಮೂಲ ಸಚಿವ

ರಾಜ್ಯದ ನೀರಾವರಿ ಸವಾಲುಗಳು ಮತ್ತು ಆಧುನೀಕರಣದ ಗುರಿ

ರಾಜಸ್ಥಾನದ ನಂತರ ಕರ್ನಾಟಕವು ದೇಶದ ಎರಡನೇ ಅತಿದೊಡ್ಡ ಒಣ ಭೂಪ್ರದೇಶವನ್ನು ಹೊಂದಿದೆ. ಹಳೆಯ ಕಾಲುವೆಗಳಲ್ಲಿ ನೀರು ಇಂಗುವುದು, ಆವಿಯಾಗುವುದು ಮತ್ತು ಅನಧಿಕೃತ ಬಳಕೆಯಿಂದಾಗಿ ನೀರಾವರಿ ದಕ್ಷತೆಯು ಶೇ.35 ರಿಂದ 40ಕ್ಕೆ ಸೀಮಿತವಾಗಿದೆ. ಈ ಸವಾಲುಗಳನ್ನು ಮೆಟ್ಟಿನಿಲ್ಲಲು ರಾಜ್ಯದ ಪ್ರಮುಖ ನೀರಾವರಿ ನಿಗಮಗಳ ವ್ಯಾಪ್ತಿಯಲ್ಲಿ ಹಸ್ತಚಾಲಿತ ಗೇಟ್‌ಗಳ ಬದಲಿಗೆ ಎಸ್.ಸಿ.ಎ.ಡಿ.ಎ ಆಧಾರಿತ ಸ್ವಯಂಚಾಲಿತ ನಿಯಂತ್ರಣ ವ್ಯವಸ್ಥೆ, ತೆರೆದ ಕಾಲುವೆಗಳ ಬದಲು ಪೈಪ್‌ಲೈನ್ ಮೂಲಕ ಸೂಕ್ಷ್ಮ ನೀರಾವರಿ, ಏತ ನೀರಾವರಿ ಮೂಲಕ ಕೆರೆ ತುಂಬಿಸುವುದು ಹಾಗೂ ನೀರು ಬಳಕೆದಾರರ ಸಹಕಾರ ಸಂಘಗಳ ಸಬಲೀಕರಣಕ್ಕೆ ಸರ್ಕಾರ ಒತ್ತು ನೀಡುತ್ತಿದೆ ಎಂದು ಸಚಿವ ಚಲುವರಾಯಸ್ವಾಮಿ ನಿಯೋಗಕ್ಕೆ ವಿವರಿಸಿದರು.

ಸ್ಥಳೀಯ ತಯಾರಿಕೆ ಮತ್ತು ತರಬೇತಿಗೆ ಸಚಿವರ ಸಲಹೆ

ರಾಜ್ಯದ ಇತರ ನದಿ ಕಣಿವೆಗಳಿಗೆ ಈ ತಂತ್ರಜ್ಞಾನವನ್ನು ವಿಸ್ತರಿಸುವಾಗ ಬಂಡವಾಳ ಮತ್ತು ನಿರ್ವಹಣಾ ವೆಚ್ಚವನ್ನು ತಗ್ಗಿಸಲು ರುಬಿಕಾನ್ ಸೇರಿ ಆಸ್ಟ್ರೇಲಿಯನ್ ಕಂಪನಿಗಳು 'ಮೇಕ್–ಇನ್–ಕರ್ನಾಟಕ' ಅಡಿಯಲ್ಲಿ ಸ್ಥಳೀಯವಾಗಿಯೇ ಉಪಕರಣಗಳ ತಯಾರಿಕೆ ಕೈಗೊಳ್ಳಬೇಕು. ಜತೆಗೆ, ರಾಜ್ಯದ ಜಲಸಂಪನ್ಮೂಲ ಇಲಾಖೆಯ ಸಿಬ್ಬಂದಿ ಮತ್ತು ರೈತ ಸಂಘದ ಪ್ರತಿನಿಧಿಗಳಿಗೆ ಆಸ್ಟ್ರೇಲಿಯಾದ 'ಮರ್ರೆ–ಡಾರ್ಲಿಂಗ್ ಬೇಸಿನ್ ಅಥಾರಿಟಿ'ಯಂತಹ ಸಂಸ್ಥೆಗಳಿಂದ ತಾಂತ್ರಿಕ ತರಬೇತಿ ಕೊಡಿಸುವುದು ಅಗತ್ಯ ಎಂದು ಸಚಿವರು ನಿಯೋಗಕ್ಕೆ ತಿಳಿಸಿದರು.

ಪರಿಸರ ಸಂರಕ್ಷಣೆಯೊಂದಿಗೆ ಪ್ರವಾಸೋದ್ಯಮ ವಿಸ್ತರಣೆಗೆ ಒತ್ತು

ಹೊಸ ಸಫಾರಿ, ಜಂಗಲ್ ಲಾಡ್ಜಸ್ ಆಸ್ತಿಗಳ ನವೀಕರಣಕ್ಕೂ ಕ್ರಮ: ಸಚಿವ ಕೆ.ಜೆ.ಜಾರ್ಜ್

ಬೆಂಗಳೂರು, ನ.23: ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗೆ ಯಾವುದೇ ಧಕ್ಕೆಯಾಗದಂತೆ ರಾಜ್ಯದಲ್ಲಿ ಜವಾಬ್ದಾರಿಯುತ ಪರಿಸರ ಪ್ರವಾಸೋದ್ಯಮ ವನ್ನು ವಿಸ್ತರಿಸಲು ಹಾಗೂ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಆಸ್ತಿಗಳನ್ನು ಹಂತ ಹಂತವಾಗಿ ಮೇಲ್ದರ್ಜೆಗೇರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಮುತ್ತೋಡಿ ನೇಚರ್ ಕ್ಯಾಂಪ್ ಸೇರಿದಂತೆ ಪ್ರವಾಸೋದ್ಯಮಕ್ಕೆ ಸೂಕ್ತವಾಗಿರುವ ಅರಣ್ಯ ಪ್ರದೇಶಗಳನ್ನು ಗುರುತಿಸಿ, ಅರಣ್ಯ ಇಲಾಖೆಯ ಅಗತ್ಯ ಕಾನೂನುಬದ್ಧ ಅನುಮತಿಗಳನ್ನು ಪಡೆದು ಹೊಸ ಸಫಾರಿ, ಟ್ರೆಕ್ಕಿಂಗ್ ಹಾಗೂ ಇತರ ಪ್ರಕೃತಿ ಆಧಾರಿತ ಪ್ರವಾಸೋದ್ಯಮ ಚಟುವಟಿಕೆಗಳನ್ನು ಆರಂಭಿಸುವ ಸಾಧ್ಯತೆಯನ್ನು ಪರಿಶೀಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಂಗಲ್ ಲಾಡ್ಜಸ್ ಆಸ್ತಿಗಳಿಗೆ ಹೊಸ ರೂಪ



ಪರಿಸರ ಪ್ರವಾಸೋದ್ಯಮವನ್ನು ವಿಸ್ತರಿಸಬೇಕು; ಆದರೆ ಅದು ಅರಣ್ಯದ ಸ್ವಾಭಾವಿಕ ಪರಿಸರ ಮತ್ತು ವನ್ಯಜೀವಿಗಳ ನೆಮ್ಮದಿಗೆ ಧಕ್ಕೆಯಾಗಬಾರದು. ಸೂಕ್ತ ಪ್ರದೇಶಗಳನ್ನು ವೈಜ್ಞಾನಿಕವಾಗಿ ಗುರುತಿಸಿ, ಅಗತ್ಯ ಅನುಮತಿಗಳೊಂದಿಗೆ ಸಫಾರಿ, ಟ್ರೆಕ್ಕಿಂಗ್ ಮತ್ತು ಪ್ರಕೃತಿ ಆಧಾರಿತ ಪ್ರವಾಸಿ ಅನುಭವಗಳನ್ನು ಅಭಿವೃದ್ಧಿಪಡಿಸಲಾಗುವುದು. ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಆಸ್ತಿಗಳನ್ನೂ ಅವುಗಳ ನೈಸರ್ಗಿಕ ವೈಶಿಷ್ಟ್ಯವನ್ನು ಕಾಪಾಡಿಕೊಂಡೇ ಉತ್ತಮ ಸೌಲಭ್ಯಗಳೊಂದಿಗೆ ಮೇಲ್ದರ್ಜೆಗೇರಿಸುವುದು ನಮ್ಮ ಉದ್ದೇಶವಾಗಿದೆ.

– ಕೆ.ಜೆ. ಜಾರ್ಜ್, ಇಂಧನ ಮತ್ತು ಪ್ರವಾಸೋದ್ಯಮ ಸಚಿವ

ಕಬಿನಿ, ಬಂಡೀಪುರ, ಕೆಮ್ಮಣ್ಣುಗುಂಡಿ ಸೇರಿದಂತೆ ಜೆಲ್‌ಆರ್‌ನ ಪ್ರಮುಖ ಆಸ್ತಿಗಳಲ್ಲಿರುವ ಕೊಠಡಿ, ಸ್ವಚ್ಛತೆ, ಆತಿಥ್ಯ ಮತ್ತು ಪ್ರವಾಸಿ ಸೌಲಭ್ಯಗಳನ್ನು ಸುಧಾರಿಸಲು ಆದ್ಯತೆ ನೀಡಲಾಗುವುದು.

ಪ್ರತಿಯೊಂದು ಆಸ್ತಿಯ ವೈಶಿಷ್ಟ್ಯ ಮತ್ತು ನೈಸರ್ಗಿಕ ಪರಿಸರವನ್ನು ಕಾಪಾಡಿಕೊಂಡೇ ಅಗತ್ಯ ದುರಸ್ತಿ ಹಾಗೂ ನವೀಕರಣ ಕಾಮಗಾರಿಗಳನ್ನು ಕೈಗೊಳ್ಳಬೇಕು. ಅಗತ್ಯವಿರುವ ಕಡೆ ವಿವರವಾದ ಯೋಜನಾ ವರದಿ ಸಿದ್ಧಪಡಿಸಿ, ಕಾಲಮಿತಿಯಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಂತೆ ಸಚಿವರು ಸೂಚಿಸಿದ್ದಾರೆ.

ಸ್ಥಳೀಯ ಸಮುದಾಯಕ್ಕೂ ಪ್ರವಾಸೋದ್ಯಮದ ಲಾಭ

ಪರಿಸರ ಪ್ರವಾಸೋದ್ಯಮ ಚಟುವಟಿಕೆಗಳಲ್ಲಿ ಅರಣ್ಯದಂಚಿನ ಗ್ರಾಮಗಳ ಜನರು ಮತ್ತು ಯುವಕರನ್ನು ಹೆಚ್ಚಿನ ಪ್ರಮಾಣದಲ್ಲಿ ತೊಡಗಿಸಿಕೊಳ್ಳಲು ಒತ್ತು ನೀಡಲಾಗಿದೆ. ಸ್ಥಳೀಯರಿಗೆ ಪ್ರಕೃತಿ ಮಾರ್ಗದರ್ಶಕರು, ಆತಿಥ್ಯ, ಆಹಾರ, ಸಾರಿಗೆ ಹಾಗೂ ಇತರ ಪ್ರವಾಸಿ ಸೇವೆಗಳಲ್ಲಿ ಅವಕಾಶ ಕಲ್ಪಿಸಿ, ಪರಿಸರ ಪ್ರವಾಸೋದ್ಯಮದಿಂದ ಸೃಷ್ಟಿಯಾಗುವ ಉದ್ಯೋಗ ಮತ್ತು ಆದಾಯದ ಲಾಭವನ್ನು ಸ್ಥಳೀಯ ಸಮುದಾಯಕ್ಕೂ ತಲುಪಿಸುವುದು ಉದ್ದೇಶವಾಗಿದೆ. ಅರಣ್ಯ ಇಲಾಖೆ, ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಹಾಗೂ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ – ಜೆ.ಎಲ್.ಆರ್ ನಡುವೆ ಸಮನ್ವಯ ಸಾಧಿಸಿ, ಪರಿಸರದ ಸಾಗುವಳಿ ಸಾಮರ್ಥ್ಯ, ವನ್ಯಜೀವಿಗಳ ಸುರಕ್ಷತೆ ಮತ್ತು ಸ್ಥಳೀಯ ಸಮುದಾಯದ ಪಾಲ್ಗೊಳ್ಳುವಿಕೆಯನ್ನು ಪ್ರಮುಖ ಮಾನದಂಡ ಗಳಾಗಿ ಪರಿಗಣಿಸಿ ಮುಂದಿನ ಯೋಜನೆಗಳನ್ನು ರೂಪಿಸಲಾಗುವುದು.



ಅರಣ್ಯ ಇಲಾಖೆ, ಕರ್ನಾಟಕ ಇಕೋ ಟೂರಿಸಮ್ ಡೆವಲಪ್‌ಮೆಂಟ್ ಬೋರ್ಡ್ ಮತ್ತು ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ನಡುವೆ ಸಮನ್ವಯ ಸಾಧಿಸಿ ಪರಿಸರ ಪ್ರವಾಸೋದ್ಯಮವನ್ನು ನಿಯಂತ್ರಿತ ಹಾಗೂ ಸುಸ್ಥಿರ ಮಾದರಿಯಲ್ಲಿ ವಿಸ್ತರಿಸಲಾಗುವುದು. ವನ್ಯಜೀವಿಗಳ ಸುರಕ್ಷತೆ, ಪರಿಸರದ ಸಾಗುವಳಿ ಸಾಮರ್ಥ್ಯ ಮತ್ತು ಸ್ಥಳೀಯ ಸಮುದಾಯದ ಪಾಲ್ಗೊಳ್ಳುವಿಕೆಗೆ ಆದ್ಯತೆ ನೀಡಿ ಹೊಸ ಚಟುವಟಿಕೆಗಳು ಹಾಗೂ ಜೆಎಲ್‌ಆರ್ ಆಸ್ತಿಗಳ ನವೀಕರಣವನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು.

–ಡಾ. ರಾಮ್‌ಪ್ರಸಾತ್ ಮನೋಹರ್, ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ

ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಜವಾಬ್ದಾರಿಯುತ ಪ್ರಕೃತಿ ಆಧಾರಿತ ಪ್ರವಾಸೋದ್ಯಮದ ಮೂಲಕ ತನ್ನದೇ ಆದ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿದೆ. ನಮ್ಮ ಆಸ್ತಿಗಳನ್ನು ಮೇಲ್ದರ್ಜೆಗೇರಿಸುವಾಗಲೂ ಮತ್ತು ಹೊಸ ಪರಿಸರ ಪ್ರವಾಸೋದ್ಯಮ ಅನುಭವಗಳನ್ನು ರೂಪಿಸುವಾಗಲೂ, ಪ್ರತಿಯೊಂದು ತಾಣದ ನೈಸರ್ಗಿಕ ವೈಶಿಷ್ಟ್ಯವನ್ನು ಕಾಪಾಡುವುದು, ಪ್ರವಾಸಿಗರ ಸೌಲಭ್ಯಗಳನ್ನು ಸುಧಾರಿಸುವುದು ಹಾಗೂ ಸ್ಥಳೀಯ ಸಮುದಾಯಗಳಿಗೆ ಪ್ರವಾಸೋದ್ಯಮದಲ್ಲಿ ಹೆಚ್ಚಿನ ಭಾಗವಹಿಸುವಿಕೆ ಮತ್ತು ಆರ್ಥಿಕ ಲಾಭದ ಅವಕಾಶಗಳನ್ನು ಸೃಷ್ಟಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿರುತ್ತದೆ.

–ಅನಿಲ್ ಮಧು, ಅಧ್ಯಕ್ಷರು, ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್

ಆನೆ ಸ್ಥಳಾಂತರ: ಚಿಕ್ಕಮಗಳೂರು ಭಾಗದ ಶಾಸಕರೇ ನಿರ್ಧಾರ ಮಾಡಲಿ

ಅವರ ಸಲಹೆಯಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ: ಸಚಿವ ರಾಮಲಿಂಗಾರೆಡ್ಡಿ

ಕೋಲಾರ, ನ.23: ಬೇಲೂರು ಭಾಗದಲ್ಲಿ ಜನರಿಗೆ ತೊಂದರೆ ನೀಡುತ್ತಿರುವ ಕಾಡಾನೆಗಳನ್ನು ಎಲ್ಲಿಗೆ ಸ್ಥಳಾಂತರಿಸಬೇಕು ಎಂಬುದನ್ನು ಚಿಕ್ಕಮಗಳೂರು ಭಾಗದ ಶಾಸಕರೇ ನಿರ್ಧರಿಸಲಿ. ಶಾಸಕರು ನೀಡುವ ಸಲಹೆಯಂತೆ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಅರಣ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೇಲೂರು ತಾಲ್ಲೂಕಿನಲ್ಲಿ ಸುಮಾರು 55 ಕಾಡಾನೆಗಳಿದ್ದು, ಅವುಗಳಿಗೆ ಹೋಲಿಸಿದರೆ ಅರಣ್ಯ ಪ್ರದೇಶದ ಪ್ರಮಾಣ ಕಡಿಮೆಯಾಗಿದೆ. ಇಲ್ಲಿ ಕೇವಲ 13,917 ಎಕರೆ ಅರಣ್ಯ ಪ್ರದೇಶವಿದ್ದು, ಅದು ಕೂಡ ಒಂದೇ ಪ್ರದೇಶದಲ್ಲಿ ಇರದೆ ಕಾಫಿ ತೋಟಗಳ ನಡುವೆ ಚದುರಿಹೋಗಿದೆ. ಹೀಗಾಗಿ ಕಾಡಾನೆಗಳು ಆಹಾರ ಅರಸಿ ನಾಡಿಗೆ ಬಂದು ಬೆಳೆ ಹಾನಿ ಹಾಗೂ ಪ್ರಾಣಹಾನಿಗೆ ಕಾರಣವಾಗುತ್ತಿವೆ. 2019ರಲ್ಲಿ ಕೇವಲ 7 ಇದ್ದ ಆನೆಗಳ ಸಂಖ್ಯೆ ಈಗ 55ಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಕಾಡಾನೆಗಳನ್ನು ಸುಮಾರು 1.41 ಲಕ್ಷ ಎಕರೆ ವಿಸ್ತೀರ್ಣದ ಭದ್ರಾ ಅಭಯಾರಣ್ಯಕ್ಕೆ ಸ್ಥಳಾಂತರಿಸಲು ಸರ್ಕಾರ ನಿರ್ಧರಿಸಿತ್ತು. ಆದರೆ, ಈ ಪ್ರಸ್ತಾವನೆಗೆ ಚಿಕ್ಕಮಗಳೂರು ಭಾಗದ ಶಾಸಕರು ವಿರೋಧ ವ್ಯಕ್ತಪಡಿಸಿದ್ದಾರೆ. ಸ್ಥಳಾಂತರಿಸದ ಆನೆಗಳು ಮತ್ತೆ ನಾಡಿಗೆ ಬಾರದಂತೆ ಅಗತ್ಯ ಭದ್ರತಾ ಕ್ರಮ ಕೈಗೊಳ್ಳುವುದಾಗಿ ಅರಣ್ಯ ಇಲಾಖೆ ಅಧಿಕಾರಿಗಳು ಭರವಸೆ ನೀಡಿದ್ದರೂ ಶಾಸಕರು ಇದಕ್ಕೆ ಒಪ್ಪಿಗೆ ಸೂಚಿಸಿಲ್ಲ ಎಂದರು. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಶಾಸಕರ ಸಭೆ ಕರೆದು ಚರ್ಚಿಸಲಾಗುವುದು. ಬೇಲೂರು ಮತ್ತು ಚಿಕ್ಕಮಗಳೂರು ಭಾಗದ ಜನರಿಗೆ ಯಾವುದೇ ತೊಂದರೆಯಾಗದಂತೆ ಶಾಸಕರೇ ಸೂಕ್ತ ಪರಿಹಾರ ಸೂಚಿಸಿದರೆ, ಅದರಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಪ್ರತಿ ವರ್ಷ ಆನೆ, ಹುಲಿ, ಚಿರತೆ ಸೇರಿದಂತೆ ವನ್ಯಜೀವಿಗಳ ದಾಳಿಯಿಂದ ಸರಾಸರಿ 40ರಿಂದ 45 ಮಂದಿ ಮೃತಪಟ್ಟಿದ್ದಾರೆ. ಇಂತಹ ಘಟನೆಗಳನ್ನು ತಡೆಗಟ್ಟಲು ಸರ್ಕಾರ ಗಂಭೀರ ಪ್ರಯತ್ನಗಳನ್ನು ನಡೆಸುತ್ತಿದೆ ಎಂದು ರಾಮಲಿಂಗಾರೆಡ್ಡಿ

ಪಕ್ಷಾಂತರ ನಿಷೇಧ ಕಾಯ್ದೆ ಸುಧಾರಣೆಗಾಗಿ ಪಿಐಎಲ್ ಕೇಂದ್ರ, ಚುನಾವಣಾ ಆಯೋಗಕ್ಕೆ ಸುಪ್ರೀಂ ನೋಟಿಸ್

ನವದೆಹಲಿ, ನ.23: ಪಕ್ಷಾಂತರ ನಿಷೇಧ ಕಾಯ್ದೆಯ ಚೌಕಟ್ಟಿನಲ್ಲಿ ಸಮಗ್ರ ಸುಧಾರಣೆಗಳನ್ನು ತರಬೇಕೆಂದು ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ (ಪಿಐಎಲ್) ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ. ಪ್ರತಿಕ್ರಿಯೆ ಕೇಳಿದೆ.

ಎ. ಸೇತು ಎಂಬುವವರು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಚುನಾಯಿತ ಜನಪ್ರತಿನಿಧಿಗಳು ಅನರ್ಹತೆ ಪ್ರಕ್ರಿಯೆಗಳಿಂದ ತಪ್ಪಿಸಿಕೊಳ್ಳಲು ಮತ್ತು ಚುನಾಯಿತ ಸರ್ಕಾರಗಳ ಅಸ್ತಿತ್ವದ ಮೇಲೆ ಪ್ರಭಾವ ಬೀರಲು ತಮ್ಮ ಸ್ಥಾನಕ್ಕೆ ನೀಡುವ ಕಾರ್ಯತಂತ್ರದ ರಾಜೀನಾಮೆ ದುರುಪಯೋಗದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಈ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಜೋಯ್ಮಾಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ. ಮೋಹನ ಅವರನ್ನೊಳಗೊಂಡ ಪೀಠವು ವಿಚಾರಣೆ ನಡೆಸಿದೆ. ಚುನಾವಣಾ ಆಯೋಗ ಮತ್ತು ಕಾನೂನು ಆಯೋಗದ ಜೊತೆಗೆ ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವಾಲಯಕ್ಕೂ ಪೀಠವು ನೋಟಿಸ್ ಜಾರಿ ಮಾಡಿದೆ.

ಸಂವಿಧಾನದ 10ನೇ ಪರಿಚ್ಛೇದದ ಶಿಸ್ತು ಕ್ರಮಗಳಿಂದ ಪಾರಾಗಲು ಸಂಸದರು ಮತ್ತು



ಶಾಸಕರು ರಾಜೀನಾಮೆಗಳನ್ನು ಅಸ್ತ್ರವಾಗಿ ಬಳಸಿಕೊಳ್ಳುತ್ತಿದ್ದಾರೆ. ಅನರ್ಹತೆ ಪ್ರಕ್ರಿಯೆಯನ್ನು ಎದುರಿಸುತ್ತಿರುವ ಅಥವಾ ಅಂತಹ ಕ್ರಮದ ನಿರೀಕ್ಷೆಯಲ್ಲಿರುವ ಶಾಸಕರು, ಸ್ಪೀಕರ್ ಅಥವಾ ಸಭಾಪತಿಗಳು ಪ್ರಕರಣದ ಅರ್ಹತೆಯ ಆಧಾರದ ಮೇಲೆ ತೀರ್ಪು ನೀಡುವ ಮೊದಲೇ ತರಾತುರಿಯಲ್ಲಿ ರಾಜೀನಾಮೆ ನೀಡುವ ತಂತ್ರವನ್ನು ಅನುಸರಿಸುತ್ತಿದ್ದಾರೆ. ಇಂತಹ ರಾಜೀನಾಮೆಗಳನ್ನು ರಾಜಕೀಯ ಮರುಹೊಂದಾಣಿಕೆಗೆ, ವಿಧಾನಸಭೆಯ ಸಂಖ್ಯಾಬಲವನ್ನು ಬದಲಾಯಿಸಲು ಹಾಗೂ ಪಕ್ಷಾಂತರ ನಿಷೇಧ ಕಾಯ್ದೆಯಡಿ ಎದುರಾಗುವ ಕಾನೂನು ಪರಿಣಾಮಗಳಿಂದ ತಪ್ಪಿಸಿಕೊಳ್ಳಲು ಬಳಸಿಕೊಳ್ಳಲಾಗುತ್ತಿದೆ ಎಂದು ಅರ್ಜಿದಾರರು ವಾದಿಸಿದ್ದಾರೆ.

ಇದನ್ನು ತಡೆಯಲು ಸ್ಪಷ್ಟ ನಿರ್ದೇಶನಗಳನ್ನು ನೀಡಬೇಕು. ರಾಜೀನಾಮೆ ಮತ್ತು ಅನರ್ಹತೆ ಅರ್ಜಿಗಳನ್ನು ಕಾಲಮಿತಿಯಲ್ಲಿ, ತರ್ಕಬದ್ಧವಾಗಿ ಮತ್ತು ಪಾರದರ್ಶಕವಾಗಿ ಇತ್ಯರ್ಥಪಡಿಸುವುದು, ಸ್ಪೀಕರ್ ಕೇಂದ್ರಿತ ತೀರ್ಪು ನೀಡುವ ವ್ಯವಸ್ಥೆಯ ಸಾಂಸ್ಥಿಕ ಪರಿಶೀಲನೆ ನಡೆಸುವುದು ಹಾಗೂ ಅತಂತ್ರ ವಿಧಾನಸಭೆ ಸೃಷ್ಟಿಯಾದಾಗ ಸಂವಿಧಾನದ 188ನೇ ವಿಧಿಯ ಅಡಿಯಲ್ಲಿ ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದ ನಂತರ ಸದನದ ಒಳಗಡೆಯೇ ಬಹುಮತ ಸಾಬೀತುಪಡಿಸಬೇಕೇ ಹೊರತು ಸದನದ ಹೊರಗಿನ ಬೆಂಬಲ ಪತ್ರಗಳು ಅಥವಾ ಪ್ರದರ್ಶನಗಳ ಮೂಲಕವಲ್ಲ ಎಂಬುದನ್ನು ಪುನರುಚ್ಚರಿಸಬೇಕು ಎಂದು ಅರ್ಜಿದಾರರು ಮನವಿ ಮಾಡಿದ್ದಾರೆ.

ಸಂವಿಧಾನದ 10ನೇ ಪರಿಚ್ಛೇದದ ಅಡಿಯಲ್ಲಿ ಅನರ್ಹತೆ ಪ್ರಕ್ರಿಯೆಗಳು ಬಾಕಿ ಇರುವಾಗ ಅಥವಾ ಅನರ್ಹತೆಯ ಭೀತಿ ಎದುರಾಗಿರುವ ಹಂತದಲ್ಲಿ ಸಂಸದರು ಅಥವಾ ಶಾಸಕರು ಸಲ್ಲಿಸುವ ರಾಜೀನಾಮೆಯು ತನ್ನಿಂದ ತಾನೇ ಆ ಅನರ್ಹತೆ ಪ್ರಕ್ರಿಯೆಯನ್ನು ಕೊನೆಗೊಳಿಸಬಾರದು ಅಥವಾ ನಿಷ್ಫಲಗೊಳಿಸಬಾರದು ಎಂದು ನ್ಯಾಯಾಲಯ ಘೋಷಿಸಬೇಕು. ಅಲ್ಲದೆ, ಸ್ಪೀಕರ್ ಅಥವಾ ಸಭಾಪತಿ ವಸ್ತುನಿಷ್ಠ ದಾಖಲೆಗಳ ಆಧಾರದ ಮೇಲೆ ರಾಜೀನಾಮೆಯು ಸ್ವಯಂಪ್ರೇರಿತವಾಗಿದೆಯೇ ಮತ್ತು ನೈಜವಾಗಿದೆಯೇ ಎಂಬುದನ್ನು ಪರಿಶೀಲಿಸಿ ಕಾರಣಸಹಿತ ಆದೇಶ ಹೊರಡಿಸಬೇಕು. ಬಾಕಿ ಇರುವ ಅನರ್ಹತೆ ಅರ್ಜಿಗಳನ್ನು ಸ್ವತಂತ್ರವಾಗಿ ವಿಚಾರಣೆ ನಡೆಸಿ ಇತ್ಯರ್ಥಪಡಿಸಬೇಕೆಂದು ನಿರ್ದೇಶನ ನೀಡಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಮೋದಿ-ಶಾ ಜೋಡಿ ವಿರುದ್ಧ ಜೈರಾಮ್ ರಮೇಶ್ ಕಿಡಿ

ನವದೆಹಲಿ, ನ.23: ಸಂಸತ್ತಿನ ಚಳಿಗಾಲದ ಅಧಿವೇಶನದ ಅನಿಶ್ಚಿತತೆ, ಮುಂಗಾರು ಅಧಿವೇಶನದ ಮುಂದುವರಿಕೆ ಹಾಗೂ ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ನಿಲುವನ್ನು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಕಟುವಾಗಿ ಪ್ರಶ್ನಿಸಿದ್ದಾರೆ.

ಭಾನುವಾರ ತಮ್ಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮೋದಿ ಮತ್ತು ಕೇಂದ್ರ ಅಮಿತ್ ಶಾ ವಿರುದ್ಧ ವಾಗ್ದಾಳಿ ನಡೆಸಿರುವ ಅವರು, ಈ ಕುರಿತು ಸರ್ಕಾರದ ಸ್ಪಷ್ಟ ಕಾರ್ಯತಂತ್ರವೇನು ಎಂದು ಪ್ರಶ್ನಿಸಿದ್ದಾರೆ.

ಇಬ್ಬರನ್ನು ಪಿಎಂ-ಎಚ್‌ಎಂ ಜೋಡಿ ಎಂದು ಉಲ್ಲೇಖಿಸಿರುವ ಜೈರಾಮ್ ರಮೇಶ್, ಇಬ್ಬರು ನಾಯಕರು ಈಗಲೂ ಒಟ್ಟಾಗಿದ್ದಾರೆ ಎಂದು ಭಾವಿಸಿ ಕೇಳುವುದಾದರೆ, ಇವರ ಮುಂದಿನ ಕಾರ್ಯತಂತ್ರವೇನು ಎಂದು ವ್ಯಂಗ್ಯವಾಡಿದ್ದಾರೆ. ಸಂಸತ್ತಿನ ಚಳಿಗಾಲದ ಅಧಿವೇಶನ ಯಾವಾಗ ಆರಂಭವಾಗಲಿದೆ ಎಂಬ ಬಗ್ಗೆ ಈಗಾಗಲೇ ಸ್ಪಷ್ಟತೆ ಇರಬೇಕಿತ್ತು ಎಂದಿದ್ದಾರೆ. ಇನ್ನೂ ಅನಿರ್ದಿಷ್ಟಾವಧಿಗೆ



ಮುಂದೂಡಲ್ಪಟ್ಟ ಅಂತ್ಯಗೊಳ್ಳದ ಮುಂಗಾರು ಅಧಿವೇಶನವನ್ನು ಯಾವಾಗ ಪುನರಾರಂಭಿಸಲಾಗುತ್ತದೆ ಎಂಬುದನ್ನು ಸರ್ಕಾರ ಏಕೆ ಘೋಷಿಸಿಲ್ಲ ಎಂದು ಪ್ರಶ್ನಿಸಿದ್ದಾರೆ.

ಕ್ಷೇತ್ರ ಪುನರ್ವಿಂಗಡಣೆ ವಿಷಯವನ್ನು ಪ್ರಸ್ತಾಪಿಸಿರುವ ಕಾಂಗ್ರೆಸ್ ನಾಯಕ, ಲೋಕಸಭೆಯಲ್ಲಿ ಕಳಂಕಿತ ಮೂರನೇ ಎರಡರಷ್ಟು ಬಹುಮತವನ್ನು ಒಗ್ಗೂಡಿಸಲು ಆಡಳಿತಾರೂಢ ಸರ್ಕಾರ ನಡೆಸುತ್ತಿರುವ ಹತಾಶ ಪ್ರಯತ್ನಗಳ ಹಿನ್ನೆಲೆಯಲ್ಲಿ, ಪುನರ್ವಿಂಗಡಣೆಗೆ ಸರ್ಕಾರ ಅನುಸರಿಸಲಿರುವ ಸೂತ್ರವೇನು ಎಂಬುದನ್ನು ತಿಳಿಯುವ ಹಕ್ಕು ದೇಶದ ಜನರಿಗಿದೆ ಎಂದು ಹೇಳಿದ್ದಾರೆ.

ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ್ದ ಜೈರಾಮ್ ರಮೇಶ್, ಈ ಕುರಿತು ವಿ ಇಂಡಿಯಾ ಬಣದ ಬೇಡಿಕೆಗಳನ್ನು ಮುಂದಿಟ್ಟಿದ್ದರು. ಪ್ರಸ್ತುತ ಇರುವ ಲೋಕಸಭಾ ಸ್ಥಾನಗಳ ಬಲ ಮತ್ತು ರಾಜ್ಯವಾರು ಹಂಚಿಕೆಯ ಸ್ವರೂಪವನ್ನೇ ಮುಂದುವರಿಸಬೇಕು. ಇದರೊಂದಿಗೆ ಮಹಿಳೆಯರಿಗೆ ಮೂರನೇ ಒಂದರಷ್ಟು (33%) ಮೀಸಲಾತಿಯನ್ನು ತಕ್ಷಣವೇ ಜಾರಿಗೊಳಿಸಬೇಕು. ಈ ವ್ಯವಸ್ಥೆಯನ್ನು ಮುಂದಿನ 25 ವರ್ಷಗಳ ಕಾಲ ಯಥಾಸ್ಥಿತಿಯಲ್ಲಿ ಕಾಯ್ದುಕೊಳ್ಳಬೇಕು ಎಂಬುದು ರಾಷ್ಟ್ರದ ಹಿತಾಸಕ್ತಿಯ ದೃಷ್ಟಿಯಿಂದ ವಿರೋಧ ಪಕ್ಷಗಳ ಪ್ರಮುಖ ಬೇಡಿಕೆಯಾಗಿದೆ ಎಂದು ತಿಳಿಸಿದ್ದರು.

ಸರ್ಕಾರದ ಈ ನಿರಂತರ ಸಸ್ಪೆನ್ಸ್ ಹಿಂದೆ ಆಡಳಿತಾರೂಢರಲ್ಲಿನ ಗೊಂದಲವಿದೆ ಅಥವಾ ಏನೋ ಅತ್ಯಂತ ಅಪಾಯಕಾರಿ ಯೋಜನೆ ರೂಪುಗೊಳ್ಳುತ್ತಿದೆ ಎಂದು ಜೈರಾಮ್ ರಮೇಶ್ ಶಂಕೆ ವ್ಯಕ್ತಪಡಿಸಿದ್ದಾರೆ. ಪಿಎಂ-ಎಚ್‌ಎಂ ಜೋಡಿಯು ತನ್ನದೇ ಆದ ಪೊಳ್ಳುಮಾತು ಮತ್ತು ಆರ್ಭಟಗಳಲ್ಲಿ ಸಿಲುಕಿಕೊಂಡಿದೆ ಎಂದು ಆರೋಪಿಸಿದ್ದಾರೆ.

ಯೂಟ್ಯೂಬರ್ ಧ್ರುವ್ ರಾಠಿಗೆ ಜಾಮೀನುರಹಿತ ವಾರಂಟ್

ನವದೆಹಲಿ, ನ.23: ಮಾನಹಾನಿ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂಟ್ಯೂಬರ್ ಧ್ರುವ್ ರಾಠಿ ವಿರುದ್ಧ ದೆಹಲಿಯ ಸಾಕೇತ್ ನ್ಯಾಯಾಲಯ ಜಾಮೀನು ರಹಿತ ವಾರಂಟ್ ಹೊರಡಿಸಿದೆ.

2018ರಲ್ಲಿ ಧ್ರುವ್ ರಾಠಿ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಪ್ರಕಟಿಸಿದ್ದ ಬಿಜೆಪಿ ಐಟಿ ಸೆಲ್ ಪಾರ್ಟ್ 2 ವಿಡಿಯೊ ವಿವಾದಕ್ಕೆ ಸಂಬಂಧಿಸಿದಂತೆ ವಿಕಾಸ್ ಸಂಕ್ರಿತ್ಯಾಯನ್ ಅಲಿಯಾಸ್ ವಿಕಾಸ್ ಪಾಂಡೆ ಮಾನಹಾನಿ ದೂರು ದಾಖಲಿಸಿದ್ದರು.



ಬಿಜೆಪಿ ಐಟಿ ಸೆಲ್‌ನವರು ತಮ್ಮ ವಿರುದ್ಧ ಅಪಪ್ರಚಾರ ನಡೆಸಲು ಲಂಚ ನೀಡಲು ಯತ್ನಿಸಿದ್ದರು ಎಂದು ರಾಠಿ ವಿಡಿಯೊದಲ್ಲಿ ಆರೋಪಿಸಿದ್ದರು. ಈ ಆರೋಪಗಳು ತಮ್ಮ ಗೌರವಕ್ಕೆ ಧಕ್ಕೆ ತಂದಿವೆ ಎಂದು ಪಾಂಡೆ ನ್ಯಾಯಾಲಯದ ಮೊರೆ ಹೋಗಿದ್ದರು.

ಪ್ರಕರಣದ ವಿಚಾರಣೆಗೆ ರಾಠಿ ಹಾಜರಾಗದ ಹಿನ್ನೆಲೆಯಲ್ಲಿ ಹಾಗೂ ಈ ಹಿಂದೆ ಹೊರಡಿಸಿದ್ದ ಜಾಮೀನು ಸಹಿತ ವಾರಂಟ್ ಜಾರಿಯಾಗದ ಕಾರಣ ನ್ಯಾಯಾಲಯ ಇದೀಗ ಜಾಮೀನು ರಹಿತ ವಾರಂಟ್ ಹೊರಡಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಡಿ.3ಕ್ಕೆ ನಿಗದಿಪಡಿಸಲಾಗಿದೆ.

ಉತ್ತರ ಪ್ರದೇಶ ವಿಧಾನಸಭೆ ಚುನಾವಣೆ: ಬಿಜೆಪಿ ಶಾಸಕರಿಗೆ 50, ಸಂಸದರಿಗೆ 10 ಜನಸಂಪರ್ಕ ಸಭೆಗಳ ಗುರಿ

ಲಖನೌ,ನ.23: ಉತ್ತರ ಪ್ರದೇಶದಲ್ಲಿ 2027ರ ವಿಧಾನಸಭೆ ಚುನಾವಣೆಗೆ ಸಿದ್ಧತೆ ಚುರುಕುಗೊಳಿಸಿರುವ ಆಡಳಿತಾರೂಢ ಬಿಜೆಪಿ, ಜನರನ್ನು ನೇರವಾಗಿ ತಲುಪಲು ವಿಶೇಷ ಕಾರ್ಯತಂತ್ರ ರೂಪಿಸಿದೆ. ಇದರ ಭಾಗವಾಗಿ ಪಕ್ಷದ ಶಾಸಕರು ತಲಾ 50 ಚೌಪಾಲ್‌ಗಳನ್ನು (ಜನಸಂಪರ್ಕ ಸಭೆ) ಹಾಗೂ ಸಂಸದರು ತಲಾ 10 ಚೌಪಾಲ್‌ಗಳನ್ನು ನಡೆಸುವಂತೆ ಸೂಚಿಸಲಾಗಿದೆ.

ಡಿ.5ರೊಳಗೆ ಈ ಸಭೆಗಳನ್ನು ಪೂರ್ಣಗೊಳಿಸುವ ಗುರಿಯನ್ನು ಪಕ್ಷದ ನಾಯಕತ್ವ ನೀಡಿದೆ. ಗ್ರಾಮೀಣ ಮತ್ತು ಸ್ಥಳೀಯ ಮಟ್ಟದಲ್ಲಿ ಜನರೊಂದಿಗೆ ನೇರ ಸಂಪರ್ಕ ಬೆಳೆಸುವುದು, ಸರ್ಕಾರದ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾಹಿತಿ ತಲುಪಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಮುಂಬರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸಲು ಮುಂದಾಗಿದೆ. ಪಕ್ಷದ ಶಾಸಕರು, ಸಂಸದರು ಹಾಗೂ ಸ್ಥಳೀಯ ಮುಖಂಡರು ಜನರ ನಡುವೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವಂತೆ ಸೂಚಿಸಲಾಗಿದೆ. ಸರ್ಕಾರದ ಸಾಧನೆಗಳನ್ನು ಜನರಿಗೆ ತಲುಪಿಸುವುದರ ಜತೆಗೆ ಪಕ್ಷದ ಕಾರ್ಯಕರ್ತರನ್ನು ಚುನಾವಣಾ ಕಾರ್ಯಕ್ಕೆ ಸಜ್ಜುಗೊಳಿಸುವ ಪ್ರಯತ್ನವೂ ನಡೆದಿದೆ.

ಇತ್ತೀಚೆಗೆ ಮಥುರಾದಲ್ಲಿ ನಡೆದ ಬಿಜೆಪಿ ನಾಯಕರ ಸಭೆಯಲ್ಲಿಯೂ ಮುಂಬರುವ ಚುನಾವಣೆಯ ಕಾರ್ಯತಂತ್ರ, ಸಂಘಟನೆಯ ಬಲವರ್ಧನೆ ಹಾಗೂ ಕಾರ್ಯಕರ್ತರೊಂದಿಗೆ ಸಮನ್ವಯ ಸಾಧಿಸುವ ಕುರಿತು ಚರ್ಚಿಸಲಾಗಿತ್ತು. ಹಿರಿಯ ನಾಯಕರು ಜಿಲ್ಲೆಗಳಿಗೆ ಭೇಟಿ ನೀಡಿ ಸ್ಥಳೀಯ ಮುಖಂಡರು ಮತ್ತು ಕಾರ್ಯಕರ್ತರ ಅಹವಾಲುಗಳನ್ನು ಆಲಿಸುವ ಯೋಜನೆಯನ್ನೂ ರೂಪಿಸಲಾಗಿದೆ.

403 ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುವ ಉತ್ತರ ಪ್ರದೇಶದಲ್ಲಿ ಸತತ ಮೂರನೇ ಬಾರಿಗೆ ಅಧಿಕಾರ ಹಿಡಿಯುವ ಗುರಿಯನ್ನು ಬಿಜೆಪಿ ಹೊಂದಿದೆ. ಹೀಗಾಗಿ ಚುನಾವಣೆಗೆ ಹಲವು ತಿಂಗಳು ಬಾಕಿ ಇರುವಾಗಲೇ ಜನಸಂಪರ್ಕ ಅಭಿಯಾನಕ್ಕೆ ವೇಗ ನೀಡಿದೆ.

ಪ್ರಕೃತಿಯ ವಿರುದ್ಧ ನಡೆಯುವ ಯಾವುದೇ ಘಟನೆ ವಿಕೃತಿಯಾಗುತ್ತದೆ: ಸಾಹಿತಿ ಎಸ್.ಜಿ.ಸಿದ್ಧರಾಮಯ್ಯ

ಪಣಜಿ, ನ.23: ಕನ್ನಡವು ಕೇವಲ ಒಂದು ಜನಾಂಗದ ತೋಟವಲ್ಲ, ಅದು ಸರ್ವಜನಾಂಗದ ಶಾಂತಿಯ ತೋಟ, ಸರ್ವ ಸಂಸ್ಕೃತಿಗಳ, ಸರ್ವ ಧರ್ಮಗಳ, ಎಲ್ಲ ಭಾಷೆಗಳ ಶಾಂತಿಯ ತೋಟ. ಯಾವ ಸಂಸ್ಕೃತಿ ಜೀವ ಪರವಾಗಿರುವುದಿಲ್ಲವೋ ಅದು ಸಂಸ್ಕೃತಿಯಲ್ಲ, ಅದು ವಿಕೃತಿ. ಪ್ರಕೃತಿಯ ವಿರುದ್ಧವಾಗಿ ನಡೆಯುವ ಯಾವುದೇ ಘಟನೆ ಅದು ವಿಕೃತಿಯಾಗುತ್ತದೆ. ಮನುಷ್ಯನನ್ನು ಬಿಟ್ಟರೆ ಬೇರೆ ಯಾವ ಪ್ರಾಣಿಯೂ ಪ್ರಕೃತಿಗೆ ವಿರುದ್ಧವಾಗಿ ತನ್ನ ಬದುಕನ್ನು ಕಟ್ಟಿಕೊಳ್ಳುವುದಿಲ್ಲ ಎಂದು ಖ್ಯಾತ ಸಾಹಿತಿ ಹಾಗೂ ಸಂಸ್ಕೃತಿ ಚಿಂತಕ ಎಸ್.ಜಿ.ಸಿದ್ಧರಾಮಯ್ಯ ನುಡಿದರು.

ಗೋವಾ ಕನ್ನಡ ಸಮಾಜ ಪಣಜಿ, ಪದ ಸಂಸ್ಥೆ ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕರ್ನಾಟಕ ಸರ್ಕಾರ ಬೆಂಗಳೂರು ಇವರ ಸಹಯೋಗದಲ್ಲಿ ಪಣಜಿಯ ಪೊಮೆಂಟೊ ಸಭಾಗೃಹದಲ್ಲಿ ಆಯೋಜಿಸಿದ್ದ ಕನ್ನಡ ಹಬ್ಬ-2026 " ತಲ್ಲಣಿಸದಿರು ಕಂಡ್ಯ ತಾಳು ಮನವೇ" ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

ನಾವೆಲ್ಲ ಅಂದು ಓದಿದ್ದು ಕಟ್ಟಡ ಇಲ್ಲದ ಶಾಲೆಗಳಲ್ಲಿ. ದೇವಸ್ಥಾನದ ಜಗಲಿಗಳಲ್ಲಿ ಮೇಷ್ಟ್ರು ನಮಗೆ ಪಾಠ ಮಾಡಿದ್ರು. ಈವತ್ತು ಕೆಪಿಎಸ್ ಶಾಲೆಗಳ ಮುಖೇನ ಸರ್ಕಾರ ನಡೆಸುತ್ತಿರುವ ರೀತಿ ನೋಡಿದರೆ ನಮ್ಮ ಹಳ್ಳಿಗಾಡಿನ ಮಕ್ಕಳಿಗೆ, ಅದರಲ್ಲೂ ವಿಶೇಷವಾಗಿ ಹೆಣ್ಣುಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಖಾಸಗಿ ಸಂಸ್ಥೆಗಳಿಗೆ ಸರ್ಕಾರಿ ಶಾಲೆಗಳನ್ನು ದತ್ತು ಕೊಡಲಾಗುತ್ತಿದೆ. ಇಂದು ದತ್ತು ಆಗುತ್ತದೆ, ನಾಳೆ ಅದು ಅವರ ಸ್ವತ್ತು ಆಗುತ್ತದೆ. ಇದು ಮಾರಾಟ, ಇಂತಹ ಕೃಮಕ್ಕೆ ಸರ್ಕಾರ ಮುಂದಾಗಿರುವುದು ವಿಷಾದದ ಸಂಗತಿ ಎಂದು ಎಸ್.ಜಿ.ಸಿದ್ಧರಾಮಯ್ಯ ನುಡಿದರು.



ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ಸಂಗೀತ ಅಕಾಡಮಿ ಬೆಂಗಳೂರಿನ ಸದಸ್ಯ ದೇವರಾಜ್.ಡಿ ಮಾತನಾಡಿ, ಕನ್ನಡ ಭಾಷೆ ಮನಸ್ಸುಗಳನ್ನು ತಲುಪಬೇಕು, ನಮ್ಮ ಕಲೆ ಅವರಿಗೆ ಮುಟ್ಟಬೇಕು, ಅವರ ಮನಸ್ಸನ್ನು ತಲುಪಬೇಕು ಎಂಬ ಸದುದ್ದೇಶದಿಂದ ಹೊರ ನಾಡು ಗೋವಾ ರಾಜ್ಯದ ಪಣಜಿಯಲ್ಲಿ ಗೋವಾ ಕನ್ನಡ ಸಮಾಜದೊಂದಿಗೆ ಕೂಡಿಕೊಂಡು ಇಂದು ಈ ಕಾರ್ಯಕ್ರಮ ಆಯೋಜನೆ ಮಾಡಿದ್ದೇವೆ ಎಂದರು.

ಗೋವಾ ಕನ್ನಡ ಸಮಾಜದ ಅಧ್ಯಕ್ಷ ಅರುಣಕುಮಾರ್ ಸ್ವಾಗತ ಕೋರಿ ಪ್ರಾಸ್ತಾವಿಕ ಮಾತನಾಡಿ, ಜನವರಿ 1 ರಂದು ಗೋವಾ ಕನ್ನಡ ಸಮಾಜದ ವತಿಯಿಂದ "ಭಾರತ್ ಮಾತಾಕಿ ಜೈ" ಎಂಬ ಶೀರ್ಷಿಕೆಯ ಅಡಿಯಲ್ಲಿ ಗೋವಾದ ಎಲ್ಲ ಸಮಾಜದವರನ್ನು ಕೂಡಿಸಿಕೊಂಡು ಭಾರತ ಮಾತೆಯನ್ನು ಪೂಜಿಸುವ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಅಂದು ಕೂಡ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಲಲಿತಾ ಭಜನಾ ಮಂಡಳಿಯ ಮುಖ್ಯಸ್ಥೆ ವಾಣಿಶ್ರೀ ಭಟ್ ನೇತೃತ್ವದಲ್ಲಿ ಭಜನೆ ನಡೆಯಿತು. ಭರತನಾಟ್ಯ ಕಲಾವಿದೆ ಇಂಪನ ಕುಲಕರ್ಣಿ ನಿತ್ಯೋತ್ಸವ ಗೀತೆ ಹಾಡಿದರು. ಕುಮಾರಿ ಪುಯಷ್ಕಳ, ತನ್ವಿಕಾ,ಧನುಶ್ರೀ ಮತ್ತು ಚಿನ್ಮಯ್ ಭಟ್ ರವರಿಂದ ಜಾನಪದ ನೃತ್ಯ ಜರುಗಿತು. ಸಾಂಸ್ಕೃತಿಕ ವೈಭವ ಕಾರ್ಯಕ್ರಮದಲ್ಲಿ– ಸಂಗೀತ ಅಕಾಡಮಿ ಬೆಂಗಳೂರು ಸದಸ್ಯರಾದ ದೇವರಾಜ್ , ಅಂತರಾಷ್ಟ್ರೀಯ ಗಾಯಕ ಶಂಕರ ಭಾರತೀಪುರ, ಬಿ.ಎಸ್.ಶ್ರೀನಿವಾಸ ಮೂರ್ತಿ, ವಿದ್ವಾನ್ ರಾಮಕೃಷ್ಣ, ರಾಮಯ್ಯ ರವರಿಂದ ಗಾಯನ ವೈವಿದ್ಯ, ಭಕ್ತಿಗೀತೆ, ಭಾವಗೀತೆ, ಜನಪದಗೀತೆ, ರಂಗಗೀತೆ, ತತ್ವಪದ ದಾಸವಾಣಿ ಕಾರ್ಯಕ್ರಮ ಜರುಗಿತು. ಗೋವಾ ಕನ್ನಡ ಸಮಾಜದ ಕಾರ್ಯಕಾರಿ ಸಮಿತಿಯ ಸದಸ್ಯ ಪ್ರಕಾಶ್ ಭಟ್ ಕಾರ್ಯಕ್ರಮ ನಿರೂಪಿಸಿದರು. ಗೋವಾ ಕನ್ನಡ ಸಮಾಜದ ಕಾರ್ಯದರ್ಶಿ ಶ್ರೀಕಾಂತ ಲೋಣಿ ಕೊನೆಯಲ್ಲಿ ವಂದನಾರ್ಪಣೆಗೈದರು. ಗೋವಾ ರಾಜ್ಯದ ವಿವಿಧೆಡೆಯಿಂದ ಕನ್ನಡ ಸಂಘಟನೆಗಳ ಪ್ರತಿನಿಧಿಗಳು, ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರು.

ಮತದಾರರ ಪಟ್ಟಿ ತಿದ್ದುಪಡಿ ಅರ್ಜಿ ವಜಾಗೊಳಿಸಿದ ಸುಪ್ರೀಂ

ನವದೆಹಲಿ, ನ.23: ಮನೆ ಸಂಖ್ಯೆಗಳಲ್ಲಿನ ವ್ಯತ್ಯಾಸಗಳನ್ನು ಸರಿಪಡಿಸಿ ಉತ್ತರ ಪ್ರದೇಶದ ನಗರಪಾಲಿಕೆ ಮತದಾರರ ಪಟ್ಟಿಯನ್ನು ತಿದ್ದುಪಡಿ ಮಾಡುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನ

ಡಿಸೆಂಬರ್ 4ರಿಂದ 14ರವರೆಗೆ ಆಯೋಜನೆ: ಸಚಿವ ಕೃಷ್ಣಬೈರೇಗೌಡ ಮಾಹಿತಿ

ಬೆಂಗಳೂರಿನ ಸಾಂಸ್ಕೃತಿಕ ಪರಂಪರೆ ಬಲಪಡಿಸಲು ಬೆಂಗಳೂರು ಜಾತ್ರೆ

ಬೆಂಗಳೂರು, ನ.23: ವಿಶ್ವದ ಪ್ರಮುಖ ನಗರಗಳಲ್ಲಿ ಒಂದಾಗಿ ಬೆಳೆಯುತ್ತಿರುವ ಬೆಂಗಳೂರಿಗೆ ತನ್ನದೇ ಆದ ವಿಶಿಷ್ಟ ಸಾಂಸ್ಕೃತಿಕ ಪರಂಪರೆ ಇದೆ. ಆ ಸಾಂಸ್ಕೃತಿಕ ಪರಂಪರೆಯನ್ನು ಬಲಪಡಿಸುವ ಹಾಗೂ ಎಲ್ಲರಿಗೂ ಬದುಕು ಕಟ್ಟಿಕೊಟ್ಟಿರುವ ಇಡೀ ನಗರವನ್ನು ಒಂದು ದೊಡ್ಡ ಊರಿನಂತೆ ಕಂಡು ಜನರೆಲ್ಲರೂ ಒಟ್ಟಾಗಿ ಸಂಭ್ರಮಿಸುವ ಉದ್ದೇಶದಿಂದ ಬೆಂಗಳೂರು ಜಾತ್ರೆ ಹೆಸರಿನಲ್ಲಿ ಡಿ.4ರಿಂದ 13ರವರೆಗೆ ಬೆಂಗಳೂರು ಊರಹಬ್ಬ ಆಯೋಜಿಸಲಾಗುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ನಗರದ ಬೆಳವಣಿಗೆಗೆ ತಕ್ಕಂತೆ ಜನರ ಜೀವನದ ಗುಣಮಟ್ಟವೂ ಸುಧಾರಿಸಬೇಕು. ಜೀವನದ ಗುಣಮಟ್ಟ ಕೇವಲ ಮೂಲಸೌಕರ್ಯಕ್ಕೆ ಸೀಮಿತವಲ್ಲ. ಕಲೆ, ಸಾಹಿತ್ಯ, ಸಂಸ್ಕೃತಿ, ಹವ್ಯಾಸಗಳು ಮತ್ತು ಸಾರ್ವಜನಿಕ ಚಟುವಟಿಕೆಗಳೂ ವ್ಯಕ್ತಿಯ ಜೀವನವನ್ನು ಸಮಗ್ರವಾಗಿಸುತ್ತವೆ. 2023 ರಲ್ಲೇ ಮೂಡಿದ ಈ ಆಲೋಚನೆಯನ್ನು ಈ ವರ್ಷ ಅನುಷ್ಠಾನಗೊಳಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆಶಯದಂತೆ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ವಿವರಿಸಿದರು.

ಬೆಂಗಳೂರು ಜಾತ್ರೆ ಕೇವಲ ಸರ್ಕಾರದ ಕಾರ್ಯಕ್ರಮವಾಗಿರದೆ, ಸಾರ್ವಜನಿಕರು, ಸಂಘ–ಸಂಸ್ಥೆಗಳು, ಕಲಾವಿದರು ಮತ್ತು ವಿವಿಧ ಸಮುದಾಯಗಳೇ ಭಾಗಿಯಾಗುವ ಜನಹಬ್ಬವಾಗಬೇಕು ಎಂಬುದು ಮುಖ್ಯ ಉದ್ದೇಶವಾಗಿದೆ. ಹಿಂದೆ ಎಸ್.ಎಂ. ಕೃಷ್ಣ ಅವರ ಅವಧಿಯಲ್ಲಿ ಸುಮಾರು 300 ಚದರ ಕಿಲೋಮೀಟರ್ ವ್ಯಾಪ್ತಿಯಲ್ಲಿದ್ದ ಬೆಂಗಳೂರು ಇಂದು ಸುಮಾರು 750 ಚದರ ಕಿಲೋಮೀಟರ್‌ಗೆ ವಿಸ್ತರಿಸಿದೆ. ಇದಕ್ಕೆ ಅನುಗುಣವಾಗಿ, ಒಂದೇ ಸ್ಥಳಕ್ಕೆ ಸೀಮಿತಗೊಳಿಸದೆ ನಗರದ ವಿವಿಧ ಪಾಲಿಕೆಗಳು, ರಸ್ತೆಗಳು, ಉದ್ಯಾನವನಗಳು, ಸಭಾಂಗಣ, ಕಾಲೇಜು ಮೈದಾನ, ಮಾಲ್, ಟೆಕ್ ಪಾರ್ಕ್ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕಾರ್ಯಕ್ರಮಗಳನ್ನು ವಿಕೇಂದ್ರೀಕೃತವಾಗಿ ನಡೆಸಲಾಗುತ್ತಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪೊಲೀಸ್ ಇಲಾಖೆ, ಬೆಸ್ಕಾಂ, ಬಿಡಬ್ಲ್ಯೂ ಎಸ್‌ಎಸ್‌ಬಿ, ಬೆಂಗಳೂರು ಮೆಟ್ರೋ ಸೇರಿದಂತೆ ವಿವಿಧ ಸರ್ಕಾರಿ ಸಂಸ್ಥೆಗಳು, ಖಾಸಗಿ ಸಂಘಟನೆಗಳು, ಶಿಕ್ಷಣ ಸಂಸ್ಥೆಗಳು, ವಸ್ತುಸಂಗ್ರಹಾಲಯಗಳು ಹಾಗೂ ನಾಗರಿಕ ಸಂಘಟನೆಗಳ ಸಹಯೋಗದಲ್ಲಿ ಹಬ್ಬ ಜರುಗಲಿದೆ ಎಂದರು.



ಬೆಂಗಳೂರು ಜಾತ್ರೆಯಡಿ ನಡೆಯುವ ಎಲ್ಲ ಕಾರ್ಯಕ್ರಮಗಳ ವಿವರಗಳನ್ನು ಪ್ರತಿದಿನವೂ ನವೀಕರಿಸುತ್ತಾ ಬೆಂಗಳೂರು ಜಾತ್ರೆಯ ಅಧಿಕೃತ ವೆಬ್‌ಸೈಟ್ www.bengalurujatre.in ನಲ್ಲಿ ಪ್ರಕಟಿಸಲಾಗುತ್ತಿದೆ. ಸಾರ್ವಜನಿಕರು, ಹಿರಿಯ ನಾಗರಿಕರು ನಿಯಮಿತವಾಗಿ ವೆಬ್‌ಸೈಟ್ ಪರಿಶೀಲಿಸಿ ತಮ್ಮ ಸ್ನೇಹಿತರು ಹಾಗೂ ಬಂಧುಗಳೊಂದಿಗೆ ತಮ್ಮ ಆಸಕ್ತಿಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಹಬ್ಬವನ್ನು ಯಶಸ್ವಿಗೊಳಿಸಬೇಕೆಂದು ಸಚಿವ ಕೃಷ್ಣ ಬೈರೇಗೌಡ ಮನವಿ ಮಾಡಿದರು.



ಪಿಡಿಓಗಳಿಂದ ವಿಬಿ–ಜಿ ರಾಮ್ ಜಿ ಕಾರ್ಮಿಕರ ಮೇಲೆ ನಡೆದ ದೌರ್ಜನ್ಯವನ್ನು ಖಂಡಿಸಿ, ಕಲಬುರಗಿಯಲ್ಲಿ ಸೋಮವಾರ ಕರ್ನಾಟಕ ಪ್ರಾಂತ ರೈತ ಸಂಘದ ಸದಸ್ಯರು ಪ್ರತಿಭಟನೆ ನಡೆಸಿದರು.

ಕೆಪಿಎಸ್‌ಸಿ ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ ಜಾರಿ ನಿರ್ದೇಶನಾಲಯ

ಬೆಂಗಳೂರು, ನ.23: ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಜಾರಿ ನಿರ್ದೇಶನಾಲಯ (ಇ.ಡಿ.) ಸ್ಫೋಟಕ ಮಾಹಿತಿಯನ್ನು ಬಹಿರಂಗಪಡಿಸಿದ್ದು, ಕೆಪಿಎಸ್‌ಸಿಯ 13 ನೇಮಕಾತಿ ಅಧಿಸೂಚನೆಗಳಿಗೆ ಸಂಬಂಧಿಸಿದಂತೆ ನಡೆಸಿದ ಪರಿಶೀಲನೆಯಲ್ಲಿ ಒಎಂಆರ್ ಉತ್ತರಪತ್ರಿಕೆಗಳ ತಿದ್ದುಪಡಿ, ಸಿಸಿಟಿವಿ ದೃಶ್ಯಾವಳಿಗಳ ನಾಪತ್ತೆ, ಆಯ್ಕೆ ಸಮಿತಿ ಸಭೆಗಳಲ್ಲಿ ನಿಯಮ ಉಲ್ಲಂಘನೆ ಹಾಗೂ ಉದ್ಯೋಗ ಕೊಡಿಸುವುದಕ್ಕಾಗಿ ಅಭ್ಯರ್ಥಿಗಳಿಂದ ಹಣ ವಸೂಲಿ ಮಾಡಿರುವುದಕ್ಕೆ ಸಂಬಂಧಿಸಿದ ಸಾಕ್ಷ್ಯಗಳು ಪತ್ತೆಯಾಗಿವೆ ಎಂದು ಇ.ಡಿ. ಕರ್ನಾಟಕ ಹೈಕೋರ್ಟ್‌ಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿದೆ.

ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಸಾಹುಕಾರ್ ಎಸ್.ಶಿವಶಂಕರಪ್ಪ ಹಾಗೂ ಅಮಾನತುಗೊಂಡಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅಧಿಕಾರಾವಧಿಯಲ್ಲಿ ನಡೆದಿರುವ ನೇಮಕಾತಿ ಅಕ್ರಮಗಳ ಕುರಿತು ವರದಿಯಲ್ಲಿ ವಿವರಿಸಲಾಗಿದೆ. ವಿವಿಧ ನೇಮಕಾತಿ ಪ್ರಕ್ರಿಯೆಗಳಲ್ಲಿ ನಡೆದಿರುವ ಅಕ್ರಮಗಳು ವ್ಯವಸ್ಥಿತವಾಗಿದ್ದವು ಎಂಬುದಕ್ಕೆ ದಾಖಲೆಗಳು ಮತ್ತು ಸಾಕ್ಷ್ಯಗಳು ಲಭ್ಯವಾಗಿವೆ ಎಂದು ವರದಿಯಲ್ಲಿ ಉಲ್ಲೇಖವಾಗಿದೆ.

10 ಅಭ್ಯರ್ಥಿಗಳ ಒಎಂಆರ್ ಹಾಳೆ ತಿರುಚಿರುವ ಆರೋಪ: ಈ ಪ್ರಕರಣದಲ್ಲಿ 10 ಅಭ್ಯರ್ಥಿಗಳಿಗೆ ಸಂಬಂಧಿಸಿದ ಒಎಂಆರ್



ಉತ್ತರಪತ್ರಿಕೆಗಳನ್ನು ತಿರುಚಿರುವುದನ್ನು ಜ್ಞಾನೇಂದ್ರ ಗಂಗ್ವಾರ್ ಒಪ್ಪಿಕೊಂಡಿದ್ದಾರೆ ಎಂದು ಇಡಿ ವರದಿ ಉಲ್ಲೇಖಿಸಿದೆ. ಮತ್ತೊಂದೆಡೆ, ದಯಾನಂದ್ ಎಂಬ ವ್ಯಕ್ತಿಯೊಬ್ಬರು ಆಯ್ಕೆ ಪ್ರಕ್ರಿಯೆಯಲ್ಲಿ ಸ್ಥಾನ ಪಡೆಯಲು 30 ಲಕ್ಷ ರೂ.ಬೇಡಿಕೆ ಇಡಲಾಗಿತ್ತು ಎಂದು ಆರೋಪಿಸಿರುವುದನ್ನೂ ತನಿಖಾ ಸಂಸ್ಥೆ ದಾಖಲಿಸಿದೆ.

ಕೆಎಎಸ್ ಪರೀಕ್ಷೆಯಲ್ಲೂ 1.5 ಕೋಟಿ ಸಂಗ್ರಹ:: 2023ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆಯಲ್ಲಿನ ಅಕ್ರಮಗಳ ಬಗ್ಗೆಯೂ ಇಡಿ ಗಂಭೀರ ಆರೋಪಗಳನ್ನು ಮಾಡಿದೆ.ನಿವೃತ್ತ ಸಹಾಯಕ ಕಾರ್ಯದರ್ಶಿ ಪ್ರಕಾಶ್ ಟಿ. ಅವರಿಂದ ವಶಪಡಿಸಿಕೊಳ್ಳಲಾದ ದಾಖಲೆಗಳ ಪ್ರಕಾರ, 2025ರ ಮೇ 2ರಂದು ನಡೆದ ಕೆಎಎಸ್ ಮುಖ್ಯ ಪರೀಕ್ಷೆಯಲ್ಲಿ ಅಭ್ಯರ್ಥಿಗಳಿಗೆ ಹೆಚ್ಚಿನ ಅಂಕಗಳನ್ನು ಕೊಡಿಸುವ ಉದ್ದೇಶದಿಂದ 1.5 ಕೋಟಿ ರೂಪಾಯಿ ಸಂಗ್ರಹಿಸಲಾಗಿದೆ ಎಂಬ ಮಾಹಿತಿ ಬೆಳಕಿಗೆ ಬಂದಿದೆ. ಪರೀಕ್ಷಾ ನಿಯಂತ್ರಕರ ಆಪ್ತ ಸಹಾಯಕ ಆರ್.ಜೆ. ಮಹೇಶ್ ಕುಮಾರ್ ಅವರಿಗೆ ಒಂದು ಕೋಟಿಗೂ ಹೆಚ್ಚು ನಗದು ಹಾಗೂ 30 ಲಕ್ಷ ರೂ. ಮೌಲ್ಯದ ಚೆಕ್ ನೀಡಿರುವುದಕ್ಕೆ ಸಂಬಂಧಿಸಿದ ಹೇಳಿಕೆಗಳು ಮತ್ತು ದಾಖಲೆಗಳನ್ನು ಇಡಿ ಉಲ್ಲೇಖಿಸಿದೆ.

ಎಂವಿಐ, ಬಿಬಿಎಂಪಿ ನೇಮಕಾತಿಗಳಲ್ಲೂ ಅಕ್ರಮದ ನಂಟು

2016ರ ಮೋಟಾರು ವಾಹನ ನಿರೀಕ್ಷಕ ಪರೀಕ್ಷೆ ಹಾಗೂ 2024ರಲ್ಲಿ ಬಿಬಿಎಂಪಿ ಮತ್ತು ಜಲಸಂಪನ್ಮೂಲ ಇಲಾಖೆಯ ಸಹಾಯಕ ಎಂಜಿನಿಯರ್ ನೇಮಕಾತಿಗಳಲ್ಲಿಯೂ ಅಕ್ರಮಗಳು ನಡೆದಿರುವುದನ್ನು ಇಡಿ ಗುರುತಿಸಿದೆ. ಪ್ರಕಾಶ್.ಟಿ ಅವರಿಂದ ವಶಪಡಿಸಿಕೊಳ್ಳಲಾದ ಕೈಬರಹದ ಟಿಪ್ಪಣಿಗಳಲ್ಲಿ ಮೋಟಾರು ವಾಹನ ನಿರೀಕ್ಷಕ ಹುದ್ದೆಗೆ ಆಯ್ಕೆಯಾಗಲು ಪ್ರತಿ ಅಭ್ಯರ್ಥಿಯಿಂದ 5 ಲಕ್ಷದಿಂದ 10 ಲಕ್ಷ ರೂ.ವರೆಗೆ ಅಕ್ರಮ ಹಣ ಪಡೆಯಬೇಕಾಗಿತ್ತು ಎಂಬ ವಿವರಗಳಿವೆ ಎಂದು ಮೂಲಗಳು ತಿಳಿಸಿವೆ. ಈ ಹಣವನ್ನು ಮಹೇಶ್‌ಕುಮಾರ್ ಮೂಲಕ ಗಂಗ್ವಾರ್ ಸೇರಿದಂತೆ ಇತರರಿಗೆ ತಲುಪಿಸಲಾಗುತ್ತಿತ್ತು ಎಂಬ ಆರೋಪವೂ ಕೇಳಿಬಂದಿದೆ.

ಎಸ್‌ಐಟಿ ತನಿಖೆಗೆ ಮತ್ತಷ್ಟು ಬಲ:

ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳಿಗೆ ಸಂಬಂಧಿಸಿದಂತೆ ತಾನು ಸಂಗ್ರಹಿಸಿರುವ ಸಾಕ್ಷ್ಯಗಳು, ದಾಖಲೆಗಳು ಮತ್ತು ತನಿಖೆಯ ಅಂಶಗಳನ್ನು ವಿಶೇಷ ತನಿಖಾ ತಂಡದೊಂದಿಗೆ ಹಂಚಿಕೊಂಡಿರುವುದಾಗಿ ಇಡಿ ಹೈಕೋರ್ಟ್‌ಗೆ ತಿಳಿಸಿದೆ.ಇಡಿ ಒದಗಿಸಿರುವ ಮಾಹಿತಿಯ ಆಧಾರದ ಮೇಲೆ ಸಂಬಂಧಪಟ್ಟ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿ, ಮುಂದಿನ ತನಿಖೆಗಾಗಿ ಅವುಗಳನ್ನು ಎಸ್‌ಐಟಿಗೆ ವರ್ಗಾಯಿಸುವಂತೆ ನ್ಯಾಯಾಲಯ ಪೊಲೀಸರಿಗೆ ನಿರ್ದೇಶನ ನೀಡಿದೆ.

ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಎಐ ಬಲ: ತುರ್ತು ಚಿಕಿತ್ಸೆಗೆ 2.50 ಲಕ್ಷ ರೂ.ವರೆಗೆ ನೆರವು– ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್

ಬೆಂಗಳೂರು, ನ.23: ರಾಜ್ಯದಲ್ಲಿ ರಸ್ತೆ ಅಪಘಾತಗಳು ಮತ್ತು ಅವುಗಳಿಂದ ಸಂಭವಿಸುವ ಸಾವು–ನೋವುಗಳನ್ನು ಗಣನೀಯವಾಗಿ ತಗ್ಗಿಸಲು ಕೃತಕ ಬುದ್ಧಿಮತ್ತೆ ಆಧಾರಿತ ಸ್ಮಾರ್ಟ್ ಜಾರಿ ವ್ಯವಸ್ಥೆ, ಅಪಘಾತ ವಲಯಗಳ ವೈಜ್ಞಾನಿಕ ಸುಧಾರಣೆ ಹಾಗೂ ತ್ವರಿತ ತುರ್ತು ಚಿಕಿತ್ಸಾ ಸೌಲಭ್ಯಗಳನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ತಿಳಿಸಿದ್ದಾರೆ.

ತಮ್ಮ ಅಧ್ಯಕ್ಷತೆಯಲ್ಲಿ ನಡೆದ 24ನೇ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ ಸಭೆಯ ಬಳಿಕ ಮಾಹಿತಿ ನೀಡಿದ ಅವರು, ರಸ್ತೆ ಸುರಕ್ಷತೆಯು ಕೇವಲ ಒಂದು ಇಲಾಖೆಯ ಕೆಲಸವಲ್ಲ; ಪೊಲೀಸ್, ಸಾರಿಗೆ, ಆರೋಗ್ಯ, ಲೋಕೋಪಯೋಗಿ, ನಗರಾಭಿವೃದ್ಧಿ ಮತ್ತು ಸ್ಥಳೀಯ ಸಂಸ್ಥೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕಾದ ಮಹತ್ವದ ಸಾರ್ವಜನಿಕ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ನೋಂದಾಯಿತ ವಾಹನಗಳ ಸಂಖ್ಯೆ ನಿರಂತರವಾಗಿ ಹೆಚ್ಚಾಗುತ್ತಿದ್ದರೂ, 2018ರಿಂದ 2025ರ ಅವಧಿಯಲ್ಲಿ ಪ್ರತಿ 10,000 ವಾಹನಗಳಿಗೆ ಸಂಭವಿಸುವ ಅಪಘಾತಗಳ ಪ್ರಮಾಣ ಶೇ. 27ರಷ್ಟು (17.28 ರಿಂದ 12.56ಕ್ಕೆ) ಹಾಗೂ ಮರಣ ದರ ಶೇ. 21ರಷ್ಟು (4.55 ರಿಂದ 3.59ಕ್ಕೆ) ಇಳಿಕೆಯಾಗಿದೆ. ಪ್ರಸಕ್ತ ಜನವರಿಯಿಂದ ಅಕ್ಟೋಬರ್‌ವರೆಗೆ 37,443 ಅಪಘಾತಗಳು ಸಂಭವಿಸಿದ್ದು, ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಮೃತಪಟ್ಟವರ ಸಂಖ್ಯೆಯಲ್ಲಿ 220ರಷ್ಟು ಇಳಿಕೆ ಕಂಡುಬಂದಿದೆ.

ಸಂಚಾರ ನಿಯಮ ಉಲ್ಲಂಘನೆ ಮತ್ತು ಅಪಘಾತ ಮಾಡಿ ಪರಾರಿಯಾಗುವ (ಹಿಟ್ ಅಂಡ್ ರನ್) ವಾಹನಗಳನ್ನು ಪತ್ತೆಹಚ್ಚಲು ಗುರುತಿಸಲಾದ 87 ಸ್ಥಳಗಳ ಪೈಕಿ 27 ಕಡೆ ಎ.ಐ ಆಧಾರಿತ ಸ್ಮಾರ್ಟ್ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, 20 ಕಡೆ ಇ–ಚಲನ್ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿವೆ. ಇದರಿಂದ ಈಗಾಗಲೇ 6,500 ಚಲನ್‌ಗಳನ್ನು ದಾಖಲಿಸಲಾಗಿದ್ದು, ಉಳಿದ 60 ಸ್ಥಳಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ. ಅಲ್ಲದೆ, ರಾಜ್ಯ ಮತ್ತು ಕೇಂದ್ರ ಸರ್ಕಾರ ಗುರುತಿಸಿರುವ ಅಪಘಾತ ಸಂಭವಿಸುವ ಬ್ಲಾಕ್ ಸ್ಪಾಟ್ ಗಳಲ್ಲಿ ಅಲ್ಪಾವಧಿ ಮತ್ತು ದೀರ್ಘಾವಧಿ ಸುಧಾರಣಾ ಕಾಮಗಾರಿಗಳನ್ನು ಚುರುಕುಗೊಳಿಸಲಾಗಿದೆ.

ಚಾಲನಾ ಪರವಾನಗಿ ಪರೀಕ್ಷೆಗೂ ಮುನ್ನ ಜಾಗೃತಿ ವಿಡಿಯೋ ಕಡ್ಡಾಯ:

ಚಾಲನಾ ತರಬೇತಿ ಸಂಸ್ಥೆಗಳ ಮೇಲೆ ಸಾರಿಗೆ ಇಲಾಖೆ ನಿರಂತರ ನಿಗಾ ಇಡಬೇಕು ಹಾಗೂ ಚಾಲನಾ ಪರವಾನಗಿ ಪರೀಕ್ಷೆಗೆ ಹಾಜರಾಗುವ ಪ್ರತಿಯೊಬ್ಬ ಅಭ್ಯರ್ಥಿಗೂ ಹೆಲ್ಮೆಟ್, ಸೀಟ್ ಬೆಲ್ಟ್, ವೇಗ ನಿಯಂತ್ರಣ, ಮದ್ಯಪಾನ ಮತ್ತು ಮೊಬೈಲ್ ಬಳಕೆ ನಿಷೇಧದ ಕುರಿತ ಜಾಗೃತಿ ವಿಡಿಯೋಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ವಿಡಿಯೋ ವೀಕ್ಷಿಸಿ ನಿಯಮಗಳನ್ನು ಅರಿತಿರುವ ಬಗ್ಗೆ ಅಭ್ಯರ್ಥಿಗಳಿಂದ ಸಹಿ ಪಡೆಯುವ ವ್ಯವಸ್ಥೆ ಜಾರಿಗೆ ತರುವಂತೆ ಸಾರಿಗೆ ಇಲಾಖೆಗೆ ನಿರ್ದೇಶನ ನೀಡಲಾಗಿದೆ.



ತುರ್ತು ಚಿಕಿತ್ಸೆಗೆ ರೂ. 2.50 ಲಕ್ಷದವರೆಗೆ ನಗದುರಹಿತ ನೆರವು:

ಪಿಎಂ–ರಹತ್ ಮತ್ತು ಸಿಎಂ–ಆರ್ಕ್: 2026ರ ಏಪ್ರಿಲ್ 15ರಿಂದ ಜಾರಿಯಾಗಿರುವ 'ಪಿಎಂ–ರಹತ್' ಯೋಜನೆಯಡಿ ಅಪಘಾತದ ಸಂತ್ರಸ್ತರಿಗೆ 7 ದಿನಗಳವರೆಗೆ ಗರಿಷ್ಠ ರೂ.1.50 ಲಕ್ಷದವರೆಗೆ ನಗದುರಹಿತ ಚಿಕಿತ್ಸೆ ನೀಡಲಾಗುತ್ತಿದೆ. ಇದಕ್ಕೆ ಪೂರಕವಾಗಿ 'ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ' ಯೋಜನೆಯಡಿ ಹೆಚ್ಚುವರಿ ರೂ. 1.00 ಲಕ್ಷ ಸೇರಿದಂತೆ ಒಟ್ಟು ರೂ. 2.50 ಲಕ್ಷದವರೆಗೆ ಚಿಕಿತ್ಸಾ ನೆರವು ಲಭ್ಯವಿದೆ. ರಾಜ್ಯದ 3,445 ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳು ಈ ಯೋಜನೆಯಡಿ ನೋಂದಣಿಯಾಗಿವೆ.

ರೂ. 322 ಕೋಟಿ ಕ್ರಿಯಾ ಯೋಜನೆ:

2026–27ನೇ ಸಾಲಿನ ರಸ್ತೆ ಸುರಕ್ಷತಾ ಕ್ರಮಗಳಿಗಾಗಿ ಒಟ್ಟು ರೂ. 322 ಕೋಟಿ ಮೊತ್ತದ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, ಇದರಲ್ಲಿ ರೂ. 233.11 ಕೋಟಿಯನ್ನು ಮುಂದುವರಿದ ಕಾಮಗಾರಿಗಳಿಗೆ ಹಾಗೂ ರೂ. 88.89 ಕೋಟಿಯನ್ನು ಹೊಸ ಕಾಮಗಾರಿಗಳಿಗೆ ಮೀಸಲಿಡಲಾಗಿದೆ. ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮಾಧ್ಯಮಗಳು, ಚಿತ್ರಮಂದಿರಗಳು ಮತ್ತು ಬಸ್ ನಿಲ್ದಾಣಗಳಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಲಾಗುವುದು ಎಂದು ಡಾ. ಶಾಲಿನಿ ರಜನೀಶ್ ತಿಳಿಸಿದರು.

ತಮ್ಮ ವಿರುದ್ಧ ಎಫ್‌ಐಆರ್ ರದ್ದು ಕೋರಿ ಹೈಕೋರ್ಟ್ ಮೆಟ್ಟಿಲೇರಿದ ರವಿಗಂಜ್

ಬೆಂಗಳೂರು, ನ.23: ವಿಶ್ವಗುರು ಬಸವಣ್ಣ ಹಾಗೂ ಲಿಂಗಾಯತ ಸಮುದಾಯದ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದಡಿ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಅನಿವಾಸಿ ಭಾರತೀಯ ಲೇಖಕ ರವಿ ಹಂಜಗಿಮಠ್ (ರವಿ ಹಂಜ್) ಅವರು ಹೈಕೋರ್ಟ್ ಮೆಟ್ಟಿಲೇರಿದ್ದಾರೆ.



ರವಿ ಹಂಜಿಗಿಮಠ್ ಈ ಅರ್ಜಿ ಸಲ್ಲಿಸಿದ್ದು, ಅರ್ಜಿಯಲ್ಲಿ ದೂರುದಾರ ಅರವಿಂದ ಜತ್ತಿ ಮತ್ತು ಹೈಗ್ರೌಂಡ್ಸ್ ಠಾಣೆಯ ಪೊಲೀಸರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದ್ದು, ಇನ್ನಷ್ಟೇ ವಿಚಾರಣೆಗೆ ನಿಗದಿಯಾಗಬೇಕಿದೆ.

ಪ್ರಸ್ತಾವಿತ ಪುಸ್ತಕದಲ್ಲಿ ಉಲ್ಲೇಖಿಸಿರುವ ಅಂಶಗಳು ತಮ್ಮ ಸ್ವಂತ ಅಭಿಪ್ರಾಯವಲ್ಲ. ಅವು ಬಿ.ಎಲ್.ರೈಸ್ ಅವರ 'ಮೈಸೂರು ಗೆಜೆಟಿಯರ್', ಬಸವ ಪುರಾಣ ಹಾಗೂ ಡಾ.ಎಂ.ಎಂ.ಕಲಬುರ್ಗಿ ಸೇರಿ ಹಲವು ವಿದ್ವಾಂಸರ ಸಂಶೋಧನಾ ಕೃತಿಗಳನ್ನು ಆಧರಿಸಿದ್ದಾಗಿವೆ.

ಐತಿಹಾಸಿಕ ಮತ್ತು ಸಾಹಿತ್ಯಿಕ ವಿಮರ್ಶೆ ನಡೆಸುವುದು ಸಂವಿಧಾನದಡಿ ಬರುವ ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ವ್ಯಾಪ್ತಿಗೆ ಬರುತ್ತದೆ. ಬಸವಣ್ಣ ನವರನ್ನಾಗಲಿ ಅಥವಾ ಲಿಂಗಾಯತ ಸಮುದಾಯವನ್ನಾಗಲಿ ಅವ ಮಾನಿಸುವ ಉದ್ದೇಶ ತಮಗಿಲ್ಲ. ಬಸವ ಸಮಿತಿಗೆ ಸರ್ಕಾರದಿಂದ ಮಂಜೂರಾಗಿರುವ ಭೂಮಿಯ ದುರ್ಬಳಕೆ ಕುರಿತು ತಾವು ಬರೆದಿದ್ದ ಲೇಖನಕ್ಕೆ ಪ್ರತೀಕಾರವಾಗಿ ದೂರುದಾರರು ರಾಜಕೀಯ ಪ್ರಭಾವ ಬಳಸಿ ಈ ಸುಳ್ಳು ದೂರು ದಾಖಲಿಸಿದ್ದಾರೆ. ತಮ್ಮ ವಿರುದ್ಧ ಲುಕ್‌ಔಟ್ ನೋಟಿಸ್ ಆಧಾರದ ಮೇಲೆ ನವೆಂಬರ್ 21ರಂದು ಕೊಚ್ಚಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತಮ್ಮನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ತಮ್ಮನ್ನು ಕೊಂದವರಿಗೆ 5 ಲಕ್ಷ ರೂ ಬಹುಮಾನ ನೀಡುವುದಾಗಿ ವ್ಯಕ್ತಿಯೊಬ್ಬರು ಬಹಿರಂಗವಾಗಿ ಘೋಷಣೆ ಮಾಡಿದ್ದು, ಇದು ಸಂವಿಧಾನದ 21ನೇ ವಿಧಿಯ ಜೀವಿಸುವ ಹಕ್ಕಿಗೆ ಧಕ್ಕೆ ತಂದಿದೆ. ಸರ್ಕಾರದ ಮೂವರು ಸಚಿವರು ಸುದ್ದಿಗೋಷ್ಠಿ ನಡೆಸಿ ತಮ್ಮ ವಿರುದ್ಧ ಆರೋಪ ಮಾಡಿರುವುದರಿಂದ ಹಾಗೂ ಮುಖ್ಯಮಂತ್ರಿಗಳು ಬಹಿರಂಗ ಹೇಳಿಕೆ ನೀಡಿರುವುದರಿಂದ ಪೊಲೀಸ್ ತನಿಖೆಯು ಒತ್ತಡಕ್ಕೆ ಒಳಗಾಗಿ ನಿಷ್ಪಕ್ಷಪಾತವಾಗಿ ನಡೆಯುವ ಸಾಧ್ಯತೆಯಿಲ



ಕರ್ನಾಟಕದಾದ್ಯಂತ ಇರುವ ಸಾವಿರಾರು 'ಆಶಾ' ಕಾರ್ಯಕರ್ತೆಯರು, ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೋಮವಾರದಂದು ತಮ್ಮ ಅನಿರ್ದಿಷ್ಟಾವಧಿ ಹಗಲು-ರಾತ್ರಿ ಪ್ರತಿಭಟನೆಯನ್ನು ಏಳನೇ ದಿನವೂ ಮುಂದುವರಿಸಿದ್ದಾರೆ.

ಖರ್ಗೆ ತವರಿನಲ್ಲಿ ಬಿಜೆಪಿಯ ಬೃಹತ್ ಪಾದಯಾತ್ರೆ

ರಕ್ಷಣಾ ಸಚಿವ ರಾಜನಾಥ್ ಸಿಂಗ್‌ರ 'ಲೋಕತಂತ್ರ ಬಚಾವೋ, ಅರಾಜಕತಾ ಹಟಾವೋ'



ಕಲಬುರಗಿ, ನ. 23: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ತವರು ನೆಲ ಕಲಬುರಗಿಯಲ್ಲಿ ಬಿಜೆಪಿ ಬೃಹತ್ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದೆ. ನವೆಂಬರ್ 25ರಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಕಲಬುರಗಿಗೆ ಆಗಮಿಸಲಿದ್ದು, ಅಂದು 'ಲೋಕತಂತ್ರ ಬಚಾವೋ, ಅರಾಜಕತೆ ಹಠಾವೋ' ಘೋಷವಾಕ್ಯದಡಿ ನಡೆಯಲಿರುವ ಬೃಹತ್ ಪಾದಯಾತ್ರೆಗೆ ಚಾಲನೆ ನೀಡಲಿದ್ದಾರೆ.

ಕಲಬುರಗಿಯಲ್ಲಿ ಈ ಕುರಿತು ಮಾತನಾಡಿ ಮಾಹಿತಿ ನೀಡಿದ ಮಾಜಿ ಸಚಿವ ರಾಜೂಗೌಡ ಅವರು, ಪ್ರಪ್ರಥಮ ಬಾರಿಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಕಲಬುರಗಿಗೆ ಆಗಮಿಸುತ್ತಿದ್ದಾರೆ. ನವೆಂಬರ್ 25ರಂದು ನಗರದ ನೆಹರೂ ಗಂಜ್ ಪ್ರದೇಶದ ನಗರೇಶ್ವರ ಶಾಲೆಯಿಂದ ಜಗತ್ ವೃತ್ತದ ವರೆಗೆ ಲೋಕತಂತ್ರ ಬಚಾವೋ ಬೃಹತ್ ಪಾದಯಾತ್ರೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ದೇಶದ 13 ಸ್ಥಳಗಳಲ್ಲಿ ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಎಂಬ ಘೋಷವಾಕ್ಯದಡಿ ಬಿಜೆಪಿ ಪಾದಯಾತ್ರೆ ಹಮ್ಮಿಕೊಂಡಿದೆ. ಕರ್ನಾಟಕದಲ್ಲಿ ಈ ಪಾದಯಾತ್ರೆಗೆ ಕಲಬುರಗಿ ಜಿಲ್ಲೆಯನ್ನು ಆಯ್ಕೆ ಮಾಡಲಾಗಿದೆ. ಇದರಿಂದ ನಮ್ಮ ಪಕ್ಷಕ್ಕೆ ಒಳ್ಳೆಯ ಬೂಸ್ಟ್ ದೊರೆಯಲಿದೆ. ಕಾರ್ಯಕರ್ತರು ಚುರುಕುಗೊಳ್ಳಲಿದ್ದಾರೆ. ಹಲವು ಸಾವಿರ ಕಾರ್ಯಕರ್ತರು ಬಿಜೆಪಿ ಅಭಿಮಾನಿಗಳು ಈ ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವ ಮೂಲಕ ಲೋಕತಂತ್ರಕ್ಕೆ ಕಾಂಗ್ರೆಸ್ಸಿನಿಂದ ಹೇಗೆ ಅಪಾಯ ಎದುರಾಗಿದೆ ಎಂಬುದನ್ನು ಜನರಿಗೆ ತಿಳಿಸಲಾಗುವದು. ಮುಖ್ಯವಾಗಿ ದೇಶದಲ್ಲಿ ನಡೆಯುತ್ತಿರುವ ಚುನಾವಣಾ ಆಯೋಗದ ಎಸ್‌ಐಆರ್ ಪರವಾಗಿಯೂ ಬಿಜೆಪಿ ನಾಯಕರು ಪ್ರಚಾರ ನಡೆಸಲಿದ್ದಾರೆ. ಎಸ್‌ಐಆರ್ ವಿಷಯಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರು ಒಂದು ಸಾಂವಿಧಾನಿಕ ಸಂಸ್ಥೆಗೆ ಮಸಿ ಬಳಿಯಲು ಹೊರಟಿದ್ದಾರೆ. ಅವರ ಈ ಷಡ್ಯಂತ್ರವನ್ನು ಬಯಲುಗೊಳಿಸಲಾಗುವುದು. ಇದೇ ವೇಳೆ ಇವಿಎಂ ಕುರಿತು ಕಾಂಗ್ರೆಸ್ ನಾಯಕರ ಆರೋಪಗಳಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ರಾಜೂಗೌಡ, 'ಒಂದು ಸುಳ್ಳನ್ನು ನೂರು ಬಾರಿ ಹೇಳಿದರೆ ಅದು ಸತ್ಯವಾಗುತ್ತದೆ' ಎಂಬಂತೆ ಕಾಂಗ್ರೆಸ್ ನಾಯಕರು ಪದೇ ಪದೇ ಇವಿಎಂ ಸರಿಯಿಲ್ಲ ಎಂದು ಆರೋಪಿಸುತ್ತಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿರುವುದೂ ಇದೇ ಇವಿಎಂ ಮೂಲಕವೇ ಅಲ್ಲವೇ? ಹಾಗಾದರೆ ಕಾಂಗ್ರೆಸ್ ಹೇಗೆ ಅಧಿಕಾರಕ್ಕೆ ಬಂತು? ನಾವು ಸೋತಿದ್ದು ಹೇಗೆ?' ತೆಲಂಗಾಣ ಮತ್ತು ಇತ್ತೀಚೆಗೆ ಕೇರಳದಲ್ಲಿ ಕಾಂಗ್ರೆಸ್ ಹೇಗೆ ಅಧಿಕಾರಕ್ಕೆ ಬಂತು? ಅಲ್ಲೂ ಕೂಡ ಇದೇ ಇವಿಎಂ ಬಳಸಿರಲಿಲ್ಲವೇ ಎಂದು ಪ್ರಶ್ನಿಸಿದರು.

ಇದೀಗ ರಾಜಸ್ಥಾನದಲ್ಲಿ ನಡೆದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನಗಳನ್ನು ಪಡೆದುಕೊಂಡು ಆಯ್ಕೆಯಾಗಿದೆ. ಈಗಲೂ ಚುನಾವಣಾ ಆಯೋಗದ ಮುಖ್ಯ ಆಯುಕ್ತರನ್ನು ರಾಜೀನಾಮೆ ಕೊಡು ಎಂದು ಕೇಳುವಿರಾ? ನಿಮಗೆ ಮಾನ ಮರ್ಯಾದೆ ಏನಾದರೂ ಇದ್ದರೆ ನಿಮ್ಮ ಪಕ್ಷ ಆಯ್ಕೆಯಾದ ಎಲ್ಲ ರಾಜ್ಯಗಳ ವಿಧಾನಸಭೆಗಳನ್ನು ವಿಸರ್ಜಿಸಿ ಇವಿಎಂ ವಿರುದ್ಧ ಪ್ರತಿಭಟಿಸಿ ನೋಡೋಣ ಎಂದು ಸವಾಲು ಹಾಕಿದರು.

ಕಾಂಗ್ರೆಸ್ ನಾಯಕರು ಚುನಾವಣೆಯಲ್ಲಿ ಸೋತಾಗ ಮಾತ್ರ ಇವಿಎಂ ದೋಷದ ಬಗ್ಗೆ ಮಾತನಾಡುತ್ತಾರೆ. ನಿಜವಾಗಿಯೂ ಇವಿಎಂನಲ್ಲಿ ದೋಷವಿದೆ ಎಂದಾದರೆ, ರಾಜ್ಯದ ಎಲ್ಲಾ ಕಾಂಗ್ರೆಸ್ ನಾಯಕರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿ ಮತ್ತೆ ಮತಪತ್ರಗಳ ಮೂಲಕ ಚುನಾವಣೆಯನ್ನು ಎದುರಿಸಲಿ ಆಯ್ಕೆಯಾಗಿ ಬರಲಿ ನೋಡೋಣ ಎಂದು ರಾಜೂಗೌಡರು ಸವಾಲು ಹಾಕಿದರು.

ಕಲಬುರಗಿಯಲ್ಲಿ ನವೆಂಬರ್ 25ರಂದು ನಡೆಯಲಿರುವ ಪಾದಯಾತ್ರೆಯ ಮೂಲಕ ಬಿಜೆಪಿ ತನ್ನ ರಾಜಕೀಯ ಶಕ್ತಿಯನ್ನು ಪ್ರದರ್ಶಿಸಲು ಸಿದ್ಧತೆ ನಡೆಸಿದೆ. ಇದು ಅತ್ಯಂತ ಯಶಸ್ವಿಯಾಗಲಿದೆ ಎಂದ ಅವರು, ಈಗಾಗಲೇ ಎಲ್ಲಾ ಸಿದ್ಧತೆಗಳೂ ಪೂರ್ಣಗೊಂಡಿವೆ. ರಾಷ್ಟ್ರನಾಯಕರು ಆಗಮಿಸುತ್ತಿರುವುದರಿಂದ ಇಡೀ ದೇಶ ಕಲುಬುರಗಿ ಕಡೆ ನೋಡುವಂತೆ ಈ ಪಾದಯಾತ್ರೆ ನಡೆಯಲಿದೆ ಎಂದೂ ರಾಜೂಗೌಡರು ತಿಳಿಸಿದರು.

ಹಲವು ಶಾಸಕರು ಕಣ್ಣಿಟ್ಟಿದ್ದ, ಕೆಕೆಆರ್‌ಡಿಬಿ ಅಧ್ಯಕ್ಷ ಸ್ಥಾನಕ್ಕೆ ಶಾಸಕ ಬಸನಗೌಡ ದದ್ದಲ್ ನೇಮಕ



ಕಲಬುರಗಿ, ನ. 23: ಡಾ.ಅಜಯಸಿಂಗ್ ಸಚಿವರಾದ ನಂತರ, ಕಳೆದೆರಡು ತಿಂಗಳಿನಿಂದ ಖಾಲಿ ಇರುವ ಇಲ್ಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಕೊನೆಗೂ ಹೊಸದಾಗಿ ಅಧ್ಯಕ್ಷರನ್ನು ನೇಮಕ ಮಾಡಲಾಗುತ್ತಿದ್ದು, ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರ ನೇಮಕಗೊಂಡಿದ್ದಾರೆ.

ಡಾ. ಅಜಯಸಿಂಗ್ ಸಚಿವರಾದ ನಂತರ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ಖಾಲಿ ಇರುವ, ಅದರಲ್ಲೂ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುವ ಮಂಡಳಿಗೆ ದದ್ದಲ್ ಅವರನ್ನು ಅಧ್ಯಕ್ಷರನ್ನಾಗಿ ನಿಯೋಜಿಸಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಸಮ್ಮತಿಯ ನಂತರ ಈ ನೇಮಕಾತಿ ನಡೆದಿದೆ.

ವಾರ್ಷಿಕ ಐದು ಸಾವಿರ ಕೋಟಿ ಗಾತ್ರದ ಬಜೆಟ್ ಹೊಂದಿರುವ ಮತ್ತು ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿಯನ್ನು ಹೊಂದಿರುವ ಈ ಮಂಡಳಿಗೆ ನೇಮಕಗೊಳ್ಳಲು ಹಲವು ಶಾಸಕರು ಲಾಬಿ ನಡೆಸಿದ್ದರು. ಮಲ್ಲಿಕಾರ್ಜುನ ಖರ್ಗೆ ಅವರ ಅತ್ಯಂತ ಆಪ್ತರಾಗಿರುವ ಶಾಸಕ ಅಲ್ಲಮಪ್ರಭು ಪಾಟೀಲ್, ಸಿದ್ದರಾಮಯ್ಯ ಅವರ ಆಪ್ತರಾಗಿರುವ ಬಿ.ಆರ್.ಪಾಟೀಲ್, ಬೀದರ ಶಾಸಕ ರಹೀಂ ಖಾನ್, ರಾಯಚೂರು ಜಿಲ್ಲೆಯ ಶಾಸಕ ಬಾದರ್ಲಿ ಹಂಪನಗೌಡರು ಮತ್ತು ಎನ್.ಎಸ್.ಬೋಸರಾಜು ಅವರೂ ಈ ಹುದ್ದೆ ಅಲಂಕರಿಸಲು ಸಾಕಷ್ಟು ಪ್ರಯತ್ನ ಮಾಡಿದ್ದರೆನ್ನಲಾಗಿದೆ.

ಆದರೆ ಕೊನೆಗೂ ರಾಯಚೂರು ಜಿಲ್ಲೆಯ ಶಾಸಕ ಬಸನಗೌಡ ದದ್ದಲ್‌ರಿಗೆ ಈ ಸ್ಥಾನ ಒಲಿದಿದ್ದು, ಸಚಿವ ಸ್ಥಾನದಿಂದ ವಂಚಿತರಾಗಿ ಈ ಮಂಡಳಿಯ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಬಹುತೇಕ ಶಾಸಕರಿಗೆ ನಿರಾಸೆಯುಂಟು ಮಾಡಿದೆ.

ವಿಜಯಪುರ ಪಟ್ಟಣಕ್ಕೆ ಶೀಘ್ರ ಹೆಚ್ಚುವರಿ ಬಸ್ ವ್ಯವಸ್ಥೆ ಅಧಿಕಾರಿಗಳಿಗೆ ಸಚಿವ ಕೆ.ಎಚ್ ಮುನಿಯಪ್ಪ ಸೂಚನೆ



ಬೆಂ.ಗ್ರಾಮಾಂತರ ಜಿಲ್ಲೆ, ನ.23: ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣದಲ್ಲಿ ವಿದ್ಯಾರ್ಥಿಗಳ, ಸಾರ್ವಜನಿಕರ ಅನುಕೂಲಕ್ಕಾಗಿ ಶೀಘ್ರ ಹೆಚ್ಚುವರಿ ಬಸ್ ವ್ಯವಸ್ಥೆಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್ ಮುನಿಯಪ್ಪ ಸೂಚಿಸಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕೆಎಸ್ಆರ್‌ಟಿಸಿ ಹಾಗೂ ಬಿಎಂಟಿಸಿ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಬಳಿಕ ಮಾತನಾಡಿ ವಿಜಯಪುರ ಪಟ್ಟಣದಲ್ಲಿ ವಿದ್ಯಾರ್ಥಿಗಳು ಬೆಳಗಿನಜಾವ ಶಾಲಾ ಕಾಲೇಜುಗಳಿಗೆ ತೆರಳಲು ಬಸ್ ಸಮಸ್ಯೆ ಉಂಟಾಗುತ್ತಿದೆ ಎಂದು ವಿದ್ಯಾರ್ಥಿಗಳು, ಎಬಿವಿಪಿ ಸಂಘಟನೆ ತಿಳಿಸಿದ್ದರು. ಜನಪ್ರತಿನಿಧಿಗಳು ಕೂಡ ಈ ಬಗ್ಗೆ ತಿಳಿಸಿದ್ದರು. ಇಂದು ಅಧಿಕಾರಿಗಳ ಸಭೆ ನಡೆಸಿ ಮಾಹಿತಿ ಪಡೆದಿದ್ದೇನೆ. ಸಾಕಷ್ಟು ಬಸ್ ಗಳ ಸೌಲಭ್ಯವಿದೆ, ಸ್ವಲ್ಪ ಅನಾನುಕೂಲ ಆಗಿದೆ. ಇದನ್ನು ಸರಿಪಡಿಸಲು ಹೆಚ್ಚುವರಿ ಬಸ್ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು.

ಬಿಎಂಟಿಸಿ ಎಕ್ಸ್‌ಪ್ರೆಸ್ ಬಸ್ ಗಳು ಸಾಕಷ್ಟು ಬಿಟ್ಟಿದ್ದಾರೆ ಅದರಲ್ಲಿ ವಿದ್ಯಾರ್ಥಿಗಳು ಬಸ್ ಪಾಸ್‌ಗೆ ಅನುಮತಿ ಇಲ್ಲ. ಹಾಗಾಗಿ ಅಲ್ಲಿ ಅನಾನುಕೂಲ ಆಗುತ್ತದೆ. ಸಾಮಾನ್ಯವಾಗಿ ಬೆಳಗ್ಗೆ 07 ರಿಂದ 9 ಗಂಟೆ ಅವಧಿಯಲ್ಲಿ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ಹೊರಡಲು ಬಸ್ ಸ್ಟಾಂಡ್ ಗೆ ಬರುತ್ತಾರೆ. ಈ ಅವಧಿಯಲ್ಲಿ ಹೆಚ್ಚುವರಿ ಬಸ್ ಗಳ ಅವಶ್ಯಕತೆ ಇದೆ. ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದು ವಾರ-10 ದಿನದೊಳಗೆ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು.

ಚಿಕ್ಕಬಳ್ಳಾಪುರ-ಕೋಲಾರ ಮಾರ್ಗದಲ್ಲಿ ಕಡಿಮೆ ಬಸ್ ಗಳಿದ್ದು ಈ ಮಾರ್ಗದಲ್ಲಿ ಸಂಚರಿಸುವ ಕೆಎಸ್‌ಆರ್‌ಟಿಸಿ ವೋಲ್ವೋ ಬಸ್ ಗಳು ವಿಜಯಪುರ ಟೌನ್ ಬಸ್ ಸ್ಟಾಂಡ್ ಮೂಲಕ ಹಾದುಹೋದರೆ ಇಲ್ಲಿನ ಪ್ರಯಾಣಿಕರಿಗೆ ಹೆಚ್ಚು ಅನುಕೂಲವಾಗಲಿದ್ದು ಅಗತ್ಯ ಕ್ರಮ ವಹಿಸಿ ಎಂದರು.

ರಾಷ್ಟ್ರೀಯ ಹೆದ್ದಾರಿ 44 ರ ಮೂಲಕ ಸಂಚರಿಸುವ ಬೆಂಗಳೂರು-ಚಿಕ್ಕಬಳ್ಳಾಪುರ ಕೆಎಸ್ಆರ್‌ಟಿಸಿ ಬಸ್‌ಗಳು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಬಳಿಯ ಕನ್ನಮಂಗಲ ಗೇಟ್ ಬಳಿ, ವೆಂಕಟಗಿರಿಕೋಟೆ, ಆವತಿ ಬಳಿ ನಿಲ್ಲಿಸದೇ ಹಾಗೇ ಹೊರಡುತ್ತವೆ ಎಂದು ಸ್ಥಳೀಯ ಮುಖಂಡರು ಪ್ರಶ್ನಿಸಿದ್ದು, ಬಸ್ ನಿಲ್ಲಿಸದೇ ಉದ್ದೇಶಪೂರ್ವಕವಾಗಿ ಹೊರಟರೇ ಅಂತಹ ಡ್ರೈವರ್ ಅನ್ನು ಅಮಾನತುಗೊಳಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು. ಎಲ್ಲೆಲ್ಲಿ ಬಸ್ ಅವಶ್ಯಕತೆ ಇದೆ ಇವಿಎಂ ಮೂಲಕವೇ ಅಲ್ಲವೇ? ಹಾಗಾದರೆ ಕಾಂಗ್ರೆಸ್ ಹೇಗೆ ಅಧಿಕಾರಕ್ಕೆ ಬಂತು? ನಾವು ಸೋತಿದ್ದು ಹೇಗೆ?' ತೆಲಂಗಾಣ ಮತ್ತು ಇತ್ತೀಚೆಗೆ ಕೇರಳದಲ್ಲಿ ಕಾಂಗ್ರೆಸ್ ಹೇಗೆ ಅಧಿಕಾರಕ್ಕೆ ಬಂತು? ಅಲ್ಲೂ ಕೂಡ ಇದೇ ಇವಿಎಂ ಬಳಸಿರಲಿಲ್ಲವೇ ಎಂದು ಪ್ರಶ್ನಿಸಿದರು.

ಇದೀಗ ರಾಜಸ್ಥಾನದಲ್ಲಿ ನಡೆದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನಗಳನ್ನು ಪಡೆದುಕೊಂಡು ಆಯ್ಕೆಯಾಗಿದೆ. ಈಗಲೂ ಚುನಾವಣಾ ಆಯೋಗದ ಮುಖ್ಯ ಆಯುಕ್ತರನ್ನು ರಾಜೀನಾಮೆ ಕೊಡು ಎಂದು ಕೇಳುವಿರಾ? ನಿಮಗೆ ಮಾನ ಮರ್ಯಾದೆ ಏನಾದರೂ ಅಲ್ಲಿ ಬಸ್ ವ್ಯವಸ್ಥೆ ಕಲ್ಪಿಸಿ, ಬಸ್ ನಿಲುಗಡೆ ವ್ಯವಸ್ಥೆ ಇರುವ ಕಡೆ ಕಡ್ಡಾಯವಾಗಿ ಬಸ್ ನಿಲ್ಲಿಸಿ ಪ್ರಯಾಣಿಕರನ್ನು ಕರೆದುಕೊಂಡು ಹೋಗಬೇಕು, ಈ ಸೂಚನೆ ಪಾಲಿಸದೇ ಇದ್ದಲ್ಲಿ ಅಂತವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಬಳಿಕ ಮುಖಂಡರ ಸಭೆ ನಡೆಸಿದ ಸಚಿವರು ಚಿಳಿಗಾಲದ ಅಧಿವೇಶನ ಡಿಸೆಂಬರ್ 02 ರಿಂದ ಪ್ರಾರಂಭವಾಗಲಿದೆ. ಅದಕ್ಕೂ ಮುನ್ನ ಮಾಸಾಂತ್ಯದೊಳಗೆ ಪ್ರತಿ ಗ್ರಾಮ ಪಂಚಾಯಿತಿಗೆ 10 ಲಕ್ಷ ಅನುದಾನ ನೀಡಿ ಭಾರತ್ ಜೋಡೋ ಸಂಘಗಳ ಕಾರ್ಯಾರಂಭ ಗೊಳಿಸಲು ಮುಖ್ಯಮಂತ್ರಿ ತೀರ್ಮಾನಿಸಿದ್ದಾರೆ. ಪಕ್ಷಾತೀತವಾಗಿ ಎಲ್ಲಾ ಯುವ ಸಮೂಹ ಈ ಸಂಘಗಳಲ್ಲಿ ಸೇರ್ಪಡೆಗೊಳ್ಳ ಬಹುದು. ಕಲೆ ಸಂಸ್ಕೃತಿ, ಸಾಹಿತ್ಯ, ಕ್ರೀಡೆ ಕ್ಷೇತ್ರದಲ್ಲಿ ಯುವ ಸಮೂಹವನ್ನು ಒಗ್ಗೂಡಿಸುವಂತ ಕೆಲಸ ಈ ಸಂಘ ಮಾಡಲಿದೆ. ಇನ್ನು ಭಾರತ್ ಜೋಡೋ ಸಂಘಗಳಿಗೆ ಕಾರ್ಯಕಾರಿ ಸಮಿತಿ ರಚನೆಯಾಗಬೇಕಿದ್ದು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಒಂದು ಸಮಿತಿ ರಚಿಸಿ ಬೇಕಿರುವುದರಿಂದ ಶೀಘ್ರ ಆಯಾ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಿತಿಗೆ ಹೆಸರುಗಳನ್ನು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗೆ ನೀಡಿ ಎಂದು ಮುಖಂಡರಿಗೆ ಸೂಚಿಸಿದರು.

ಗ್ರಾಮಗಳಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮುಖ್ಯಮಂತ್ರಿಗಳು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 50 ಕೋಟಿಗೂ ಹೆಚ್ಚು ಅನುದಾನ ನೀಡಲಿದ್ದಾರೆ, ಯಾವ ಗ್ರಾಮಗಳಲ್ಲಿ ಯಾವೆಲ್ಲ ಕೆಲಸಗಳು ಆಗಬೇಕು ಅವುಗಳ ಪಟ್ಟಿ ಸಿದ್ದಪಡಿಸಿ ಆದಷ್ಟು ಬೇಗ ಆ ಕೆಲಸಗಳನ್ನು ಸಹ ಪ್ರಾರಂಭ ಮಾಡಬೇಕಿದೆ ಎಂದರು.

ತಾಲ್ಲೂಕು ಆಸ್ಪತ್ರೆಗಳಲ್ಲಿ ಕನಿಷ್ಠ ಐದು ಐಸಿಯು: ಆರೋಗ್ಯ ಸಚಿವ ಖಾದರ್



ಬೀದರ್, ನ. 23: ರಾಜ್ಯದಲ್ಲಿರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ತಾಲ್ಲೂಕು ಆರೋಗ್ಯ ಕೇಂದ್ರಗಳನ್ನು ಬಲಪಡಿಸಲು ಸರ್ಕಾರ ಮುಂದಾಗಿದ್ದು, ತಾಲ್ಲೂಕು ಆಸ್ಪತ್ರೆಗಳಲ್ಲಿ ಕನಿಷ್ಠ ಐದು ಐಸಿಯು ಬೆಡ್ ವ್ಯವಸ್ಥೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಹೇಳಿದರು.

ನಗರದ ಗುರುನಾನಕ ಝರಾ ಸಾಹೀಬ್‌ಗೆ ಭೇಟಿ ನೀಡಿದ ನಂತರ ಮಧ್ಯಮಗಳೊಂದಿಗೆ ಮಾತನಾಡಿದ ಅವರು, ಐದು ಐಸಿಯು ಹಾಸಿಗೆ, ಟೆಲಿಮೆಡಿಸಿನ್ ಆರಂಭಿಸಲಾಗುವುದು. ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಲಪಡಿಸುವುದರಿಂದ ಜಿಲ್ಲಾಸ್ಪತ್ರೆಗಳ ಮೇಲಿನ ಹೊರೆ ತಪ್ಪಲಿದೆ. ಜನರಿಗೆ ಸ್ಥಳೀಯವಾಗಿ ಉತ್ತಮ ಆರೋಗ್ಯ ಸೇವೆ ಲಭಿಸಲಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಸಾವಿರ ವೈದ್ಯರ ನೇಮಕಾತಿಗೆ ಈಗಾಗಲೇ ಸಂಪುಟ ಒಪ್ಪಿಗೆ ಕೊಟ್ಟಿದೆ. ಇದಾದ ನಂತರ ಎರಡನೇ ಹಂತದ ನೇಮಕಾತಿ ನಡೆಯಲಿದೆ. ವೈದ್ಯರೊಂದಿಗೆ ನರ್ಸ್, ಲ್ಯಾಬ್ ಟೆಕ್ನಿಷಿಯನ್, 'ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಿಕೊಳ್ಳಲಾಗುವುದು. ಆಹಾರ ಸುರಕ್ಷತೆಗೆ, ಮೆಡಿಕಲ್‌ಗಳಲ್ಲಿ ಔಷಧಿಗೆ ಸಂಬಂಧಿಸಿದಂತೆ ಯಾವುದಾದರೂ ದೂರುಗಳಿದ್ದರೆ ಅದನ್ನು ದಾಖಲಿಸಲು ಕ್ಯೂಆರ್ ಕೋಡ್ ಮಾಡಲಾಗಿದೆ. ಅದರ ಮೂಲಕ ಸಾರ್ವಜನಿಕರು ದೂರು ಸಲ್ಲಿಸಬಹುದು. ದೂರು ಬಂದ ತಕ್ಷಣ ಅಧಿಕಾರಿಗಳು ಗಮನಿಸಿ ಕ್ರಮ ಕೈಗೊಳ್ಳುತ್ತಾರೆ. ಹೋಟೆಲ್, ಮೆಡಿಕಲ್ ಸೇರಿದಂತೆ ಎಲ್ಲ ಮಳಿಗೆಗಳವರು ಈ ಕ್ಯೂಆರ್ ಕೋಡ್ ಹಾಕಬೇಕು. ಜನರಿಗೆ ತಿಳಿಸಬೇಕು. ಈ ವಿಷಯದ ಬಗ್ಗೆ ಜ್ಞಾನ ಇರುವವರನ್ನು ಒಳಗೊಂಡ ತಜ್ಞರ ತಂಡವನ್ನು ತಾಲ್ಲೂಕು ಮಟ್ಟದಲ್ಲಿ ರಚಿಸಿ, ನಿಗಾ ವಹಿಸುವುದರ ಬಗ್ಗೆ ಚಿಂತನೆ ನಡೆದಿದೆ ಎಂದರು.

ಉಪ್ಪು, ಸಕ್ಕರೆ ಮತ್ತು ಬಳಸಿದ ಅಡುಗೆ ಎಣ್ಣೆ ಮರು ಬಳಕೆಯಿಂದ ಕಾಯಿಲೆಗಳು ಹೆಚ್ಚಾಗಿ ಬರುತ್ತಿವೆ. ಒಂದು ಸಲ ಬಳಸಿದ ಅಡುಗೆಎಣ್ಣೆ ಮತ್ತೊಮ್ಮೆ ಬಳಸಬಾರದು. ಅದನ್ನು ಬೇರೆಯವರಿಗೂ ಮಾರಾಟ ಮಾಡಬಾರದು. ಇದರ ಮೇಲೆ ನಿಗಾ ವಹಿಸಲು ಆ್ಯಪ್ ಅಭಿವೃದ್ಧಿಪಡಿಸಲಾಗಿದೆ. ರಾಜ

ಗುಣಮಟ್ಟದಲ್ಲಿ ರಾಜಿ ಇಲ್ಲವೇ ಇಲ್ಲ: ಸಚಿವ ಯು.ಟಿ.ಖಾದರ್ ಸ್ಪಷ್ಟೋಕ್ತಿ



ಬೀದರ್, ನ.23– ವಿದ್ಯಾರ್ಥಿಗಳಿಗೆ ವಿತರಿಸುವ ಬಿಸಿ ಊಟ, ಸಮವಸ್ತ್ರ, ಬ್ಯಾಗ್ ಮತ್ತು ಶೂಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಅಳತೆಗೆ ಸರಿಹೊಂದದ ಅಥವಾ ಕಳಪೆ ಗುಣಮಟ್ಟದ ಸಾಮಗ್ರಿಗಳು ಪೂರೈಕೆಯಾದರೆ, ಅವುಗಳನ್ನು ಮಕ್ಕಳಿಗೆ ವಿತರಿಸದೆ ತಕ್ಷಣವೇ ವಾಪಸ್ ಕಳುಹಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಯು.ಟಿ.ಖಾದರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಾಂಶುಪಾಲರು ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗಬೇಕು. ವಿದ್ಯಾರ್ಥಿಗಳಿಗೆ ಖಾಸಗಿ ಶಾಲೆಗಳಿಗಿಂತಲೂ ಉತ್ತಮ ಸೌಲಭ್ಯಗಳು ದೊರೆಯುವಂತೆ ನೋಡಿಕೊಳ್ಳಬೇಕು. ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆ ಇರುವುದರಿಂದ ಹೊಸ ಶಾಲೆಗಳನ್ನು ಮಂಜೂರು ಮಾಡುವ ಬದಲು, ಈಗಾಗಲೇ ಇರುವ ಮೌಲಾನಾ ಆಜಾದ್ ವಸತಿ ಶಾಲೆಗಳ ಖಾಲಿ ಸೀಟುಗಳನ್ನು ಭರ್ತಿ ಮಾಡಿ ಗುಣಮಟ್ಟದ ಶಿಕ್ಷಣ ನೀಡಲು ಆದ್ಯತೆ ನೀಡಬೇಕು ಎಂದರು.

ದೈಹಿಕ ಶಿಕ್ಷಣ ಶಿಕ್ಷಕರಿಗೆ 10 ದಿನಗಳ ತರಬೇತಿ ನೀಡಿ, ಕಬಡ್ಡಿ, ಖೋ-ಖೋ, ಫುಟ್‌ಬಾಲ್ ಹಾಗೂ ಕ್ರಿಕೆಟ್‌ನಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಯಾವುದೇ ಪ್ರಭಾವಕ್ಕೆ ಮಣಿಯದೆ ಆಯ್ಕೆ ಮಾಡಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ತಂಡಗಳನ್ನು ರೂಪಿಸಬೇಕು. ಪ್ರತಿ ಶಾಲೆಯಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಆರಂಭಿಸಬೇಕು. ಗಣ್ಯರು ಜಿಲ್ಲೆಗೆ ಆಗಮಿಸಿದಾಗ ವಸತಿ ಶಾಲೆಯ ಮಕ್ಕಳ ಬ್ಯಾಂಡ್ ತಂಡವೇ ಗೌರವ ವಂದನೆ ಸಲ್ಲಿಸುವಂತಾಗಬೇಕು. ಮಕ್ಕಳ ಪ್ರತಿಭೆ ಅನಾವರಣಗೊಳಿಸಲು ಶಾಲಾ ಹಾಗೂ ಜಿಲ್ಲಾ ಮಟ್ಟದಲ್ಲಿ ಸ್ಪರ್ಧೆಗಳನ್ನು ಆಯೋಜಿಸಬೇಕು ಎಂದು ನಿರ್ದೇಶನ ನೀಡಿದರು. ಮುಂದಿನ ಶೈಕ್ಷಣಿಕ ವರ್ಷದಿಂದ ಎಲ್ಲ ಹಾಸ್ಟೆಲ್ ಮತ್ತು ಶಾಲೆಗಳಲ್ಲಿ ಎಐ ಆಧಾರಿತ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ವಾರ್ಡನ್‌ಗಳ ಹಾಜರಾತಿ ಹಾಗೂ ಅಡುಗೆಮನೆಯ ಸ್ವಚ್ಛತೆಯ ಮೇಲೆ ನಿಗಾ ಇಡಲಾಗುವುದು. ಸಿಬ್ಬಂದಿ ಕೊರತೆ ನೀಗಿಸಲು ಎಂಟು ಗಂಟೆಗಳ ಪಾಳಿ ವ್ಯವಸ್ಥೆ ಜಾರಿಗೊಳಿಸುವುದರ ಜೊತೆಗೆ ಹೆಚ್ಚುವರಿ ಸಿಬ್ಬಂದಿ ನೇಮಕಾತಿಗೆ ಕ್ರಮ ಕೈಗೊಳ್ಳಬೇಕು. ಬಾಕಿ ಇರುವ ವಿದ್ಯಾರ್ಥಿವೇತನದ ದಾಖಲೆಗಳನ್ನು ಕೇಂದ್ರ ಕಚೇರಿಯೊಂದಿಗೆ ಸಮನ್ವಯ ಸಾಧಿಸಿ ಶೀಘ್ರ ಇತ್ಯರ್ಥಪಡಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಆಸ್ಪತ್ರೆಗಳ ನಿರ್ವಹಣೆಗೆ ಒತ್ತು: ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ವಿವಿಧ ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಿತಿಗತಿ ಕುರಿತು ಸಚಿವರು ವಿಸ್ತೃತ ಚರ್ಚೆ ನಡೆಸಿದರು. ಆಸ್ಪತ್ರೆಗಳಲ್ಲಿ ನರ್ಸ್‌ಗಳ ಕೊರತೆ ಇಲ್ಲದಿದ್ದರೂ, ಕೆಲವೆಡೆ ಆಂಬ್ಯುಲೆನ್ಸ್ ಚಾಲಕರ ಕೊರತೆಯಿದೆ. ಈ ಸಮಸ್ಯೆ ನಿವಾರಿಸಲು ಹೊರಗುತ್ತಿಗೆ ಆಧಾರದ ಮೇಲೆ ಅಥವಾ ಡಿ-ಗ್ರೂಪ್ ಸಿಬ್ಬಂದಿಯ ಮೂಲಕ ಸೇವೆ ಸುಗಮಗೊಳಿಸಲು ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಬಸವಕಲ್ಯಾಣ, ಹುಮನಾಬಾದ್, ಭಾಲ್ಕಿ ಮತ್ತು ಔರಾದ್ ತಾಲೂಕು ಆಸ್ಪತ್ರೆಗಳು ಹಾಗೂ ಎಂಸಿಎಚ್ ಆಸ್ಪತ್ರೆಗಳ ಹೊರರೋಗಿ, ಒಳರೋಗಿ ಮತ್ತು ಹೆರಿಗೆ ಸೇವೆಗಳ ಪ್ರಗತಿ ಕುರಿತು ಮಾಹಿತಿ ಪಡೆದರು. ರಾತ್ರಿ ವೇಳೆ ಅಥವಾ ತುರ್ತು ಸಂದರ್ಭಗಳಲ್ಲಿ ದಾಖಲಾಗುವ ಹೈ-ರಿಸ್ಕ್ ಪ್ರಕರಣಗಳನ್ನು ಸ್ಥಳೀಯವಾಗಿಯೇ ನಿರ್ವಹಿಸಲು ಫಿಸಿಷಿಯನ್‌ಗಳ ಕೊರತೆ ನೀಗಿಸಬೇಕು. ಎಚ್‌ಡಿಯು ಹಾಗೂ ಪೀಡಿಯಾಟ್ರಿಕ್ ಐಸಿಯು ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಂಸದ ಸಾಗರ್ ಖಂಡ್ರೆ ಮಾತನಾಡಿ, ಜಿಲ್ಲೆಯ ಜನರಿಗೆ ಉತ್ತಮ ಆರೋಗ್ಯ ಸೇವೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಮನೆ ಬಾಗಿಲಿಗೆ ತೆರಳಿ ಜನರ ಸಮಸ್ಯೆಗಳ ಪರಿಹಾರ: ಶಾಸಕ ಬಸನಗೌಡ ದದ್ದಲ್



ರಾಯಚೂರು, ನ. 23: ಜನರ ಸಮಸ್ಯೆಗಳನ್ನು ಮನೆಬಾಗಿಲಿಗೆ ತೆರಳಿ ಆಲಿಸಿ, ಸ್ಥಳದಲ್ಲೇ ಪರಿಹಾರ ಒದಗಿಸುವ ಪ್ರಾಮಾಣಿಕ ಪ್ರಯತ್ನವನ್ನು ಪ್ರಜಾಸೇವಾ ಆಂದೋಲನದ ಮೂಲಕ ಮಾಡಲಾಗುತ್ತಿದೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಹೇಳಿದರು.

ಮಳೆ ಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರದಿಂದ ತಲಾ ?2,500 ತಕ್ಷಣದ ನೆರವು ಜಮೆ ಮಾಡಲಾಗುತ್ತಿದೆ. ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಗರಿಷ್ಠ ಎರಡು ಹೆಕ್ಟೇರ್‌ವರೆಗೆ ಬೆಳೆ ನಷ್ಟ ಪರಿಹಾರ ವಿತರಿಸಲಾಗುವುದು ಎಂದರು.

ಬಸಪ್ಪ ಗುಂಜಳ್ಳಿ ಕೆರೆ ತುಂಬಿಸುವ ಯೋಜನೆಯಡಿ ತುಂಗಭದ್ರಾ ನದಿಯಿಂದ ನೀರು ತಂದು ಯರಗೇರಾ ಸೇರಿದಂತೆ ವಿವಿಧ ಕೆರೆಗಳನ್ನು ತುಂಬಿಸುವ ರೂ.150 ಕೋಟಿ ವೆಚ್ಚದ ಕಾಮಗಾರಿ ಶೇ 95ರಷ್ಟು ಪೂರ್ಣಗೊಂಡಿದೆ. ಶೀಘ್ರದಲ್ಲೇ ಯೋಜನೆ ಉದ್ಘಾಟಿಸಿ ಕೆರೆಗಳಿಗೆ ನೀರು ಹರಿಸಲಾಗುವುದು. ಇದರಿಂದ ಅಂತರ್ಜಲ ಹೆಚ್ಚಳವಾಗಿ ಕುಡಿಯುವ ನೀರು ಹಾಗೂ ಕೃಷಿಗೆ ಅನುಕೂಲವಾಗಲಿದೆ ಎಂದರು.

ಯರಗೇರಾವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸುವ ಮನವಿಗೆ ಮುಖ್ಯಮಂತ್ರಿ ಸಕಾರಾತ್ಮಕ ವಾಗಿ ಸ್ಪಂದಿಸಿದ್ದು, ಜನಗಣತಿ ಪ್ರಕ್ರಿಯೆ ಹಿನ್ನೆಲೆಯಲ್ಲಿ ಮುಂದಿನ ಬೆಳವಣಿಗೆ ಗಳನ್ನು ಗಮನಿಸಲಾಗುತ್ತಿದೆ ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸೋಮ ಲಿಂಗ ಗೋಪಾಲ ಗೆಣ್ಣೂರ ಪ್ರಾಸ್ತಾವಿಕವಾಗಿ ಮಾತನಾಡಿ, 'ಜಿಲ್ಲೆಯಲ್ಲಿ ಈವರೆಗೆ 40 ಪ್ರಜಾಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸ್ವೀಕೃತವಾದ ಅರ್ಜಿಗಳ ಪೈಕಿ 1,881 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಕಂದಾಯ ಇಲಾಖೆಗೆ ಸಂಬಂಧಿಸಿದ 1,593 ಅರ್ಜಿಗಳಲ್ಲಿ 1,407 ಅರ್ಜಿಗಳನ್ನು ಇತ್ಯರ್ಥ ಪಡಿಸಲಾಗಿದೆ. ಬಾಕಿ ಇರುವ 186 ಅರ್ಜಿಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ' ಎಂದರು.

ಬಳ್ಳಾರಿ ಪೊಲೀಸ್ ವಾರ್ಷಿಕ ಕ್ರೀಡಾಕೂಟ ನಾಳೆ ಚಾಲನೆ



ಬಳ್ಳಾರಿ,ನ.23.ಕರ್ನಾಟಕ ರಾಜ್ಯ ಪೊಲೀಸ್ ಹಾಗೂ ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿರುವ ?ವಾರ್ಷಿಕ ಕ್ರೀಡಾಕೂಟ – 2026' ನವೆಂಬರ್ 25 ರಿಂದ ನವೆಂಬರ್ 27 ದವರೆಗೆ ನಗರದ ಡಿ.ಎ.ಆರ್. ಆವರಣದಲ್ಲಿರುವ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಮೂರು ದಿನಗಳ ಕಾಲ ನಡೆಯಲಿದೆ.

ಉದ್ಘಾಟನಾ ಸಮಾರಂಭ:

ನವೆಂಬರ್ 25 ರಂದು ಬೆಳಿಗ್ಗೆ 8 ಗಂಟೆಗೆ ಕ್ರೀಡಾಕೂಟದ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಉದ್ಘಾಟಿಸಲಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಹಾಗೂ ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಬಸವರಾಜ ಕೆ.ಎನ್. ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಮಾರೋಪ ಸಮಾರಂಭ:

ಮೂರು ದಿನಗಳ ಕಾಲ ನಡೆಯುವ ಈ ಕ್ರೀಡಾಕೂಟದ ಸಮಾರೋಪ ಸಮಾರಂಭವು ನವೆಂಬರ್ 27 ರಂದು ಸಂಜೆ 4.30 ಗಂಟೆಗೆ ಇದೇ ಮೈದಾನದಲ್ಲಿ ನಡೆಯಲಿದೆ. ಕಾರ್ಯಕ್ರಮಕ್ಕೆ ಪೊಲೀಸ್ ಮಹಾನಿರೀಕ್ಷಕರಾದ ಡಾ. ಪಿ.ಎಸ್. ಹರ್ಷ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ. ಸುಮನ್ ಡಿ. ಪೆನ್ನೇಕರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ನವೀನ್ ಕುಮಾರ್ ಎನ್. ಹಾಗೂ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ನೌಕಾನೆಲೆ ಜಾಗದಲ್ಲಿ ಕಾಣಿಸಿಕೊಂಡ ಬೆಂಕಿ ದಟ್ಟಹೊಗೆಯಿಂದ ಆತಂಕಗೊಂಡ ಜನರು



ಅಂಕೋಲಾ, ನ.23– ತಾಲೂಕಿನ ಹಟ್ಟಿಕೇರಿಯ ಟೋಲ್‌ಗೇಟ್ ಬಳಿ ನೌಕಾನೆಲೆಗೆ ಸೇರಿದ್ದ ಹತ್ತಾರು ಎಕರೆ ಜಾಗದಲ್ಲಿ ಸೋಮವಾರ ಬೆಂಕಿ ಕಾಣಿಸಿಕೊಂಡಿದ್ದು ದಟ್ಟಹೊಗೆಯಾಗಿ ಚತುಷ್ಪಥ ಹೆದ್ದಾರಿಯನ್ನೇ ಆವರಿಸಿ ಕೊಂಡಿತ್ತು. ಈ ದಟ್ಟಣೆಯ ಹೊಗೆಯಲ್ಲಿಯೂ ವಾಹನದವರು ನುಗ್ಗುತ್ತಿರುವುದು ಚಾಲಕನ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಒಂದೊಮ್ಮೆ ಮುಂಭಾಗದಲ್ಲಿ ಯಾವುದಾದರೂ ವಾಹನವಿದ್ದರೆ ಅಪಘಾತ ಕಟ್ಟಿಟ್ಟ ಬುತ್ತಿಯಾಗಿತ್ತು. ಹಟ್ಟಿಕೇರಿ ನೌಕಾನೆಲೆ ಜಾಗದಲ್ಲಿ ಹುಲ್ಲುಗಳು ಬೆಳೆದು ಕೊಂಡಿದ್ದವು. ಹಾಗೇ ಸಣ್ಣಪುಟ್ಟ ಗಿಡಮರಗಳು ಕೂಡ ಇದ್ದುದರಿಂದಾಗಿ ಉದ್ದೇಶ ಪೂರ್ವಕವೋ ಅಥವಾ ನಿರ್ಲಕ್ಷ್ಯ ಧೋರಣೆಯಿಂದಲೊ ಅಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಒಣಗಿದ ಹುಲ್ಲು ಇರುವುದರಿಂದ ಬೆಂಕಿ ಹಾಗೂ ಹೊಗೆ ಕ್ಷಣಾರ್ಧದಲ್ಲಿಯೇ ವೇಗವಾಗಿ ಸುಡಲಾರಂಭಿಸಿತು.

ಇದರಿಂದಾಗಿ ಗಿಡಮರಗಳು ಹೊರತುಪಡಿಸಿ ಬೇರೆ ಯಾವುದೇ ಹಾನಿಯಾಗಿಲ್ಲ. ನಂತರ ಅಗ್ನಿಶಾಮಕ ಮತ್ತು ನೌಕಾನೆಲೆಗೆ ಸಂಬಂಧಿಸಿದ ಅಗ್ನಿಶಾಮಕ ಆಗಮಿಸಿ ಬೆಂಕಿಯನ್ನು ನಿಂದಿಸಲು ಸ್ವಲ್ಪಮಟ್ಟಿಗೆ ಪರದಾಡ ಬೇಕಾಯಿತು. ಆದರೆ ಇಡೀ ರಸ್ತೆಯನ್ನೇ ಹೊಗೆಯು ಆವರಿಸಿ ಕೊಂಡಿದ್ದರಿಂದಾಗಿ ಕೆಲವು ವಾಹನ ಸವಾರರು ನಿಂತು ಹಿಂದಕ್ಕೆ ಗಾಡಿಯನ್ನು ತೆಗೆದುಕೊಂಡು ಹೊಗೆ ನಿಂತ ನಂತರ ತೆರಳಿದರು. ಆದರೆ ಕೆಲವರು ಆ ದಟ್ಟಹೊಗೆಯಲ್ಲಿ ಮುಂದೆ ಏನು ಇದೆ ಎನ್ನುವುದು ತಿಳಿಯದೇ ತೆರಳುತ್ತಿರುವುದು ಅವರ ಬೇಜವಾಬ್ದಾರಿಗೆ ಹಿಡಿದ ಕೈಗನ್ನಡಿಯಂತಾಗಿದೆ.

ನೀರಿಗಾಗಿ ಹಾಹಾಕಾರ, ನೀರೇ ಬಾರದ ನಲ್ಲಿಗಳಿಗೂ ನಿರಂತರ ಬಿಲ್ ಕಟ್ಟಬೇಕೆ

ಕಲಬುರಗಿ, ನ. 23: ನಗರದ ವಿವಿಧ ಬಡಾವಣೆಗಳಲ್ಲಿ ನಿಯಮಿತವಾಗಿ ಕುಡಿಯುವ ನೀರು ಸರಬರಾಜು ಆಗುತ್ತಿಲ್ಲ. ಇಡೀ ನಗರದಲ್ಲಿ ನೀರಿಗಾಗಿ ಹಾಹಾಕರ ಉಂಟಾಗಿ ಕುಡಿಯುವ ನೀರು ಬರದಿದ್ದರೂ ನಿಯಮಿತವಾಗಿ ಬಿಲ್ ಮಾತ್ರ ಬರುತ್ತಿದೆ!

ಈ ವರ್ಷ ಮಳೆ ಬಂದಿಲ್ಲ ನಿಜ. ಕಳೆದ ವರ್ಷ ಪ್ರವಾಹ ಬಂದಿತ್ತು ಆಗಲೂ ನಾಲ್ಕು ದಿನಗಳಿಗೊಮ್ಮೆ ನೀರು ಬಿಡಲಾಗುತ್ತಿತ್ತು. ಈ ವರ್ಷ ಅದನ್ನು ಐದು ದಿನಕ್ಕೊಮ್ಮೆ ಎಂದು ಬದಲಾಯಿಸಿದ್ದರು. ಈಗ ಆ ಐದು ದಿನಗಳಿಗೊಮ್ಮೆಯೂ ನೀರು ಬರುತ್ತಿಲ್ಲ. ಅನೇಕ ವರ್ಷಗಳಿಂದ ನೀರಿನ ಬದಲು, ಬಿಲ್ ಮಾತ್ರ ನಿರಂತರ ನಿಯಮಿತವಾಗಿ ಬರುತ್ತಿದೆ. ನಿತ್ಯ ಕುಡಿಯುವ ನೀರಿಗಾಗಿ ಪರಿತಪಿಸುತ್ತಿರುವ ನಿವಾಸಿಗಳಿಗೆ ನೀರಿನ ಬಿಲ್ ಗಾಯದ ಮೇಲೆ ಬರೆ ಎಳೆದಂತಾಗಿದೆ.

ನಗರದ ವಿವಿಧ ಬಡಾವಣೆಗಳಲ್ಲಿ ಸುಮಾರು 10 ವರ್ಷಗಳ ಹಿಂದೆ ಕುಡಿಯುವ ನೀರಿನ ಪೈಪಲೈನ್ ಮಾಡಲಾಗಿದೆ. ಆದರೆ, ಯುಜಿಡಿ ಪೈಪ್‌ಲೈನ್ ಕಾಮಗಾರಿ ಕೈಗೆತ್ತಿಕೊಂಡಾಗ ಅನೇಕ ಕಡೆಗಳಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಒಡೆದು ಹಾಕಲಾಗಿದೆ. ಇದರಿಂದ ಬಡಾವಣೆಯ ಮನೆಗಳಿಗೆ ಸಮರ್ಪಕವಾಗಿ ನೀರು ಪೂರೈಕೆಯಾಗುತ್ತಿಲ್ಲ.

ಪೈಪ್‌ಲೈನ್ ಹಾಳಾಗಿ ಹಲವು ವರ್ಷಗಳಿಂದ ನೀರು ಬರದಿದ್ದರೂ ಕೆಲ ಮನೆಗಳಿಗೆ 20 ಸಾವಿರದಿಂದ 25 ಸಾವಿರದ ವರೆಗೆ ನೀರಿನ ಬಿಲ್ ಬಾಕಿ ಇದೆ ಎಂದು ಬಿಲ್ ನೀಡಲಾಗುತ್ತಿದೆ. ಸಮರ್ಪಕವಾಗಿ ನೀರು ಪೂರೈಕೆಯಾಗದಿದ್ದರೂ ಇಷ್ಟೊಂದು ಮೊತ್ತದ ಬಿಲ್ ಪಾವತಿಸಿ ಎಂಬುದು ಯಾವ ನ್ಯಾಯ? ಎಂದು ನಿವಾಸಿಗಳು ಅಳಲು ತೋಡಿಕೊಂಡರು.

ನೀರು ಸರಬರಾಜು ಆಗದಿದ್ದರೂ ನೀರಿನ ಬಿಲ್ ಮಾತ್ರ ನೀಡಲಾಗುತ್ತಿದೆ. ಈ ಬಗ್ಗೆ ಪಾಲಿಕೆ ಅಧಿಕಾರಿಗಳನ್ನು ವಿಚಾರಿಸಿದರೆ ಕೆಯುಐಡಿಎಫ್‌ಸಿಗೆ (ಜಲ ಭವನ) ಹೋಗುವಂತೆ ಹೇಳುತ್ತಾರೆ. ಕೆಯುಐಡಿಎಫ್‌ಸಿ ಅಧಿಕಾರಿಗಳು ಎಲ್ ಆಂಡ್ ಟಿ ಕಂಪನಿಯನ್ನು ಕೇಳಲು ಹೇಳುತ್ತಾರೆ. ಬಡಾವಣೆ ನಿವಾಸಿಗಳನ್ನು ಅಲೆದಾಡುವಂತೆ ಮಾಡುತ್ತಿದ್ದಾರೆ. ಯಾರೊಬ್ಬರೂ ಸರಿಯಾದ ಉತ್ತರ ನೀಡುವದಿಲ್ಲ ಎಂದು ನಿವಾಸಿಗಳು ದೂರಿದರು.

ಪೋಷಕರ ಕನಸುಗಳನ್ನು ನನಸು ಮಾಡುವತ್ತ ವಿವಿಧ ಕೌಶಲ್ಯಗಳನ್ನು ಬೆಳೆಸಿಕೊಂಡು ಉದ್ಯಮಿಗಳಾಗಿ: ನಾರಾ ಸೂರ್ಯನಾರಾಯಣರೆಡ್ಡಿ



ಬಳ್ಳಾರಿ ನ 23. ಬಳ್ಳಾರಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ವೀ. ವಿ. ಸಂಘದ ಅಲ್ಲಂ ಕರಿಬಸಪ್ಪ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ 2024-26 ನೇ ಬ್ಯಾಚ್‌ನ ವಿದ್ಯಾರ್ಥಿಗಳಿಗೆ ಪದವಿ ಸಮಾರಂಭ ಕಾರ್ಯಕ್ರಮವನ್ನು ಆಯೋಜಿಸ ಲಾಗಿತ್ತು.

ಸದ್ರಿ ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾಗಿ ನಾರಾ ಸೂರ್ಯ ನಾರಾಯಣ ರೆಡ್ಡಿ, ಮಾಜಿ ಶಾಸಕರು ಹಾಗೂ ಮಾಲೀಕರು, ಶ್ರೀ ರಾಘವೇಂದ್ರ ಎಂಟರ್‌ಪ್ರೈಸಸ್ ಮತ್ತು ಇಂಡಿಯನ್ ಮಿನರಲ್ಸ್ ಮತ್ತು ಗ್ರಾನೈಟ್ ಕಂಪನಿ, ಬಳ್ಳಾರಿ ಹಾಗೂ ಸಿ ಎ ಸಿ. ಎರ?ರಿಸ್ವಾಮಿ, ಚಿಲಕರಾಯ & ಕಂ. ಇವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ಗಳಿಗೆ ಎಂಬಿಎ ಸ್ನಾತಕೋತ್ತರ ಪದವಿಯ ಮಹತ್ವವನ್ನು ತಿಳಿಸಿದರು. ನಾರಾ ಸೂರ್ಯ ನಾರಾಯಣ ರೆಡ್ಡಿಯವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ಪೋಷಕರ ಕನಸುಗಳನ್ನು ನನಸು ಮಾಡುವತ್ತ ವಿವಿಧ ಕೌಶಲ್ಯಗಳನ್ನು ಬೆಳೆಸಿಕೊಂಡು ಸ್ವಂತ ಉದ್ಯಮಿ ಗಳಾಗಬೇಕು ಇಂದಿನ ವಿದ್ಯಾಮಾನಗಳಲ್ಲಿ ಅನೇಕ ಭಾಷೆಗಳನ್ನು ಕಲಿಯಬೇಕು ಉದ್ಯೋಗಕ್ಕಾಗಿ ಬೇರೆ ಕಡೆ ಹೋಗದೇ ಬಳ್ಳಾರಿಯಲ್ಲಿ ಸಾಕಷ್ಟು ಸೌಲಭ್ಯಗಳು ಇವೆ ಇಲ್ಲೇ ನೀವು ಲಭ್ಯವಿರುವ ಎಲ್ಲಾ ಸೌಕರ್ಯಗಳನ್ನು ಬಳಸಿಕೊಂಡು ಸಣ್ಣ ಮತ್ತು ಮಧ್ಯಮ ವರ್ಗದ ಕೈಗಾರಿಕಾ ಘಟಕಗಳನ್ನು ಸ್ಥಾಪಿಸಿ ಉದ್ಯೋಗಗಳನ್ನು ಸೃಷ್ಟಿಸಬೇಕೆಂದು ಕರೆಕೊಟ್ಟರು. ಲೆಕ್ಕ ಪರಿಶೋಧಕರಾದ ಸಿ ಎ ಸಿ ಎರ?ರಿಸ್ವಾಮಿ ಅವರು ವಿದ್ಯಾರ್ಥಿಗಳು ಕೇವಲ ಪದವಿಗೋಸ್ಕರ ವಿದ್ಯಾರ್ಜನೆ ಮಾಡಬಾರದು ದೇಶಕೋಸ್ಕರ ನಿರಂತರ ಸೇವೆ ಮತ್ತು ಕೊಡುಗೆಯನ್ನು ನೀಡುವತ್ತ ಸಂಕಲ್ಪ ಮಾಡಬೇಕು. ಜಾಗತಿಕ ಮಟ್ಟದಲ್ಲಿ ಉದ್ಯೋಗಕ್ಕಾಗಿ ಸ್ಪರ್ಧಾತ್ಮಕತೆ ಇದೆ ಅದನ್ನು ಹೇಗೆ ಎದುರಿಸಿ ಗುರಿಯನ್ನು ತಲುಪಬೇಕು ಎಂಬುದನ್ನು ನೀವು ಅರಿಯಬೇಕು. ಆನ್ಲೈಲ್ ಕೋರ್ಸಗಳಿಂದ ಇವತ್ತು ವಿದ್ಯಾರ್ಥಿಗಳು ಭೌತಿಕ ತರಗತಿಗಳ ಬೋಧನಾ ವ್ಯವಸ್ಥೆಗೆ ಹೊಂದ

ಭಾರತ ವಿರುದ್ಧ ಚೀನಾ-ಬಾಂಗ್ಲಾ ಭಾಯಿಭಾಯಿ



- ಕ್ಷಿಪಣಿ ತಯಾರಿಸುವ ತಂತ್ರಜ್ಞಾನವೇ ಗೊತ್ತಿಲ್ಲದ ಬಾಂಗ್ಲಾದೇಶಕ್ಕೆ 405 ಟನ್ ರಾಸಾಯನಿಕ ರವಾನೆಗೆ ಡ್ರ್ಯಾಗನ್ ಸ್ಕೆಚ್
- ಉತ್ತರ ಸುಮಾತ್ರಾದ ಬೆಲಾವನ್ ಕರಾವಳಿಯಲ್ಲಿ ಚೀನಾದಿಂದ ಬಾಂಗ್ಲಾದೇಶಕ್ಕೆ ಹೊರಟಿದ್ದ ಹಡಗು ವಶ

ಬೆಲಾವನ್ (ಇಂಡೋನೇಷ್ಯಾ), ನ.23: ಜಾಗತಿಕ ರಾಜಕೀಯದಲ್ಲಿ ಯಾರನ್ನೇ ನಂಬಿದರೂ, ಚೀನಾವನ್ನು ಮಾತ್ರ ನಂಬಬಾರದು ಎಂಬ ಮಾತು ಆಗಾಗ ಕೇಳಿಬರುತ್ತಲೇ ಇರುತ್ತದೆ. ಇದಕ್ಕೆ ಕಾರಣವೂ ಇದೆ; ತನ್ನ ಸುತ್ತಲಿನ ಬಹುತೇಕ ಎಲ್ಲಾ ರಾಷ್ಟ್ರಗಳೊಂದಿಗೆ ಚೀನಾ ಒಂದಿಲ್ಲೊಂದು ಭೂ ಅಥವಾ ಜಲ ಗಡಿ ವಿವಾದವನ್ನು ಕಟ್ಟಿಕೊಂಡಿದೆ. ಅದರಲ್ಲೂ ಭಾರತ, ತೈವಾನ್ ಹಾಗೂ ಫಿಲಿಪೈನ್ಸ್ ವಿಚಾರದಲ್ಲಿ ಸದಾ ಕುತಂತ್ರ ಹೂಡುವ ಈ 'ಡ್ರ್ಯಾಗನ್' ರಾಷ್ಟ್ರ, ಇದೀಗ ಭಾರತದ ವಿರುದ್ಧ ಮತ್ತೊಂದು ದೊಡ್ಡ ಷಡ್ಯಂತ್ರಕ್ಕೆ ಕೈಹಾಕಿದೆಯೇ. ಅಷ್ಟೇ ಅಲ್ಲ, ಈ ಬಾರಿ ಚೀನಾದ ಈ ಕುತಂತ್ರಕ್ಕೆ ನೆರೆಯ ಬಾಂಗ್ಲಾದೇಶ ಕೂಡ ಕೈಜೋಡಿಸಿದೆಯೇ ಎಂಬ ಬಲವಾದ ಅನುಮಾನ ಮೂಡಿದೆ!

ಎಲ್ಲ ಅನುಮಾನಗಳಿಗೆ ಕಾರಣವೆಂದರೆ, ಸ್ವಂತ ಕ್ಷಿಪಣಿ ತಯಾರಿಕಾ ಘಟಕಗಳೇ ಇಲ್ಲದಿದ್ದರೂ, ಚೀನಾ ಬಾಂಗ್ಲಾದೇಶಕ್ಕೆ ರಹಸ್ಯವಾಗಿ 405 ಟನ್ ಸೋಡಿಯಂ ಪರ್ಕ್ಲೋರೇಟ್ ಎಂಬ ಕ್ಷಿಪಣಿ ಇಂಧನ ತಯಾರಿಕಾ ರಾಸಾಯನಿಕ ಮತ್ತು ಲಕ್ಷಾಂತರ ಅನಧಿಕೃತ ಸಿಮ್‌ಕಾರ್ಡ್‌ಗಳನ್ನು ಸಾಗಿಸುತಿತ್ತು. ಆದರೆ, ಸುಮಾರು 100 ಕ್ಷಿಪಣಿಗಳನ್ನು ತಯಾರಿಸಲು ಸಾಕಾಗುವ ಈ ರಾಸಾಯನಿಕಗಳನ್ನು ಇಂಡೋನೇಷ್ಯಾ ನೌಕಾಪಡೆ ದಾರಿ ಮಧ್ಯದಲ್ಲಿ ವಶಪಡಿಸಿಕೊಂಡಿದೆ. ಆ ಕುರಿತ ವರದಿ ಇಲ್ಲಿದೆ:

ಹಡಗು ತಡೆಹಿಡಿದಿದ್ದು ಹೇಗೆ?

ಕೊಮೊರೊಸ್ ದೇಶದ ಧ್ವಜ ಹೊಂದಿದ್ದ ಎಂವಿ ಸ್ಟಾರ್ ಲೈನ್ ಎಂಬ ಹಡಗು ಚೀನಾದ ಲಿಯಾನ್ಯುಂಗಾಂಗ್ ಬಂದರಿನಿಂದ ಬಾಂಗ್ಲಾದೇಶದ ಮೊಂಗ್ಲಾ ಬಂದರಿಗೆ ತೆರಳುತ್ತಿತ್ತು. ನ.7ರಂದು ಇಂಡೋನೇಷ್ಯಾದ ಉತ್ತರ ಸುಮಾತ್ರಾದ ಬೆಲಾವನ್ ಕರಾವಳಿಯಲ್ಲಿ ಹಡಗಿನ ಅನುಮಾನಾಸ್ಪದ ಚಲನವಲನ ಮತ್ತು ರೇಡಿಯೋ ಸಂಪರ್ಕಕ್ಕೆ ಸ್ಪಂದಿಸದಿರುವುದನ್ನು ಗಮನಿಸಿದ ಇಂಡೋನೇಷ್ಯಾ ನೌಕಾಪಡೆಯ 'ಕೆಆರ್‌ಐ ಸಿಗಾಲು-857' ಗಸ್ತು ನೌಕೆಯು ಅದನ್ನು ತಡೆದು ಪರಿಶೀಲಿಸಿದೆ.

ಈ ವೇಳೆ ಹಡಗಿನಲ್ಲಿದ್ದ 36 ಕಂಟೇನರ್‌ಗಳ ಪೈಕಿ 15 ಕಂಟೇನರ್‌ಗಳಲ್ಲಿ 405 ಟನ್ ಸೋಡಿಯಂ ಪರ್ಕ್ಲೋರೇಟ್ ಪತ್ತೆಯಾಗಿದೆ. ಇದರೊಂದಿಗೆ 54 ಪ್ಯಾಲೆಟ್‌ಗಳಲ್ಲಿ 40 ಲಕ್ಷಕ್ಕೂ ಹೆಚ್ಚು ನೋಂದಣಿಯಾಗದ ಖಾಲಿ 4G LTE ಸಿಮ್ ಕಾರ್ಡ್‌ಗಳು ಪತ್ತೆಯಾಗಿವೆ. ಏತನ್ಮಧ್ಯೆ, ಹಡಗಿನ ನೋಂದಣಿ ಪರವಾನಗಿ ಅಮಾನತುಗೊಂಡಿದ್ದರೂ, 2027ರವರೆಗೆ ಮಾನ್ಯತೆ ಇದೆ ಎಂದು ನಕಲಿ ದಾಖಲೆಗಳನ್ನು ತೋರಿಸಲಾಗಿತ್ತು. ಅಲ್ಲದೆ, ಅಪಾಯಕಾರಿ ರಾಸಾಯನಿಕ ಸಾಗಣೆಯ ಕುರಿತು ಸರಕು ಪಟ್ಟಿಯಲ್ಲಿ ಯಾವುದೇ ಮಾಹಿತಿಯನ್ನು ಘೋಷಿಸಿರಲಿಲ್ಲ.

ಕ್ಷಿಪಣಿ ತಯಾರಿಸುವ ಮೂಲಸೌಕರ್ಯವೇ ಇಲ್ಲದ ಬಾಂಗ್ಲಾದೇಶಕ್ಕೆ ಇಷ್ಟೊಂದು ಬೃಹತ್ ಪ್ರಮಾಣದ ಕ್ಷಿಪಣಿ ರಾಸಾಯನಿಕ ಮತ್ತು ಲಕ್ಷಾಂತರ ಸಿಮ್ ಕಾರ್ಡ್‌ಗಳನ್ನು ಏಕೆ ರವಾನಿಸಲಾಗುತ್ತಿತ್ತು ಎಂಬುದು ದಕ್ಷಿಣ ಏಷ್ಯಾ ವಲಯದಲ್ಲಿ ತೀವ್ರ ಭದ್ರತಾ ಆತಂಕಕ್ಕೆ ಕಾರಣವಾಗಿದೆ. ಈ ಸರಕನ್ನು ಬಾಂಗ್ಲಾದೇಶದಲ್ಲಿ ಯಾರು ಆಮದು ಮಾಡಿಕೊಳ್ಳುತ್ತಿದ್ದರು ಎಂಬುದರ ಕುರಿತು ಇಂಡೋನೇಷ್ಯಾ ಅಧಿಕಾರಿಗಳು ಹಡಗಿನ ಸಿಬ್ಬಂದಿಯನ್ನು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.

ಇತ್ತೀಚಿನ ಕೆಲವು ಬೆಳವಣಿಗೆಗಳು, ವಿಶೇಷವಾಗಿ ರಹಸ್ಯ ಕ್ಷಿಪಣಿ ಸಾಮಗ್ರಿ ಸಾಗಣೆ, ಚೀನಾದ ವ್ಲಾಗರ್‌ಗಳ ಅಪಪ್ರಚಾರ ಹಾಗೂ ಬಾಂಗ್ಲಾದೇಶದಲ್ಲಿ ಹೆಚ್ಚುತ್ತಿರುವ ಚೀನಾದ ಮಿಲಿಟರಿ ಮತ್ತು ಆರ್ಥಿಕ ಹಸ್ತಕ್ಷೇಪಗಳು ಭಾರತದ ಭದ್ರತಾ ವಲಯದಲ್ಲಿ ತೀವ್ರ ಆತಂಕ ಮೂಡಿಸಿವೆ. ಅದರಲ್ಲೂ, ಬಾಂಗ್ಲಾದೇಶವು ನೇರವಾಗಿ ಭಾರತ ವಿರೋಧಿ ನಿಲುವು ತಳೆಯದಿದ್ದರೂ, ಚೀನಾದ ಕೆಲವು ಚಟುವಟಿಕೆಗಳಿಗೆ ಬಾಂಗ್ಲಾದೇಶದ ನೆಲ ಬಳಕೆಯಾಗುತ್ತಿರುವುದು ಮತ್ತು ರಕ್ಷಣಾ ಒಪ್ಪಂದಗಳು ಭಾರತಕ್ಕೆ ಸವಾಲಾಗಿ ಪರಿಣಮಿಸಿವೆ.

ಏತನ್ಮಧ್ಯೆ, ಬಾಂಗ್ಲಾದೇಶಕ್ಕೆ ಬ್ಯಾಲಿಸ್ಟಿಕ್ ಕ್ಷಿಪಣಿ ತಯಾರಿಸುವ ತಂತ್ರಜ್ಞಾನವಿಲ್ಲ. ಆದ್ದರಿಂದ, ಈ ರಾಸಾಯನಿಕಗಳನ್ನು ಬಾಂಗ್ಲಾದೇಶದ ಮೂಲಕ ಭಾರತದ ಈಶಾನ್ಯ ರಾಜ್ಯಗಳಲ್ಲಿ ಸಕ್ರಿಯವಾಗಿರುವ ಪ್ರತ್ಯೇಕತಾವಾದಿ ಸಂಘಟನೆಗಳಿಗೆ (ಉದಾಹರಣೆಗೆ ಉಲ್ಫಾ) ಅಥವಾ ಮ್ಯಾನ್ಮಾರ್‌ನ ಬಂಡುಕೋರ ಗುಂಪುಗಳಿಗೆ ಕಳ್ಳಸಾಗಣೆ ಮಾಡುವ ಹುನ್ನಾರವಿತ್ತೇ ಎಂಬ ಅನುಮಾನ ಮೂಡಿದೆ. ಯಾಕಂದ್ರೆ, 2004ರಲ್ಲಿ ಬಾಂಗ್ಲಾದೇಶದಲ್ಲಿ ವಶಪಡಿಸಿಕೊಳ್ಳಲಾಗಿದ್ದ 10 ಟ್ರಕ್‌ಗಳಷ್ಟು ಭಾರಿ ಶಸ್ತ್ರಾಸ್ತ್ರಗಳು ಅಸ್ಸಾಂನ ಉಲ್ಫಾ ಉಗ್ರರಿಗಾಗಿ ಸಾಗಿಸಲಾಗುತ್ತಿತ್ತು ಎಂಬುದು ತನಿಖೆಯಲ್ಲಿ ಸಾಬೀತಾಗಿತ್ತು. ಹಾಗಾಗಿ, ಈಗಿನ ಘಟನೆಯು ಅದೇ ರೀತಿಯ ಕರಾಳ ಇತಿಹಾಸವನ್ನು ಮತ್ತೆ ನೆನಪಿಸುತ್ತಿದೆ.

ಭಾರತದಲ್ಲಿ ಎಷ್ಟು ಭಾಷೆಗಳಿವೆ?: ಪ್ರಧಾನಿ ಮೋದಿ ಉತ್ತರ ಕೇಳಿ ಅಚ್ಚರಿಗೊಂಡ ರಷ್ಯಾ ಅಧ್ಯಕ್ಷ ಪುಟಿನ್!



ನವದೆಹಲಿ, ನ.23: ಭಾರತದ ಭಾಷಾ ವೈವಿಧ್ಯತೆ ಮತ್ತು ಪ್ರಾಚೀನ ನಾಗರಿಕತೆಯ ಬಗ್ಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮೆಚ್ಚುಗೆ ವ್ಯಕ್ತಪಡಿಸಿದ್ದು, ಭಾರತದಲ್ಲಿ ಬಳಕೆಯಲ್ಲಿರುವ ಭಾಷೆಗಳ ಕೇಳಿ ಅಚ್ಚರಿಗೊಂಡಿದ್ದಾರೆ.

ರಷ್ಯಾದ ಸುದ್ದಿ ಸಂಸ್ಥೆ ಸ್ಪುತ್ನಿಕ್‌ಗೆ ನೀಡಿದ ಸಂದರ್ಶನದಲ್ಲಿ ಸರ್ಬಿಯಾದ ಚಲನಚಿತ್ರ ನಿರ್ದೇಶಕ ಎಮಿರ್ ಕುಸ್ತುರಿಕಾ ಅವರು ಪುಟಿನ್ ಅವರೊಂದಿಗೆ ಸಂವಾದ ನಡೆಸಿದ್ದಾರೆ. 'ಅವರ್ ಬ್ಯಾಪ್ಟಿಸಂ' ಎಂಬ ಸಾಕ್ಷ್ಯಚಿತ್ರಕ್ಕಾಗಿ ನಡೆದ ಈ ಸಂದರ್ಶನದಲ್ಲಿ ಪುಟಿನ್ ಭಾರತದ ನಾಗರಿಕತೆಯ ಬಗ್ಗೆ ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಡೆಸಿದ ಮಾತುಕತೆಯೊಂದನ್ನು ಮೆಲುಕು ಹಾಕಿದ ಪುಟಿನ್, ಭಾರತದಲ್ಲಿ ಎಷ್ಟು ಮಂದಿ ಅಧಿಕೃತ ಭಾಷೆ ಮಾತನಾಡುತ್ತಾರೆ ಎಂಬ ತಮ್ಮ ಪ್ರಶ್ನೆಗೆ ಮೋದಿ ನೀಡಿದ ಉತ್ತರ ಅಚ್ಚರಿ ಮೂಡಿಸಿತ್ತು. ಮೋದಿ ಅವರು 60 ಕೋಟಿ ಜನರು ಮಾತನಾಡುತ್ತಾರೆ ಎಂದು ಉತ್ತರಿಸಿದ್ದರು. ಬಳಿಕ ಭಾರತದ ಒಟ್ಟು ಜನಸಂಖ್ಯೆ ಎಷ್ಟು ಎಂದು ಕೇಳಿದಾಗ ಸುಮಾರು 150 ಕೋಟಿ ಎಂದು ತಿಳಿಸಿದ್ದರು ಎಂದು ಪುಟಿನ್ ನೆನಪಿಸಿಕೊಂಡಿದ್ದಾರೆ.

ಅಂದರೆ ಭಾರತದ ಜನಸಂಖ್ಯೆಯ ಮೂರನೇ ಒಂದು ಭಾಗದಷ್ಟು ಜನರು ಮಾತ್ರ ಅಧಿಕೃತ ಭಾಷೆಯನ್ನು ಮಾತನಾಡುತ್ತಾರೆ. ಉಳಿದ ಮೂರನೇ ಎರಡರಷ್ಟು ಜನರು ತಮ್ಮದೇ ಆದ ಭಾಷೆಗಳನ್ನು ಮಾತನಾಡುತ್ತಾರೆ ಎಂಬುದನ್ನು ಈ ಮಾತುಕತೆ ಮೂಲಕ ಅರ್ಥಮಾಡಿಕೊಂಡಿದ್ದಾಗಿ ಪುಟಿನ್ ಹೇಳಿದ್ದಾರೆ.

"ಇದು ನಿಜಕ್ಕೂ ಅದ್ಭುತವಲ್ಲವೇ? ಬಹಳ ಆಸಕ್ತಿದಾಯಕವಾಗಿದೆ" ಎಂದು ಭಾರತದ ಬಹುಭಾಷಾ ಸಂಸ್ಕೃತಿಯನ್ನು ಪುಟಿನ್ ಮೆಚ್ಚಿಕೊಂಡಿದ್ದಾರೆ. ಹಾಗೂ ಭಾರತ ವಿಶ್ವದ ಅತ್ಯಂತ ಪ್ರಾಚೀನ ನಾಗರಿಕತೆಗಳಲ್ಲಿ ಒಂದಾಗಿದೆ. ಭಾರತದ ಬಗ್ಗೆ ಹೆಚ್ಚು ತಿಳಿದುಕೊಂಡಷ್ಟೂ ಅದರ ಬಗ್ಗೆ ನನ್ನ ಆಸಕ್ತಿ ಮತ್ತು ಕುತೂಹಲ ಹೆಚ್ಚಾಗುತ್ತಿದೆ" ಎಂದು ಹೇಳಿದ್ದಾರೆ.

ಮಾತುಕತೆ ವಿಫಲವಾದರೆ ಮತ್ತೆ ಇರಾನ್ ಮೇಲೆ ವಾಯುದಾಳಿ: ಟ್ರಂಪ್ ಎಚ್ಚರಿಕೆ



ವಾಷಿಂಗ್ಟನ್, ನ.23: ಇರಾನ್ ಜೊತೆಗಿನ ರಾಜತಾಂತ್ರಿಕ ಮಾತುಕತೆಗಳು ಒಪ್ಪಂದಕ್ಕೆ ಬರಲು ವಿಫಲವಾದರೆ ಹೊಸ ವರ್ಷದ ಬಳಿಕ ಮತ್ತೊಮ್ಮೆ ಇರಾನ್ ಮೇಲೆ ಸೇನಾ ದಾಳಿ ನಡೆಸುವ ಸಾಧ್ಯತೆಯಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.

ಟೆಹ್ರಾನ್ ಜೊತೆ ನಡೆಯುತ್ತಿರುವ ಮಾತುಕತೆಗಳನ್ನು ಅರ್ಥಹೀನ ಎಂದು ಟೀಕಿಸಿರುವ ಅವರು, ಇರಾನ್ ಉದ್ದೇಶಪೂರ್ವಕವಾಗಿ ಮಾತುಕತೆಗಳನ್ನು ಎಳೆಯುತ್ತಿದೆ ಎಂದು ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಚುನಾವಣೆಗೆ ಮೊದಲು ಇದ್ದುದಕ್ಕಿಂತ ಈಗ ಅವರು ಹೆಚ್ಚು ಆಕ್ರಮಣಕಾರಿಯಾಗಿದ್ದಾರೆ" ಎಂದು ಹೇಳಿದ್ದಾರೆ. ಇದೇ ವೇಳೆ ಇರಾನ್‌ನ ಮಾತುಕತೆ ಪ್ರತಿನಿಧಿಗಳನ್ನು ಟೀಕಿಸಿದ ಅವರು, ಅವರನ್ನು 'ವೃತ್ತಿಪರ ಡ್ಯಾನ್ಸರ್‌ಗಳು' ಎಂದು ವ್ಯಂಗ್ಯವಾಡಿದ್ದಾರೆ.

ಅವರು ಯಾವಾಗಲೂ ಮಾತನಾಡುತ್ತಲೇ ಇರುತ್ತಾರೆ. ಅವರ ಕೆಲಸವೇ ಮಾತನಾಡದು. ಆದರೆ ಆ ಮಾತುಗಳೆಲ್ಲ ಅಸಂಬದ್ಧ" ಎಂದು ಹೇಳುವ ಮೂಲಕ ಮಾತುಕತೆಯಲ್ಲಿ ಯಾವುದೇ ಪ್ರಗತಿ ಕಾಣದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ ಇರಾನ್ ಬಂದರುಗಳ ಮೇಲೆ ಅಮೆರಿಕ ಹೇರಿರುವ ನೌಕಾ ದಿಗ್ಬಂಧನವನ್ನು ಉಲ್ಲಂಘಿಸಲು ಪ್ರಯತ್ನಿಸುವ ಯಾವುದೇ ಇರಾನ್ ಹಡಗುಗಳ ಮೇಲೆ ಅಮೆರಿಕದ ಸೇನಾಪಡೆಗಳು ದಾಳಿ ನಡೆಸಲಿವೆ ಎಂದು ನೇರ ಎಚ್ಚರಿಕೆ ನೀಡಿದ್ದಾರೆ.

ಅಮೆರಿಕದ ನೌಕಾಪಡೆಯ ಉಪಸ್ಥಿತಿಗೆ ಇರಾನ್ ಪಡೆಗಳು ಅಡ್ಡಿಪಡಿಸಲು ಪ್ರಯತ್ನಿಸಿದರೆ ತೀವ್ರ ಪರಿಣಾಮ ಎದುರಿಸಬೇಕಾಗುತ್ತದೆ. ಅವರು ಹಾಗೆ ಮಾಡಲಿ ಎಂದು ನಾನು ಆಶಿಸುತ್ತೇನೆ. ಅವರ ನೌಕಾಪಡೆಯ ಉಳಿದ ಹಡಗುಗಳಂತೆ ಅವುಗಳೂ ಸಮುದ್ರದ ತಳ ಸೇರುತ್ತವೆ ಎಂದು ಹೇಳಿದ್ದಾರೆ.

ಅಲ್ಲದೆ, ವಿದ್ಯುತ್ ಕಡಿತದಂತಹ ಆಂತರಿಕ ಸಮಸ್ಯೆಗಳ ವಿರುದ್ಧ ಇರಾನ್‌ನಲ್ಲಿ ನಡೆಯುತ್ತಿರುವ ಸರ್ಕಾರಿ ವಿರೋಧಿ ಪ್ರತಿಭಟನೆಗಳನ್ನು ಬೆಂಬಲಿಸಿರುವ ಟ್ರಂಪ್, ಇಸ್ಲಾಮಿಕ್ ಗಣರಾಜ್ಯದ ವಿರುದ್ಧ ಹೋರಾಟ ಮುಂದುವರಿಸುವಂತೆ ಪ್ರತಿಭಟನಾಕಾರರಿಗೆ ಕರೆ ನೀಡಿದ್ದಾರೆ.

ಅಮೆರಿಕದಲ್ಲಿ ಬಂದೂಕುಧಾರಿಗಳಿಂದ ಪ್ರತ್ಯೇಕ ಗುಂಡಿನ ದಾಳಿ



ಫ್ರೆಸ್ನೊ (ಕ್ಯಾಲಿಫೋರ್ನಿಯಾ), ಟಿ.23: ಅಮೆರಿಕದಲ್ಲಿ ಎರಡು ಪ್ರತ್ಯೇಕ ಗುಂಡಿನ ದಾಳಿ ಘಟನೆಗಳು ನಡೆದಿದ್ದು, ಓಹಿಯೋದಲ್ಲಿ ಬೇಬಿ ಶವರ್ ಕಾರ್ಯಕ್ರಮದ ವೇಳೆ ನಡೆದ ಗುಂಡಿನ ದಾಳಿಗೆ ಮೂವರು ಮೃತಪಟ್ಟಿದ್ದಾರೆ. ಮತ್ತೊಬ್ಬರು ಗಾಯಗೊಂಡಿದ್ದಾರೆ. ಮತ್ತೊಂದೆಡೆ ಕ್ಯಾಲಿಫೋರ್ನಿಯಾದ ಮಧ್ಯಭಾಗದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಒಂಬತ್ತು ಮಂದಿಗೆ ಗುಂಡು ತಗುಲಿ ಗಾಯಗೊಂಡಿದ್ದಾರೆಂದು ಅಧಿಕಾರಿಗಳು ತಿಳಿಸಿದ್ದಾರೆ.

ಓಹಿಯೋದಲ್ಲಿ ಶನಿವಾರ ಸಂಜೆ ಈ ಘಟನೆ ನಡೆದಿದೆ. ಕ್ಲೀವ್‌ಲ್ಯಾಂಡ್‌ನಿಂದ 16 ಕಿ.ಮೀ. ದಕ್ಷಿಣದಲ್ಲಿರುವ ಪಾರ್ಮಾ ಪ್ರದೇಶದ ಪಂಡೋರಾಸ್ ಮ್ಯಾಜಿಕಲ್ ಇವೆಂಟ್ಸ್ ವೇನ್ಯೂನಲ್ಲಿ ಗುಂಡಿನ ದಾಳಿ ನಡೆದಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಲಭಿಸಿತ್ತು. ಕೌಟುಂಬಿಕ ಕಲಹವೇ ಘಟನೆಗೆ ಕಾರಣವಾಗಿರಬಹುದು ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ.

ಗುಂಡಿನ ದಾಳಿ ನಡೆಸಿದವರಲ್ಲಿ ಒಬ್ಬನಾದ 29 ವರ್ಷದ ವ್ಯಕ್ತಿಯನ್ನು ವಶಕ್ಕೆ ಪಡೆಯಲಾಗಿದೆ. ಆದರೆ, ಆತನ ವಿರುದ್ಧ ತಕ್ಷಣಕ್ಕೆ ಯಾವುದೇ ಆರೋಪ ದಾಖಲಿಸಿಲ್ಲ.

ಆತನೇ ಮೊದಲು ದಾಳಿ ನಡೆಸಿದ್ದನೇ ಅಥವಾ ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದ್ದನೇ ಎಂಬುದನ್ನು ಪತ್ತೆಹಚ್ಚಲು ತನಿಖಾಧಿಕಾರಿಗಳು ಮುಂದಾಗಿದ್ದಾರೆ ಎಂದು ಪೊಲೀಸ್ ವಕ್ತಾರ ಸ್ಕಾಟ್ ಟ್ರಾಕ್ಸ್ಲರ್ ತಿಳಿಸಿದ್ದಾರೆ. ಗುಂಡಿನ ದಾಳಿಯಲ್ಲಿ ಮೃತಪಟ್ಟವರಲ್ಲಿ 19 ವರ್ಷದ ಮತ್ತೊಬ್ಬ ಶಂಕಿತ ಆರೋಪಿಯೂ ಸೇರಿದ್ದಾನೆ. ಮೃತರಲ್ಲಿ 17 ವರ್ಷದ ಲೀಸಿಯಾ ಇಂಗ್ಲೆಂಡ್ ಮತ್ತು 45 ವರ್ಷದ ಜೇಸನ್ ಟೌನ್‌ಸೆಂಡ್ ಅವರನ್ನು ಅಧಿಕಾರಿಗಳು ಗುರುತಿಸಿದ್ದಾರೆ. ಬೇಬಿ ಶವರ್ ಕಾರ್ಯಕ್ರಮ ಯಾರಿಗಾಗಿ ಆಯೋಜಿಸಲಾಗಿತ್ತೋ ಆ ಮಹಿಳೆಯ ತಂದೆಯೇ ಟೌನ್‌ಸೆಂಡ್. ಆ ಮಹಿಳೆಗೆ ಯಾವುದೇ ಗಾಯಗಳಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಗುಂಡಿನ ದಾಳಿಯಲ್ಲಿ ಮೃತಪಟ್ಟ 19 ವರ್ಷದ ಶಂಕಿತ ಆರೋಪಿ ಹಾಗೂ ಕಾಲಿಗೆ ಗುಂಡು ತಗುಲಿರುವ 39 ವರ್ಷದ ಮಹಿಳೆಯ ಹೆಸರುಗಳನ್ನು ಅಧಿಕಾರಿಗಳು ಬಹಿರಂಗಪಡಿಸಿಲ್ಲ.ಪ್ರಾಥಮಿಕ ಮಾಹಿತಿಯ ಪ್ರಕಾರ, ಮೃತಪಟ್ಟ 19 ವರ್ಷದ ಯುವಕ ಹುಟ್ಟಲಿರುವ ಮಗುವಿನ ತಂದೆಯಾಗಿದ್ದು, ಆತನಿಗೆ ಬೇಬಿ ಶವರ್ ಕಾರ್ಯಕ್ರಮಕ್ಕೆ ಆಹ್ವಾನ ನೀಡಿರಲಿಲ್ಲ ಎಂದು ಸಾಕ್ಷಿಗಳು ತಿಳಿಸಿದ್ದಾರೆ. ವಶಕ್ಕೆ ಪಡೆದಿರುವ 29 ವರ್ಷದ ವ್ಯಕ್ತಿ ಗರ್ಭಿಣಿ ಮಹಿಳೆಯ ಸಂಬಂಧಿಕನಾಗಿರಬಹುದು ಎಂದು ಟ್ರಾಕ್ಸ್ಲರ್ ಹೇಳಿದ್ದಾರೆ. ವಶಕ್ಕೆ ಪಡೆದಿರುವ ವ್ಯಕ್ತಿಯ ವಿರುದ್ಧ ಕ್ರಿಮಿನಲ್ ಆರೋಪ ದಾಖಲಿಸಬೇಕೇ ಎಂಬುದನ್ನು ಅಂತಿಮವಾಗಿ ಸರ್ಕಾರಿ ಅಭಿಯೋಜಕರು ನಿರ್ಧರಿಸಲಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಸಂಗೀತ ಕಾರ್ಯಕ್ರಮದಲ್ಲಿ ಗುಂಡಿನ ದಾಳಿ

ಮತ್ತೊಂದು ಘಟನೆ ಕ್ಯಾಲಿಫೋರ್ನಿಯಾದ ಮಧ್ಯಭಾಗದ ಸ್ಟಾಥ್‌ಮೋರ್ ಎಂಬ ಪುಟ್ಟ ಪಟ್ಟಣದಲ್ಲಿ ನಡೆದಿದೆ. ಶನಿವಾರ ಸಂಜೆ 150 ಮಂದಿ ಭಾಗವಹಿಸಿದ್ದ ಸಂಗೀತ ಕಾರ್ಯಕ್ರಮದಲ್ಲಿ ಗುಂಡಿನ ದಾಳಿ ನಡೆದಿದ್ದು, ಒಂಬತ್ತು ಮಂದಿ ಗಾಯಗೊಂಡಿದ್ದಾರೆ ಎಂದು ಟುಲೇರ್ ಕೌಂಟಿ ಶೆರಿಫ್ ಇಲಾಖೆ ತಿಳಿಸಿದೆ.

ಶನಿವಾರ ಸಂಜೆ ಸುಮಾರು 7.30ಕ್ಕೆ ಅಪರಿಚಿತ ಸಂಖ್ಯೆಯ ದುಷ್ಕರ್ಮಿಗಳು ಜನರ ಗುಂಪಿನ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಈವರೆಗೆ ಯಾರನ್ನೂ ಬಂಧಿಸಿರುವ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ. ದಾಳಿಯಲ್ಲಿ 26 ವರ್ಷದ ಯುವಕನ ಎದೆಗೆ ಗುಂಡು ತಗುಲಿದ್ದು, ಆತನಿಗೆ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಸದ್ಯ ಆತನ ಸ್ಥಿತಿ ಗಂಭೀರವಾಗಿದೆ. 19 ಮತ್ತು 22 ವರ್ಷದ ಇನ್ನಿಬ್ಬರಿಗೂ ಶಸ್ತ್ರಚಿಕಿತ್ಸೆ ಅಗತ್ಯವಾಗಿದ್ದು, ಉಳಿದ ಆರು ಮಂದಿ ಸಣ್ಣಪುಟ್ಟ ಗಾಯಗಳಿಗೆ ಒಳಗಾಗಿದ್ದಾರೆ ಎಂದು ತಿಳಿಸಿದೆ. ಈ ಗುಂಡಿನ ದಾಳಿಯ ಹಿಂದೆ ಗ್ಯಾಂಗ್‌ಗಳ ಕೈವಾಡ ಇರಬಹುದು ಎಂದು ಅಧಿಕಾರಿಗಳು ಶಂಕಿಸಿದ್ದಾರೆ. ಆದರೆ, ಈ ಕುರಿತು ಹೆಚ್ಚಿನ ವಿವರಗಳನ್ನು ನೀಡಿಲ್ಲ. 3,000 ಜನಸಂಖ್ಯೆ ಹೊಂದಿರುವ ಪಟ್ಟಣದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ನೆರೆಯ ರಾಜ್ಯಗಳ ಕಲಾವಿದರು ಪ್ರದರ್ಶನ ನೀಡುತ್ತಿದ್ದರು ಎಂದು ಇಲಾಖೆ ತಿಳಿಸಿದೆ.

ಅಮೆರಿಕದಲ್ಲಿ ಭಾರತೀಯ ಉದ್ಯೋಗಿಗಳ ವಲಸೆ ದತ್ತಾಂಶ ಹ್ಯಾಕ್?

ವಾಷಿಂಗ್ಟನ್, ನ.23: ಐಟಿ ಸಂಸ್ಥೆಯಾದ 'ಪರ್ಸಿಸ್ಟೆಂಟ್ ಸಿಸ್ಟಮ್ಸ್' ವಲಸೆ ಸಂಬಂಧಿತ ಕಾರ್ಯಗಳಿಗಾಗಿ ತಾನು ನಿಯೋಜಿಸಿದ್ದ ಅಮೆರಿಕದ ಕಾನೂನು ಸಂಸ್ಥೆಯೊಂದರಲ್ಲಿ ಸೈಬರ್ ಸಮಸ್ಯೆಯೊಂದು ಎದುರಾಗಿರಬಹುದು ಎಂದು ಸೋಮವಾರ ತಿಳಿಸಿದೆ.

ಈ ಘಟನೆಯಲ್ಲಿ ತನ್ನ ಕೆಲವು ಉದ್ಯೋಗಿಗಳ ವಲಸೆ ಸಂಬಂಧಿತ ದತ್ತಾಂಶಗಳು ಬಹಿರಂಗಗೊಂಡಿರಬಹುದು ಎಂದು ಶಂಕಿಸಲಾಗಿದೆ. ಆದರೆ, ತಮ್ಮ ಸ್ವಂತ ವ್ಯವಸ್ಥೆಗಳು ಸುರಕ್ಷಿತವಾಗಿವೆ ಮತ್ತು ವ್ಯವಹಾರ ಕಾರ್ಯಾಚರಣ